ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 298
22–5–2025 ಗುರುವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 298

## ಮತ್ತೆ ಕೊರೊನಾ ಆತಂಕ

### ರಾಜ್ಯದಲ್ಲಿ 8 ಸೇರಿ ದೇಶಾದ್ಯಂತ 257 ಪ್ರಕರಣ ಪತ್ತೆ



**ಬೆಂಗಳೂರು:** ಚೀನಾದ ಹಾಂಗ್ ಕಾಂಗ್ ಮತ್ತು ಸಿಂಗಾಪುರದ ನಂತರ ಈಗ ಭಾರತದಲ್ಲೂ ಮಹಾಮಾರಿ ಕೋವಿಡ್–19 ಪಾಸಿಟಿವ್ ಪ್ರಕರಣಗಳ ಸಂಖ್ಯೆ ಮತ್ತೆ ಹೆಚ್ಚುತ್ತಿದ್ದು, ಕರ್ನಾಟದಲ್ಲಿ 8 ಪ್ರಕರಣ ಸೇರಿ ದೇಶಾದ್ಯಂತ 257 ಕೇಸ್ ಪತ್ತೆಯಾಗಿವೆ.

ರಾಜ್ಯದಲ್ಲಿ ಹೊಸದಾಗಿ 8 ಪಾಸಿಟಿವ್ ಪ್ರಕರಣಗಳು ವರದಿಯಾಗಿದ್ದು, ಇದರೊಂದಿಗೆ ಕೋವಿಡ್–19 ಸಕ್ರಿಯ ಪ್ರಕರಣಗಳ ಸಂಖ್ಯೆ 16ಕ್ಕೆ ಏರಿಕೆಯಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಹೇಳಿದ್ದಾರೆ.

ದೇಶದಲ್ಲಿ ಇದುವರೆಗೆ 257 ಪ್ರಕರಣಗಳು ಪತ್ತೆಯಾಗಿದ್ದು, ಕೇರಳದಲ್ಲಿ 69, ಮಹಾರಾಷ್ಟ್ರ 44, ತಮಿಳುನಾಡು 34, ಗುಜರಾತ್, ದೆಹಲಿ, ಹರ್ಯಾಣ, ರಾಜಸ್ಥಾನ, ಸಿಕ್ಕಿಂನಲ್ಲೂ ಪಾಸಿಟಿವ್ ಕೇಸ್‌ಗಳಿವೆ.

ಇನ್ನು ಮುಂಬೈನಲ್ಲಿ ಕೋವಿಡ್ – 19ನಿಂದಾಗಿ ಓರ್ವ ಬಾಲಕ ಸೇರಿದಂತೆ ಇಬ್ಬರು ಮೃತಪಟ್ಟಿದ್ದಾರೆ. ಆದರೆ, ಸೋಂಕಿನ ಬಗ್ಗೆ ಆತಂಕ ಪಡುವ ಅಗತ್ಯವಿಲ್ಲ ಎಂದು ಬೃಹನ್ ಮುಂಬೈ ಮಹಾನಗರ ಪಾಲಿಕೆ(ಬಿಎಂಸಿ) ತಿಳಿಸಿದೆ.

ಮೃತಪಟ್ಟ ಇಬ್ಬರಿಗೂ ಬೇರೆ ಗಂಭೀರ ಆರೋಗ್ಯ ಸಮಸ್ಯೆಗಳಿದ್ದವು. ಕೇವಲ ವೈರಸ್‌ನಿಂದ ಇವರ ಸಾವು ಸಂಭವಿಸಿಲ್ಲ ಎಂದು ಮುಂಬೈನ ಕೆಇಎಂ ಆಸ್ಪತ್ರೆ ಮತ್ತು ಬಿಎಂಸಿ ಸ್ಪಷ್ಟಪಡಿಸಿವೆ.

ಸದ್ಯ ಯಾವುದೇ ರೀತಿಯ ಗಂಭೀರವಾದ ಗುಣಲಕ್ಷಣಗಳು ಕಾಣಿಸಿಕೊಂಡಿಲ್ಲ. ಹೀಗಾಗಿ ಆತಂಕದ ಸ್ಥಿತಿ ನಿರ್ಮಾಣವಾಗಿಲ್ಲ. ಆದರೆ ನಿರ್ಲಕ್ಷ್ಯ ಬೇಡ ಎಂದು ಆರೋಗ್ಯ ಇಲಾಖೆ ತಿಳಿಸಿದ್ದು, ಎಲ್ಲ ಕಡೆ ಸಂದೇಶ ರವಾನಿಸಿದ್ದು, ಕಟ್ಟೆಚ್ಚರ ವಹಿಸಿದೆ.

## ನಾಳೆ ವಿಧುಶೇಖರಭಾರತಿ ಶ್ರೀ ನಗರಕ್ಕೆ ಭೇಟಿ

**ದಾವಣಗೆರೆ:** ಶೃಂಗೇರಿ ಪೀಠಾಧೀಶ್ವರರಾದ ಶ್ರೀ ವಿಧುಶೇಖರಭಾರತಿ ಸ್ವಾಮೀಜಿ ಅವರು ಮೇ.23 ರಂದು ಸಂಜೆ 6 ಗಂಟೆಗೆ ನಗರದ ಶ್ರೀ ಶಾರದಾಂಬ ದೇವಸ್ಥಾನಕ್ಕೆ ಆಗಮಿಸಲಿದ್ದಾರೆ.

ಶ್ರೀಗಳನ್ನು ಅಂದು ಪೂರ್ಣಕುಂಭ ಸ್ವಾಗತದೊಂದಿಗೆ ಸ್ವಾಗತಿಸಲಿದ್ದು, ಶ್ರೀಗಳಿಂದ ಆಶೀರ್ವಚನ ನಡೆಯಲಿದ್ದು, ಶ್ರೀ ಶಾರದಾಂಬ ಭಜನ ಮಂಡಳಿಯವರಿಂದ ಸ್ತೋತ್ರ ಪಠಣ, ಪ್ರಸಾದ ವಿನಿಯೋಗ ನಡೆಯಲಿದೆ. ಮೇ.24ರಂದು ಬೆಳಿಗ್ಗೆ 10 ಗಂಟೆಗೆ ಶ್ರೀಗಳಿಂದ ಫಲಮಂತ್ರಾಕ್ಷತೆ ಇರಲಿದೆ ಎಂದು ಶ್ರೀ ಶಂಕರ ಸೇವಾ ಸಂಘದ ಅಧ್ಯಕ್ಷರಾದ ಡಾ.ಬಿ.ಟಿ. ಅಚ್ಯುತ್ ತಿಳಿಸಿದ್ದಾರೆ.

## ಡಾ.ಆರ್.ಜೆ. ಪುನೀತ್ ಗೌಡ ಸರ್ಕಾರದ ಅತ್ಯುತ್ತಮ ಸಂಶೋಧನಾ ಪ್ರಶಸ್ತಿ

**ದಾವಣಗೆರೆ:** ರಾಜ್ಯ ಸರ್ಕಾರ ನೀಡುವ ಅತ್ಯುತ್ತಮ ಸಂಶೋಧನಾ ಪ್ರಶಸ್ತಿಗೆ ನಗರದ ಬಿಐಇಟಿ ಮಹಾವಿದ್ಯಾಲಯದ ಗಣಿತಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಆರ್.ಜೆ. ಪುನೀತ್ ಗೌಡ ಭಾಜನರಾಗಿದ್ದಾರೆ. ಪ್ರಶಸ್ತಿಯು 25 ಸಾವಿರ ನಗದು ಬಹುಮಾನ, ಲ್ಲೇಖ ಪತ್ರ ಮತ್ತು ಪ್ರಶಸ್ತಿ ಪತ್ರವನ್ನೊಳಗೊಂಡಿದ್ದು, ಸರ್ಕಾರವು ವಿಶ್ವವಿದ್ಯಾನಿಲಯಗಳ ಕಾಲೇಜುಗಳು, ಸಂಶೋಧನಾ ಸಂಸ್ಥೆಗಳ ಅಧ್ಯಾಪಕರು ಹಾಗೂ ಸಂಶೋಧಕರಿಗೆ ಈ ಪ್ರಶಸ್ತಿಯನ್ನು ನೀಡುತ್ತದೆ. ಈ ಪ್ರಶಸ್ತಿಗೆ ಭಾಜನರಾಗಿರುವ ಪುನೀತ್ ಗೌಡ ಅವರಿಗೆ ಬಾಪೂಜಿ ವಿದ್ಯಾಸಂಸ್ಥೆಯ ಗೌರವ ಕಾರ್ಯದರ್ಶಿ ಡಾ. ಶಾಮನೂರು ಶಿವಶಂಕರಪ್ಪ, ಗೌರವ ಜಂಟಿ ಕಾರ್ಯದರ್ಶಿ ಎಸ್.ಎಸ್. ಮಲ್ಲಿಕಾರ್ಜುನ್. ಕಾಲೇಜಿನ ಪ್ರಾಂಶುಪಾಲ ಡಾ. ಹೆಚ್.ಬಿ. ಅರವಿಂದ್, ನಿರ್ದೇಶಕರಾದ ಪ್ರೊ. ವೈ. ವೃಷಭೇಂದ್ರಪ್ಪ ಸೇರಿದಂತೆ ಕಾಲೇಜಿನ ಸಿಬ್ಬಂದಿಗಳು ಅಭಿನಂದಿಸಿದ್ದಾರೆ.

## ಇಂದು ದಿ.ಬೆಳಗೆರೆ ಕೃಷ್ಣಶಾಸ್ತ್ರಿಗಳ ಸ್ಮರಣೆ ಕಾರ್ಯಕ್ರಮ

**ದಾವಣಗೆರೆ:** ದಿ.ಬೆಳಗೆರೆ ಕೃಷ್ಣಶಾಸ್ತ್ರಿಗಳ 110ನೇ ಜನ್ಮ ದಿನದ ಅಂಗವಾಗಿ ಅವರ ಸ್ಮರಣೆ ಕಾರ್ಯಕ್ರಮವನ್ನು ಇಂದು ಸಂಜೆ 6 ಗಂಟೆಗೆ ಕೆಎಸ್ಆರ್ಟಿಸಿ ಬಸ್ ನಿಲ್ದಾಣದ ಹಿಂಭಾಗದಲ್ಲಿರುವ ನಳಂದ ವಿದ್ಯಾನಿಕೇತನ ಶಾಲೆಯ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.



ದಾವಣಗೆರೆ ಅಭಿಮಾನಿಗಳ ಬಳಗದಿಂದ ಆಯೋಜಿಸಿರುವ ಈ ಕಾರ್ಯಕ್ರಮದಲ್ಲಿ ಬೆಳಗೆರೆ ಮತ್ತು ಬೆಂಗಳೂರಿನ ಕೆಲವು ಅಭಿಮಾನಿಗಳು ಭಾಗವಹಿಸುತ್ತಿದ್ದು, ಅವರ ಅಭಿಮಾನಿಗಳು ಸಲ್ಲಿಸುತ್ತಿರುವ ಗೌರವದ ಸಂಕೇತ. ಈ ಪ್ರಕ್ರಿಯೆಗೆ ವಾರ್ಷಿಕ ನಿಯಮಿತತೆ ತರುವ ಉದ್ದೇಶಕ್ಕೆ ಇದು ನಾಂದಿಯಾಗುತ್ತಿದೆ ಎಂದು ದಾವಣಗೆರೆ ಅಭಿಮಾನಿಗಳ ಬಳಗ ತಿಳಿಸಿದೆ.

ಕೃಷ್ಣ ಶಾಸ್ತ್ರಿಗಳ ಬೆಳಗೆರೆಯಲ್ಲಿನ ಮಾದರಿ ಶಿಕ್ಷಣ ಸಂಸ್ಥೆ ಹಾಗೂ 'ಯೇಗ್ದಾಗೆಲ್ಲಾ ಐತೆ', 'ಸಾಹಿತಿಗಳ ಸ್ಮೃತಿ', 'ಮರೆಯಲಾದೀತೇ', ಸಾಹಿತ್ಯ ಕೃತಿಗಳಿಂದ ಸಮಾಜದಲ್ಲಿ ಇಂದಿಗೂ ಜೀವಂತವಾಗಿರುವ 'ಅವರು ಒಂದು ಸಮಾಜ ಸೇವೆಯ ರೂಪಕ' ಎಂಬುದು ಭಾರತದ ವಿಶ್ರಾಂತ ಮುಖ್ಯ ನ್ಯಾಯಧೀಶ ನ್ಯಾಯಮೂರ್ತಿ ಎಂ.ಎಸ್ ವೆಂಕಟಾಚಲಯ್ಯ ಅವರು ಹೇಳಿದ್ದರು.

ದಾವಣಗೆರೆಯನ್ನು ತಮ್ಮ ಕರ್ಮಭೂಮಿಯನ್ನಾಗಿಸಿಕೊಂಡಿದ್ದ ಶಾಸ್ತ್ರಿಜೀ ಅವರಿಗೆ ಅವರ ಜೀವನದ ಕೊನೆಯ ಎರಡು ದಶಕಗಳಲ್ಲಿ ದಾವಣಗೆರೆ ಆತ್ಮೀಯ ತಾಣವಾಗಿತ್ತು. ದಾನಿಗಳಾದ ರಮೇಶ್ ಬಾಬು ನೇತೃತ್ವದಲ್ಲಿ ದಾವಣಗೆರೆ ಅಭಿಮಾನಿ ಬಳಗ ಸ್ಥಾಪಿಸಿ, ಅವರ ಸಾಮಾಜಿಕ ಸಾಹಿತ್ಯಕ ಚಟುವಟಿಕೆಗಳಿಗೆ ಹೊಸ ಭರವಸೆ ನೀಡಿ–ದ್ದರಿಂದ ಅವರು ದಾವಣಗೆರೆಯನ್ನು ಸಾಂಸ್ಕೃತಿಕವಾಗಿ ಪೋಷಿಸಿದರು. ಅವರ ಜನ್ಮಶತಾಬ್ಧಿ, ಅವರ ಜೀವನ ಚರಿತ್ರೆ 'ನಾನಿದ್ದು ನನ್ನದೇನಿಲ್ಲ' ಕೃತಿಯ ಬಿಡುಗಡೆಗೆ ದಾವಣಗೆರೆ ಒಂದು ತಾಣವಾಗಿದ್ದು ಹೆಮ್ಮೆಯ ವಿಚಾರ. ಅನೇಕ ವರ್ಷ ದಾವಣಗೆರೆಯಲ್ಲಿ ಅವರ ಜಯಂತಿಯನ್ನು ಅಭಿಮಾನಿಗಳು ಆಚರಿಸಿ ಅವರಿಗೆ ಗೌರವ ತೋರಿಸುತ್ತಿದ್ದದ್ದೂ ಇದರ ಮುಂದುವರಿಕೆಯ ಭಾಗವೇ ಸರಿ.

ಕಳೆದೆರಡು ವರ್ಷಗಳಲ್ಲಿ 'ಭಾರತೀಯ ವಿದ್ಯಾಭವನ' ಹಾಗೂ 'ಹಾಯ್ ಬೆಂಗಳೂರು' ಸಂಸ್ಥೆಗಳು ಈ ಕಾರ್ಯಕ್ರಮ ನಡೆಸುವಂತಾಗಿದ್ದು ದಾವಣಗೆರೆಯ ಅಭಿಮಾನಿಗಳು ಅಲ್ಲಿಯೇ ಸಂಭ್ರಮಪಟ್ಟಿದ್ದರು. ಈ ವರ್ಷ ಪುನಃ ದಾವಣಗೆರೆಯಲ್ಲಿ ಇಂದು ದಾವಣಗೆರೆಯಲ್ಲಿ ಅವರ ಜಯಂತಿ ಆಯೋಜನೆ ಗೊಂಡಿದೆ.

## ಮಳೆ ಹಾನಿ ಪ್ರದೇಶಗಳಿಗೆ ಸಿಎಂ, ಡಿಸಿಎಂ ಸಿಟಿ ರೌಂಡ್ಸ್

### ಕಷ್ಟ ತೋಡಿಕೊಂಡ ಜನರು



**ಬೆಂಗಳೂರು:** ಕಳೆದ ನಾಲ್ಕು ದಿನಗಳಿಂದ ಬೆಂಗಳೂರಿನಲ್ಲಿ ಸುರಿದ ಮಹಾ ಮಳೆ ಸಾಕಷ್ಟು ಹಾನಿಯನ್ನು ಉಂಟು ಮಾಡಿದೆ. ಈ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಶಿವಕಮಾರ್ ಅವರು ನಗರ ಪ್ರದಕ್ಷಿಣೆ ನಡೆಸಿದರು. ಬೆಂಗಳೂರಿನ ಹಲವು ಕಡೆಗಳಿಗೆ ಬಸ್ ನಲ್ಲಿ ಸಂಚಾರ ಮಾಡಿ ಪರಿಶೀಲನೆ ನಡೆಸಿದರು. ಅಲ್ಲದೆ, ಅಧಿಕಾರಿಗಳಿಗೆ ಕಠಿಣ ಸೂಚನೆಗಳನ್ನು ನೀಡಿದರು.

**ಸಿಟಿ ರೌಂಡ್ಸ್ ಸ್ಥಳ 1:** ಎಚ್‌ಬಿ ಆರ್ ಲೇಔಟ್, ತುಂಬಿ ಹರಿಯುತ್ತಿರುವ ರಾಜಕಾಲುವೆ ಪ್ರದೇಶವನ್ನು ಸಿಎಂ ಸಿದ್ದರಾಮಯ್ಯ ವೀಕ್ಷಣೆ ಮಾಡಿದರು. ರಾಜಕಾಲುವೆಯ ಹರಿವಿನ ಹಾದಿಯಲ್ಲಿ ರೈಲ್ವೇ ಟ್ರಾಕ್ ಇರುವ ಕಡೆ ಆಗಿರುವ ಬಾಟಲ್ ನೆಕ್ ಸರಿ ಪಡಿಸಲು, ವಿಸ್ತರಿಸಲು ಸೂಚನೆ ನೀಡಿ–ದರು. ಬಾಧಿತ ಪ್ರದೇಶಗಳಲ್ಲಿ ಬೇಸ್ಮೆಂಟ್ ಪಾರ್ಕಿಂಗ್, ಕೆಳ ಹಂತದಲ್ಲಿ ಮನೆ ನಿರ್ಮಾಣಕ್ಕೆ ಅವಕಾಶ ನೀಡದಂತೆ ಟೌನ್ ಪ್ಲ್ಯಾನಿಂಗ್ ನಲ್ಲಿ ಬದಲಾವಣೆ ತರುವ ದಿಕ್ಕಿನಲ್ಲಿ ಸೂಚನೆ ನೀಡಿದರು.

**ಸಿಟಿ ರೌಂಡ್ಸ್ ಸ್ಥಳ 2 :** ವಡ್ಡರಪಾಳ್ಯ ಲೇಔಟ್, ಗೆದ್ದಲಹಳ್ಳಿಯಲ್ಲಿ ಸಿಎಂ ಮಳೆ ಹಾನಿ ಪರಿಶೀಲನೆ ನಡೆಸಿದರು. ರಾಜಕಾಲುವೆ ವಿಸ್ತೀರ್ಣ 29 ಮೀಟರ್. ಆದರೆ ಗೆದ್ದಲಹಳ್ಳಿಯ ಕಾಲುವೆ ಬಾಟಲ್ ನೆಕ್ ಇದ್ದು ಕೇವಲ 8 ಮೀಟರ್ ಇದೆ. ಆದ್ದರಿಂದ ಮೇಲಿನಿಂದ ರಾಜಕಾಲುವೆಯಲ್ಲಿ ಹರಿದು ಬರುವ ನೀರು ಈ ಬಾಟಲ್ ನೆಕ್ ನಲ್ಲಿ ಓವರ್ ಫ್ಲೋ ಆಗಿ ಸಾಯಿ ಲೇಔಟ್ ಗೆ ನುಗ್ಗುತ್ತದೆ ಎನ್ನುವುದು ಸಮಸ್ಯೆ. ಆದ್ದ–ರಿಂದ 8 ಮೀಟರ್ ಬಾಟಲ್ ನೆಕ್ ಇರುವ ರೈಲ್ವೇ ವೆಂಟ್ ಅನ್ನು ವಿಸ್ತರಿಸಲು ಸೂಚನೆ ನೀಡಲಾಯಿತು. ಮಂಗಳವಾರ ರೈಲ್ವೇಯವರು ಈ ವೆಂಟ್ ವಿಸ್ತರಣೆಗೆ ಬಿಡಿಎ ಗೆ ಅನುಮತಿ ನೀಡಿದ್ದಾರೆ. ಜೊತೆಗೆ ಕಾಲುವೆ ನಿರ್ವಹಣೆ ಮಾಡದ ಗುತ್ತಿಗೆದಾರರಿಂದ ವಿವರಣೆ ಕೇಳುವಂತೆ ಸೂಚಿಸಲಾಯಿತು.

**ಸಿಟಿ ರೌಂಡ್ಸ್ ಸ್ಥಳ 3 :** ಸಾಯಿ ಲೇಔಟ್ ನಲ್ಲಿ ಮಳೆ ಮತ್ತು ಪ್ರವಾಹ ಪೀಡಿತ ಸ್ಥಳ ವೀಕ್ಷಿಸಿದ ಮುಖ್ಯಮಂತ್ರಿಗಳು, "ಸಾಯಿ ಲೇಔಟ್ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ" ಪದಾಧಿಕಾರಿಗಳು ಮತ್ತು ಸದಸ್ಯರಿಂಸ ಸಮಸ್ಯೆ ಆಲಿಸಿ, ಮನವಿ ಸ್ವೀಕರಿಸಿದರು. ಬಳಿಕ ಮನವಿಯಲ್ಲಿರುವ ಸಮಸ್ಯೆಗಳ ಬಗ್ಗೆ ಗಂಭೀರ ಗಮನ ಹರಿಸಿ ತಕ್ಷಣಕ್ಕೆ ಸಾಧ್ಯವಿರುವ ಪರಿಹಾರ ಕಾಮಗಾರಿಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಿದರು.

**ಸಿಎಂಗೆ ರೆಡ್ ಕಾರ್ಪೆಟ್ ಸಿಟಿ ರವಿ ಟ್ವೀಟ್ :** ಇನ್ನು ಸಿಎಂ ಸಿದ್ದರಾಮಯ್ಯ ಅವರು ಮಳೆ ಹಾನಿ ಪರಿಶೀಲನೆ ನಡೆಸುವ ಸ್ಥಳಗಳಿಗೆ ತೆರಳಿದ್ದ ಸಂದರ್ಭದಲ್ಲಿ ರೆಡ್ ಕಾರ್ಪೆಟ್ ಹಾಕಲಾಗಿದೆ ಎಂದು ವಿಧಾನಪರಿಷತ್ ಬಿಜೆಪಿ ಸದಸ್ಯ ಸಿಟಿ ರವಿ ಟ್ವೀಟ್ ಮಾಡಿದ್ದಾರೆ. ಆದರೆ ಸಿಎಂ ಹೋಗಿದ್ದ ಸ್ಥಳದಲ್ಲಿ ಎಲ್ಲೂ ರೆಡ್ ಕಾರ್ಪೆಟ್ ಕಂಡು ಬಂದಿಲ್ಲ. ಹಾಗಿದ್ದರೂ ಟ್ವೀಟ್ ನಲ್ಲಿ 'ಮಳೆ ಹಾನಿಯಿಂದ ಜನ ತೊಂದರೆ ಅನುಭವಿಸುತ್ತಾ ಇದ್ದಾರೆ. ರಸ್ತೆಗಳಲ್ಲಿ ನೀರು ಹರಿದು ಮನೆಗಳು ಮುಳುಗುತ್ತಿವೆ. ಇಂತಹ ಸಂಕಷ್ಟದ ಸಮಯದಲ್ಲಿ ಎಚ್ ಆರ್ ಬಿ ಆರ್ ಲೇಔಟ್‌ಗೆ ಭೇಟಿ ನೀಡಲು ಬರುವ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಅವರಿಗೆ ರೆಡ್ ಕಾರ್ಪೆಟ್ ಸ್ವಾಗತ ಸಿಎಂ, ಡಿಸಿಎಂ ಅವರೇ ನೀವು ಜನರ ನೋವು ಕೇಳೋದಕ್ಕೆ ಬರುತ್ತಾ ಇರೋದ ಅಥವಾ ಟಿವಿ ಕ್ಯಾಮೆರಾ ಮುಂದೆ ಶೋ ಮಾಡೋದಕ್ಕ? ಜನ ಸಂಕಷ್ಟದಲ್ಲಿ ಇರುವಾಗ ಅದನ್ನು ರಾಜಕೀಯ ಶೋಕಿ ಪ್ರದರ್ಶನವನ್ನಾಗಿ ಮಾಡೋದು ಯಾವ ಬಗೆ–ಯ ಮಾನವೀಯತೆ' ಎಂದು ಸಿ.ಟಿ ರವಿ ಪ್ರಶ್ನಿಸಿದ್ದಾರೆ.

### ಕನ್ನಡದ ಸಾಹಿತಿ ಬಾನು ಮುಷ್ತಾಕ್ ಅವರ ಕೃತಿಗೆ

## ಪ್ರತಿಷ್ಠಿತ ಅಂತರರಾಷ್ಟ್ರೀಯ ಬೂಕರ್ ಪ್ರಶಸ್ತಿ

**ಲಂಡನ್:** ಕನ್ನಡದ ಪ್ರಸಿದ್ಧ ಸಾಹಿತಿ ಬಾನು ಮುಷ್ತಾಕ್ ಅವರು ಪ್ರತಿಷ್ಠಿತ ಅಂತರಾಷ್ಟ್ರೀಯ ಬೂಕರ್ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಬಾನು ಮುಷ್ತಾಕ್ ಅವರ 'ಹಸೀನಾ ಮತ್ತು ಇತರ ಕತೆಗಳು' ಕೃತಿಯ ಇಂಗ್ಲಿಷ್ ಅನುವಾದಿತ ಹಾರ್ಟ್ ಲ್ಯಾಂಪ್‌ಗೆ ಪ್ರಶಸ್ತಿ ಸಿಕ್ಕಿದೆ. ಈ ಮೂಲಕ ಇದೇ ಮೊದಲ ಬಾರಿಗೆ ಕನ್ನಡದ ಕೃತಿಗೆ ಈ ಪ್ರತಿಷ್ಠಿತ ಪ್ರಶಸ್ತಿ ಲಭಿಸಿರುವುದು ವಿಶೇಷ. ಬೂಕರ್ ಪ್ರಶಸ್ತಿ 50 ಸಾವಿರ ಪೌಂಡ್ (ಅಂದಾಜು 57.28 ಲಕ್ಷ ರೂ.) ಒಳಗೊಂಡಿದೆ. ಇದೇ ಅನುವಾದಿತ ಕೃತಿಗೆ 'ಪೆನ್ ಟ್ರಾನ್ಸ್‌ಲೇಟ್ಸ್' ಪ್ರಶಸ್ತಿಯೂ ಸಿಕ್ಕಿತ್ತು.

1990 ಮತ್ತು 2023ರ ನಡುವೆ ಪ್ರಕಟಗೊಂಡ 12 ಕತೆಗಳನ್ನೊಳಗೊಂಡ ಈ ಸಂಕಲನವನ್ನು ದೀಪಾ ಭಸ್ತಿ ಅವರು ಕನ್ನಡದಿಂದ ಇಂಗ್ಲಿಷ್‌ಗೆ ಅನುವಾದಿಸಿದ್ದರು. ಮುಸ್ಲಿಂ ಸಮುದಾಯದ ಬಾಲಕಿಯರು ಹಾಗೂ ಹೆಣ್ಣುಮಕ್ಕಳ ದೈನಂದಿನ ಬದುಕನ್ನು ಆಧಾರಿಸಿ ಈ ಕತೆಯನ್ನು ಬರೆಯಲಾಗಿತ್ತು. ಮೇ 21ರಂದು ಲಂಡನ್‌ನಲ್ಲಿ ಟೇಟ್ ಮಾಡರ್ನ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಅಧಿಕೃತವಾಗಿ ಪ್ರಶಸ್ತಿಯನ್ನು ಘೋಷಿಸಲಾಯಿತು.

ಸಮಾರಂಭದಲ್ಲಿ ಪ್ರಶಸ್ತಿ ಸ್ವೀಕರಿಸಿ ಮಾತನಾಡಿರುವ ಮುಷ್ತಾಕ್, ತಮ್ಮ ಗೆಲುವನ್ನು ವೈವಿಧ್ಯತೆಗೆ ದೊರೆತ ಜಯ ಎಂದು ಬಣ್ಣಿಸಿದ್ದಾರೆ. 'ಯಾವ ಕಥೆಯೂ ಸಣ್ಣದಲ್ಲ, ಅನುಭವದ ವಸ್ತ್ರದಲ್ಲಿನ ಪ್ರತಿ ಎಳೆಯೂ ಇಡೀ ಕಥೆಯ ತೂಕವನ್ನು ಹೊಂದಿರುತ್ತದೆ ಎಂಬ ನಂಬಿಕೆಯಿಂದಲೇ ಈ ಪುಸ್ತಕ ರೂಪುಗೊಂಡಿತು' ಎಂದು ಹೇಳಿದ್ದಾರೆ. 'ನನ್ನ ಸುಂದರವಾದ ಭಾಷೆಗೆ ದೊರೆತ ಎಂತಹ ಸೊಗಸಾದ ಗೆಲುವು ಇದು' ಎಂದು ಅನುವಾದಕಿ ಭಸ್ತಿ ಹರ್ಷ ವ್ಯಕ್ತಪಡಿಸಿದ್ದಾರೆ. ಫ್ರೆಂಚ್‌ನಿಂದ ಅನುವಾದವಾದ ಎರಡು ಕೃತಿಗಳು, ಜಪಾನ್, ಇಟಾಲಿಯನ್ ಹಾಗೂ ಡ್ಯಾನಿಷ್ ಭಾಷೆಯ ತಲಾ ಒಂದು ಕೃತಿ 'ಶಾರ್ಟ್ ಲಿಸ್ಟ್'ನಲ್ಲಿದ್ದವು. ಶಾರ್ಟ್ ಲಿಸ್ಟ್‌ನಲ್ಲಿ ಆಯ್ಕೆಯಾಗಿದ್ದ ಎಲ್ಲರನ್ನೂ ಲಂಡನ್ ಕಾರ್ಯಕ್ರಮಕ್ಕೆ ಆಹ್ವಾನಿಸಲಾಗಿತ್ತು.

ಇನ್ನೂ ಬೂಕರ್ ಪ್ರಶಸ್ತಿ ಪಡೆದ ಬಾನು ಮುಸ್ತಾಕ್ ಅವರಿಗೆ ಸಿಎಂ ಸಿದ್ದರಾಮಯ್ಯ ಅಭಿನಂದನೆ ಸಲ್ಲಿಸಿದ್ದಾರೆ.




ಅಂತಾರಾಷ್ಟ್ರೀಯ ಬೂಕರ್ ಸಾಹಿತ್ಯ ಪ್ರಶಸ್ತಿ ಪುರಸ್ಕೃತರಾಗಿರುವ ಕನ್ನಡದ ಹೆಮ್ಮೆಯ ಲೇಖಕಿ ಬಾನು ಮುಸ್ತಾಕ್ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು. ಇದು ಕನ್ನಡ, ಕನ್ನಡಿಗ ಮತ್ತು ಕರ್ನಾಟಕ ಸಂಭ್ರಮಿಸುವ ಹೊತ್ತು. ಈ ನೆಲದ ಸೌಹಾರ್ದತೆ, ಜಾತ್ಯತೀತತೆ ಮತ್ತು ಸೋದರತ್ವದ ನಿಜ ಮೌಲ್ಯಗಳನ್ನು ಮೈಗೂಡಿಸಿಕೊಂಡು ಬರೆಯುತ್ತಿರುವ ಬಾನು ಮುಸ್ತಾಕ್ ಅವರು ಕನ್ನಡದ ಹಿರಿಮೆಯ ಬಾವುಟವನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಹಾರಿಸಿ ನಮಗೆಲ್ಲ ಗೌರವ ತಂದುಕೊಟ್ಟಿದ್ದಾರೆ.

ಅವರು ಇನ್ನಷ್ಟು ಕಾಲ ಸತ್ವಯುತವಾಗಿ ಬರೆಯುತ್ತಾ ಕನ್ನಡದ ಕಂಪನ್ನು ಜಗದಗಲಕ್ಕೆ ಪಸರಿಸುತ್ತಾ ಇರಲಿ ಎಂದು ಹಾರೈಸುತ್ತೇನೆ. ಬೂಕರ್ ಪ್ರಶಸ್ತಿಗೆ ಭಾಜನವಾಗಿರುವ ಅವರ ಕೃತಿ 'ಹೃದಯ ದೀಪ'ವನ್ನು ಇಂಗ್ಲೀಷ್ ಗೆ ಅನುವಾದಿಸಿರುವ ಪ್ರತಿಭಾವಂತ ಲೇಖಕಿ ದೀಪಾ ಭಸ್ತಿ ಅವರಿಗೂ ಕನ್ನಡಿಗರೆಲ್ಲರ ಪರವಾಗಿ ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದು ಬರೆದುಕೊಂಡಿದ್ದಾರೆ.

### ರಾಜ್ಯದ ಜೇನುತುಪ್ಪಕ್ಕೆ 'ಝೇಂಕಾರ' ಬ್ರಾಂಡ್:

## ಅಂತಾರಾಷ್ಟ್ರೀಯ ಮಾನ್ಯತೆಗೆ ಇಲಾಖೆ ಪ್ರಯತ್ನ


**ದಾವಣಗೆರೆ:** ರಾಜ್ಯದ ಜೇನುತುಪ್ಪಕ್ಕೆ ಅಂತರಾಷ್ಟ್ರೀಯ ಮಟ್ಟದಲ್ಲಿ ಮಾನ್ಯತೆ ಹಾಗೂ ಮಾರುಕಟ್ಟೆ ಒದಗಿಸುವ ನಿಟ್ಟಿನಲ್ಲಿ ಇಲಾಖೆಯಿಂದ "ಝೇಂಕಾರ", ಜೀವನೋಲ್ಲಾಸಕ್ಕೆ ಜೇನು ಎಂಬ ಬ್ರಾಂಡ್ ಅನ್ನು ನೊಂದಾಯಿಸಲಾಗಿದೆ ಎಂದು ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕಾ ಮತ್ತು ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ತಿಳಿಸಿದರು.

ಬುಧವಾರ ತಮ್ಮ ಗೃಹ ಕಚೇರಿಯಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡರು.

ಜೇನು ಉದ್ಯಮಕ್ಕೆ ಹೆಚ್ಚಿನ ಮಾನ್ಯತೆ ನೀಡಲಾಗಿದೆ ಎಂದು ತಿಳಿಸಿದ ಸಚಿವರು ಐತಿಹಾಸಿಕ ನಗರ – ಮೈಸೂರಿನಲ್ಲಿ ತೋಟಗಾರಿಕೆ ಇಲಾಖೆಯಡಿ 15 ಎಕರೆ ವಿಸ್ತೀರ್ಣದ ಲಿಂಗಾಂಬುಧಿ ಸಸ್ಯ ಶಾಸ್ತ್ರೀಯ ತೋಟವನ್ನು ಲೋಕಾರ್ಪಣೆಗೊಳಿಸಲಾಗಿದೆ.

ಕಳೆದ ಎರಡು ವರ್ಷಗಳಲ್ಲಿ ಭೌಗೋಳಿಕ ಚಿಹ್ನೆ ಹೊಂದಿರುವ ಮೈಸೂರು ಮಲ್ಲಿಗೆ, ನಂಜನಗೂಡು ರಸಬಾಳೆ ಮತ್ತು ಮೈಸೂರು ವೀಳ್ಯದೆಲೆಗಳ ಸಂರಕ್ಷಣೆಗಾಗಿ 14 ಹೆಕ್ಟೇರ್ ಪ್ರದೇಶದಲ್ಲಿ ಪ್ರಾತ್ಯಕ್ಷಿಕೆಗಳನ್ನು ಹಾಗೂ 175 ರೈತರಿಗೆ ತರಬೇತಿಗಳನ್ನು ನೀಡಲಾಗಿದೆ ಎಂದರು.

ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ತೋಟಗಾರಿಕಾ ಕ್ಷೇತ್ರದ ಪ್ರಾಯೋಗಿಕ ಅರಿವು ಮೂಡಿಸಲು ರಾಜ್ಯದ 11 ಮಹಾನಗರ ಪಾಲಿಕೆಗಳಲ್ಲಿ 138 ಕಾರ್ಯಕ್ರಮಗಳ 13,860 ವಿದ್ಯಾರ್ಥಿಗಳಿಗೆ ತರಬೇತಿ ನೀಡಲಾಗಿದೆ. ಬೀಜದಿಂದ ಮಾರುಕಟ್ಟೆಯವರೆಗಿನ ಪೂರಕ ಚಟುವಟಿಕೆಗಳಿಗೆ ಅವಶ್ಯವಿರುವ ಎಲ್ಲಾ ರೀತಿಯ ಸೇವೆಗಳನ್ನು ಒಂದೇ ಸೂರಿನಡಿ ತ್ವರಿತವಾಗಿ ಮತ್ತು ಪರಿಣಾಮಕಾರಿಯಾಗಿ ರೈತರಿಗೆ ಹಾಗೂ ಸಾರ್ವಜನಿಕರಿಗೆ ಒದಗಿಸಲು ತೋಟಗಾರಿಕೆ ಕಿಸಾನ್ ಮಾಲ್ ಕೇಂದ್ರ" ಗಳನ್ನು ಮೈಸೂರು, ಮದ್ದೂರು, ದಾವಣಗೆರೆ, ಧಾರವಾಡ ಮತ್ತು ಬಾಗಲಕೋಟೆಗಳಲ್ಲಿ ಸ್ಥಾಪಿಸಲಾಗುತ್ತಿದೆ ಎಂದರು.



ಪ್ರಸಕ್ತ ಸಾಲಿನಲ್ಲಿ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟೆ ವತಿಯಿಂದ 16 ವಿವಿಧ ತೋಟಗಾರಿಕೆ ಬೆಳೆಗಳ ತಳಿಗಳನ್ನು ಬಿಡುಗಡೆಗೊಳಿಸಲಾಗಿದೆ ಎಂದು ತಿಳಿಸಿದ ಸಚಿವರು ತೋಟಗಾರಿಕೆಯಲ್ಲಿ ನೂತನ ಅವಿಷ್ಕಾರಗಳು ಮತ್ತು ತಂತ್ರಜ್ಞಾನಗಳನ್ನು ರೈತರಿಗೆ ಪರಿಚಯಿಸಲು ಅನುವಾಗುವಂತೆ "ಉನ್ನತ ಮಟ್ಟದ ತೋಟಗಾರಿ–ಕೆ ತಂತ್ರಜ್ಞಾನ ಪಾರ್ಕ್ ನ್ನು ಸಿರಿವಾರ, ಕನಕಗಿರಿ ತಾಲ್ಲೂಕು ಕೊಪ್ಪಳ ಜಿಲ್ಲೆಯಲ್ಲಿ ಪಿಪಿಪಿ ಮಾದರಿಯಲ್ಲಿ ಅಭಿವೃದ್ಧಿ ಪಡಿಸಲಾಗುತ್ತಿದೆ. ರೈತರ ಹಿತದೃಷ್ಟಿಯಿಂದ ಬೆಂಗಳೂರು ಹಾಪ್ ಕಾಮ್ಸ್ ಸಂಸ್ಥೆಯನ್ನು ಬಲಪಡಿಸಲು ರೂ.15 ಕೋಟಿ ರೂಪಾಯಿಗಳ ದುಡಿಯುವ ಬಂಡವಾಳದ ನೆರವನ್ನು ಒದಗಿಸಲಾಗಿದೆ ಎಂದು ಮಾಹಿತಿ ನೀಡಿದರು.

## ಜಿಲ್ಲಾಸ್ಪತ್ರೆಯಲ್ಲಿ ಬ್ರೆಸ್ಟ್ ಕ್ಯಾನ್ಸರ್ ಪತ್ತೆಗೆ ಮ್ಯಾಮೋಗ್ರಾಫಿ ಮೆಷಿನ್ ಅಳವಡಿಕೆ : ಶಾಸಕ ಹೆಚ್.ಡಿ. ತಮ್ಮಯ್ಯ

**ಚಿಕ್ಕಮಗಳೂರು–** ಇಲ್ಲಿನ ಮಲ್ಲೇಗೌಡ ಸಾರ್ವಜನಿಕ ಸರ್ಕಾರಿ ಜಿಲ್ಲಾಸ್ಪತ್ರೆಯಲ್ಲಿ ಮಹಿಳೆಯರ ಬ್ರೆಸ್ಟ್ ಕ್ಯಾನ್ಸರ್ ಪತ್ತೆಗೆ ಅನುಕೂಲವಾಗುವಂತೆ ಸುಮಾರು 75 ಲಕ್ಷ ರೂ ವೆಚ್ಚದಲ್ಲಿ ಮ್ಯಾಮೋಗ್ರಾಫಿ ಸ್ಕ್ರೀನಿಂಗ್ ಮೆಷಿನ್ ಅಳವಡಿಸಲಾಗಿದೆ ಎಂದು ಶಾಸಕ ಹೆಚ್.ಡಿ. ತಮ್ಮಯ್ಯ ತಿಳಿಸಿದರು.

ಅವರು ಇಂದು ಜಿಲ್ಲಾಸ್ಪತ್ರೆಯಲ್ಲಿ ಮ್ಯಾಮೋಗ್ರಾಫಿ ಮೆಷಿನ್ ಪರಿಶೀಲಿಸಿ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ರಾಜ್ಯದಲ್ಲಿ ಮಹಿಳೆಯರ ಬ್ರೆಸ್ಟ್ ಕ್ಯಾನ್ಸರ್ ಸ್ಕ್ರೀನಿಂಗ್ ಮೂಲಕ ಪತ್ತೆಗೆ ಹಚ್ಚಲು ಎಲ್ಲಾ ಜಿಲ್ಲಾ ಕೇಂದ್ರಗಳ ಆಸ್ಪತ್ರೆಗಳಿಗೆ ಈ ಮೆಷಿನ್ ಅಳವಡಿಸಲು ಸೂಚಿಸಿದ್ದಾರೆ ಎಂದರು.

ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಈ ಮೆಷಿನ್ ಇಂದಿನಿಂದಲೇ ಕಾರ್ಯಾರಂಭ ಮಾಡಿದ್ದು, ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸಲು ಸರ್ಕಾರ ಹಲವಾರು ಜನಪರ ಕಾರ್ಯಕ್ರಮಗಳನ್ನು ಆಯೋಜಿಸಿದೆ ಎಂದು ಹೇಳಿದರು.



ಜಿಲ್ಲೆಯಲ್ಲಿ ಬ್ರೆಸ್ಟ್ ಕ್ಯಾನ್ಸರ್ ಸಂಬಂಧಿತ ಮಹಿಳೆಯರು ಪಕ್ಕದ ಜಿಲ್ಲೆಗಳಾದ ಹಾಸನ, ಶಿವಮೊಗ್ಗಕ್ಕೆ ಹೋಗಬೇಕಾಗಿದ್ದು, ಇಂದು ಸರ್ಕಾರಿ ಆಸ್ಪತ್ರೆಯಲ್ಲಿ ಮ್ಯಾಮೋಗ್ರಾಫಿ ಸ್ಕ್ರೀನಿಂಗ್ ಮೆಷಿನ್ ಅಳವಡಿಸಿರುವುದರಿಂದ ಇದರ ಸದುಪಯೋಗವನ್ನು ಪಡೆದುಕೊಂಡು ಇಲ್ಲೇ ಚಿಕಿತ್ಸೆ ಲಭ್ಯವಾಗಲಿದೆ ಎಂದು ವಿವರಿಸಿದರು.

ಸಾರ್ವಜನಿಕರ ಅನುಕೂಲಕ್ಕಾಗಿ ಬ್ರೆಸ್ಟ್ ಕ್ಯಾನ್ಸರ್ ಪತ್ತೆಗೆ ಇಬ್ಬರು ರೇಡಿಯೋಲಾಜಿಸ್ಟ್‌ನೇಮಕ ಮಾಡಲಾಗಿದೆ ಎಂದ ಅವರು, ಸಿಎಸ್‌ಆರ್ ಅನುದಾನದಲ್ಲಿ ಸುಮಾರು 26 ಲಕ್ಷ ರೂ ವೆಚ್ಚದಲ್ಲಿ ಪಾವತಿಸಿ ಉಪಯೋಗಿಸುವ ಮಹಿಳೆಯರಿಗೆ ಮತ್ತು ಪುರುಷರಿಗೆ ಪ್ರತ್ಯೇಕ ಸುಲಭ ಶೌಚಾಲಯ ಮತ್ತು ಸ್ನಾನಗೃಹ ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದರು.

ಆಸ್ಪತ್ರೆಗೆ ಬರುವ ರೋಗಿಗಳ ಸಂಬಂಧಪಟ್ಟವರಿಗೆ ಇದರ ಪ್ರಯೋಜನ ಲಭ್ಯವಾಗಬೇಕೆಂಬ ಉದ್ದೇಶದೊಂದಿಗೆ ಸುಲಭ ಶೌಚಾಲಯ, ಸ್ನಾನಗೃಹ ನಿರ್ಮಾಣ ಮಾಡಲು ನಿರ್ಧರಿಸಿದ್ದು, ಇನ್ನೆರಡು ತಿಂಗಳಲ್ಲಿ ಸಾರ್ವಜನಿಕ ಲೋಕಾರ್ಪಣೆಯಾಗಲಿದೆ ಎಂದು ತಿಳಿಸಿದರು.

ಸಿರವಾಸೆ ಮತ್ತು ಕಳಸಾಪುರ ಈ ಎರಡು ಆಸ್ಪತ್ರೆಗಳಲ್ಲಿ ಮಾತ್ರ ವೈದ್ಯರ ಕೊರತೆ ಇದ್ದು, ಈಗಾಗಲೇ ನೇಮಕ ಮಾಡಿದ್ದೇವೆ, ಉಳಿದಂತೆ ಕ್ಷೇತ್ರ ವ್ಯಾಪ್ತಿಯ ಎಲ್ಲಾ ಆಸ್ಪತ್ರೆಗಳಲ್ಲಿ ವೈದ್ಯರಿದ್ದಾರೆ ಎಂದು ಸ್ಪಷ್ಟಪಡಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಸರ್ಜನ್ ಡಾ. ಮೋಹನ್ ಕುಮಾರ್ ಉಪಸ್ಥಿತರಿದ್ದರು.

## ಬಿತ್ತನೆ ಮೆಕ್ಕೇಜೋಳ ಬೀಜದ ದರ ಹೆಚ್ಚಳ ವಿರೋಧಿಸಿ ಪ್ರತಿಭಟನೆ



**ದಾವಣಗೆರೆ:** ಬಿತ್ತನೆ ಮೆಕ್ಕೇಜೋಳ ಬೀಜದ ದರ ಹೆಚ್ಚಳ ವಿರೋಧಿಸಿ ಮತ್ತು ರಸಗೊಬ್ಬರ ಕೃತಕ ಅಭಾವ ಖಂಡಿಸಿ ರಾಜ್ಯ ರೈತ ಸಂಘ ಹಸಿರು ಸೇನೆ ಹುಚ್ಚವ್ವನಹಳ್ಳಿ ಮಂಜುನಾಥ್ ಬಣದಿಂದ ಬುಧವಾರ ಜಿಲ್ಲಾ ಕೃಷಿ ಇಲಾಖೆ ಜಂಟಿ ನಿರ್ದೇಶಕರಿಗೆ ಮನವಿ ಸಲ್ಲಿಸಲಾಯಿತು.

ಈಗಾಗಲೇ ಜಿಲ್ಲಾದ್ಯಂತ ಮುಂಗಾರು ಪೂರ್ವ ಮಳೆ ಉತ್ತಮವಾಗಿದ್ದು, ರೈತಾಪಿ ವರ್ಗ ಜಮೀನುಗಳನ್ನು ಹಸನು ಮಾಡಿಕೊಂಡು ಬಿತ್ತನೆಗಾಗಿ ಕಾಯುತ್ತಿದ್ದಾ–ರೆ. ಇದರ ಮಧ್ಯೆ ಜಿಲ್ಲೆಯ ಪ್ರಮುಖ ಬೆಳೆಯಾದ ಮೆಕ್ಕೇಜೋಳ ಬಿತ್ತನೆ ಬೀಜ ಪ್ರತಿ ಪ್ಯಾಕೆಟ್ ದರ ಕಳೆದ ವರ್ಷಕ್ಕೆ ಹೋಲಿಕೆ ಮಾಡಿದರೆ 300 ರಿಂದ 500 ರೂಗೆ ಹೆಚ್ಚಳವಾಗಿದೆ. ಇದು ನಗರ ಪ್ರದೇಶಗಳಲ್ಲಿ ಹೆಚ್ಚಳವಾದ ದರವಾದರೆ, ಗ್ರಾಮೀಣ ಪ್ರದೇಶದಲ್ಲಿ 500 ರಿಂದ 1000 ರೂ ಹೆಚ್ಚಳವಾಗಿದೆ ಎಂಬ ಮಾತುಗಳು ಕೇಳಿಬರುತ್ತಿವೆ ಎಂದು ಮನವಿಯಲ್ಲಿ ದೂರಲಾಗಿದೆ.

ಇನ್ನು ಡಿಎಪಿ ಗೊಬ್ಬರದ ಕೊರತೆಯನ್ನು ಕೃತಕವಾಗಿ ಸೃಷ್ಟಿಸಲಾಗುತ್ತಿದೆ. ಈ ಮೂಲಕ ವರ್ತಕರು ರೈತರಿಂದ 3500 ರೂ. ವರೆಗೂ ಪ್ರತಿ ಕ್ವಿಂಟಲ್ ಡಿಎಪಿ ಮಾರಾಟ ಮಾಡುತ್ತಿದ್ದಾರೆ. ಈಗಾಗಲೇ ದಾವಣಗೆರೆ ತಾಲೂಕಿನಾದ್ಯಂತ ಡಿಎಪಿ ಗೊಬ್ಬರದ ಕೃತಕ ಅಭಾವ ಸೃಷ್ಟಿಸಲಾಗಿದೆ ಎಂದು ರೈತರು ಆರೋಪಿಸಿದರು.


ಕೂಡಲೇ ಇಲಾಖೆ ಬಿತ್ತನೆ ಬೀಜದ ದರ ಇಳಿಕೆ ಮಾಡಿ. ಕಳೆದ ವರ್ಷದ ದರದಲ್ಲಿಯೇ ಮಾರಾಟವಾಗುವಂತೆ ನೋಡಿಕೊಳ್ಳಬೇಕು ಮತ್ತು ಡಿಎಪಿ ಗೊಬ್ಬರ ಮುಕ್ತ ಮಾರುಕಟ್ಟೆಯಲ್ಲಿ ರೈತರಿಗೆ ಸರಳವಾಗಿ ದೊರೆಯುವಂತೆ ಮಾಡಬೇಕು, ಅದೂ ಸರ್ಕಾರ ನಿಗದಿಪಡಿಸಿದ ದರದಲ್ಲಿಯೇ ಮಾರಾಟವಾಗಬೇಕು, ಬಿತ್ತನೆ ಬೀಜ, ರಸಗೊಬ್ಬರಗಳನ್ನು ಅಧಿಕ ಬೆಲೆಗೆ ಮಾರಾಟ ಮಾಡುವ ಮತ್ತು ಕೃತಕ ಅಭಾವ ಸೃಷ್ಟಿಸುವ ಮಾರಾಟಗಾರರ ವಿರುದ್ಧ ಮೊಕದ್ದಮೆ ದಾಖಲಿಸಬೇಕು. ಇಲ್ಲವಾದಲ್ಲಿ ಸಂಘದಿಂದ ದೊಡ್ಡಮಟ್ಟದ ಪ್ರತಿಭಟನೆ ನಡೆಸಲಾಗುವುದು ಎಂದು ಸಂಘದ ರಾಜ್ಯಾಧ್ಯಕ್ಷ ಹುಚ್ಚವ್ವನಹಳ್ಳಿ ಮಂಜುನಾಥ್ ಹೇಳಿದರು.

ಕಳೆದ ವರ್ಷ ಡಿಕಾಲ್ಬ್ ಕಂಪನಿಯ 1933 ಹೆಸರಿನ 4 ಕೆಜಿ ತೂಕದ ಮೆಕ್ಕಜೋಳದ ಪ್ಯಾಕೆಟ್ ದರ 1150 ರೂ ಇತ್ತು. ಈ ವರ್ಷ 1400 ರೂ ಆಗಿದ್ದು, 250 ರೂ ಹೆಚ್ಚಿಸಲಾಗಿದೆ. ಅದೇ ರೀತಿ ಇದೇ ಕಂಪನಿಯ 1978 ನಂಬರ್ ಪ್ಯಾಕೆಟ್ ಬೆಲೆ ಕಳೆದ ವರ್ಷ 1250 ರೂ ಇತ್ತು, ಈ ವರ್ಷ 1750 ರೂ ಆಗಿದ್ದು 500 ರೂ ಹೆಚ್ಚಿಸಲಾಗಿದೆ ಎಂದರು.

## ಛತ್ತೀಸ್‌ಗಢದಲ್ಲಿ ನಕ್ಸಲರು, ಭದ್ರತಾ ಪಡೆ ಮಧ್ಯೆ ಗುಂಡಿನ ಚಕಮಕಿ; 30 ನಕ್ಸಲರ ಎನ್‌ಕೌಂಟರ್

ಛತ್ತೀಸ್‌ಗಢದ ನಾರಾಯಣ್ ಪುರ–ಬಿಜಾಪುರ್ ಗಡಿಯಲ್ಲಿ ಬುಧವಾರ ಭದ್ರತಾ ಪಡೆಗಳೊಂದಿಗೆ ನಡೆದ ಭೀಕರ ಗುಂಡಿನ ಚಕಮಕಿಯಲ್ಲಿ ಕನಿಷ್ಠ 27 ನಕ್ಸಲರು ಮೃತಪಟ್ಟಿದ್ದಾರೆ.

ಗುಂಡಿನ ಚಕಮಕಿಯಲ್ಲಿ ಪೊಲೀಸರ ಬೆಂಬಲಿಗ ಮೃತಪಟ್ಟಿದ್ದಾರೆ ಮತ್ತು ಒಬ್ಬರು ಪೊಲೀಸರಿಗೆ ಗಾಯವಾಗಿದೆ ಎಂದು ಪೊಲೀಸರು ಪಿಟಿಐ ಸುದ್ದಿಸಂಸ್ಥೆಗೆ ತಿಳಿಸಿದ್ದಾರೆ.



ರಾಜ್ಯ ಪೊಲೀಸರು ದೊಡ್ಡ ಪ್ರಮಾಣದ ನಕ್ಸಲ್ ವಿರೋಧಿ ಕಾರ್ಯಾಚರಣೆಯನ್ನು ಪ್ರಾರಂಭಿಸಿದ್ದು, ದಟ್ಟ ಅರಣ್ಯ ಅಭುಜ್‌ಮದ್ ಪ್ರದೇಶದಲ್ಲಿ ಗುಂಡಿನ ಚಕಮಕಿ ನಡೆದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ನಾರಾಯಣ್ ಪುರ, ಬಿಜಾಪುರ್, ದಂತೇವಾಡ ಮತ್ತು ಕಾಂಕೇರ್ ಜಿಲ್ಲೆಗಳಿಂದ ಜಿಲ್ಲಾ ಮೀಸಲು ಪಡೆ ಜಂಟಿ ತಂಡಗಳ ಮೇಲೆ ಶಸ್ತ್ರಸಜ್ಜಿತ ಮಾವೋ ವಾದಿಗಳು ಹೊಂಚುದಾಳಿ ನಡೆಸಿದ ನಂತರ ಗುಂಡಿನ ಚಕಮಕಿ ಪ್ರಾರಂಭವಾಯಿತು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ಇಂದು, ನೀವು ಸಾಕಷ್ಟು ಸಕಾರಾತ್ಮಕತೆಯೊಂದಿಗೆ ಮನೆಯಿಂದ ಹೊರಬರುತ್ತೀರಿ, ಆದರೆ ಕೆಲವು ಅಮೂಲ್ಯ ವಸ್ತುವಿನ ಕಳ್ಳತನದಿಂದಾಗಿ, ನಿಮ್ಮ ಮನಸ್ಥಿತಿಗೆ ತೊಂದರೆಯಾಗಬಹುದು. ನಿಮ್ಮ ಆಕರ್ಷಣೆ ಹಾಗೂ ವ್ಯಕ್ತಿತ್ವ ನೀವು ಹೊಸ ಸ್ನೇಹಿತರನ್ನು ಗಳಿಸಲು ಸಹಾಯ ಮಾಡುತ್ತದೆ. ಈ ದಿನ ನಿಮ್ಮ ಪ್ರೀತಿಜೀವನದ ವಿಚಾರದಲ್ಲಿ ಅಸಾಧಾರಣವಾಗಿದೆ.

### ವೃಷಭ ರಾಶಿ

ಇಂದು ನಿಮ್ಮ ವ್ಯಕ್ತಿತ್ವ ಒಂದು ಸುಗಂಧದಂತೆ ಕೆಲಸ ಮಾಡುತ್ತದೆ. ಇಂದು ನೀವು ಯಾತ್ರೆಯಲ್ಲಿ ಹೋಗುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ಗಮನ ಹರಿಸಿ ಅವುಗಳನ್ನು ಕಡಿಯುವ ಸಧ್ಯತೆ ಇದೆ. ವಿಶೇಷವಾಗಿ ನಿಮ್ಮ ಹಣದ ಚೀಲವನ್ನು ಎಚ್ಚರಿಕೆಯಿಂದಿಡಿ. ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ. ನೀವು ಕಾಳಜಿಯುಳ್ಳ ಮತ್ತು ತಿಳುವಳಿಕೆಯುಳ್ಳ ಸ್ನೇಹಿತರನ್ನು ಭೇಟಿ ಮಾಡುತ್ತೀರಿ.

### ಮಿಥುನ ರಾಶಿ

ಬಸುರಿಯು ನೆಲದ ಮೇಲೆ ನಡೆದುಕೊಂಡು ಹೋಗುವಾಗ ವಿಶೇಷ ಕಾಳಜಿ ವಹಿಸಬೇಕು ಮತ್ತು ಸಾಧ್ಯವಾದರೆ ನಿಮ್ಮ ಸ್ನೇಹಿತರು ಧೂಮಪಾನ ಮಾಡುವಾಗ ಅವರ ಜೊತೆ ನಿಲ್ಲಬೇಡಿ. ಏಕೆಂದರೆ ಅದು ಮಗುವನ್ನು ಬಾಧಿಸಬಹುದು. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ. ನೆರೆಮನೆಯವರ ಜೊತಗಿನ ಜಗಳ ನಿಮ್ಮ ಮನಸ್ಸು ಕೆಡಿಸುತ್ತದೆ. ಆದರೆ ನಿಮ್ಮ ಸಹನೆ ಕಳೆದುಕೊಳ್ಳಬೇಡಿ, ಏಕೆಂದರೆ ಇದು ಬೆಂಕಿಗೆ ತುಪ್ಪ ಸುರಿಯುತ್ತದೆ.

### ಕರ್ಕ ರಾಶಿ

ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ನಿಮ್ಮ ಸ್ನೇಹಿತರೊಬ್ಬರು ಇಂದು ದೊಡ್ಡ ಸಾಲವನ್ನು ಕೇಳಬಹುದು, ನೀವು ಅವರಿಗೆ ಈ ಹಣವನ್ನು ಕೊಟ್ಟರೆ, ನೀವು ಆರ್ಥಿಕ ತೊಂದರೆಗೊಳಗಾಗಬಹುದು. ಕೌಟುಂಬಿಕ ಅಗತ್ಯಗಳಿಗೆ ತಕ್ಷಣದ ಗಮನ ನೀಡಬೇಕು. ನಿಮ್ಮಿಂದ ನಿರ್ಲಕ್ಷ ದುಬಾರಿ ಎನಿಸಬಹುದು. ಪ್ರೀತಿ ಇಂದ್ರಿಯಗಳ ಮಿತಿಯನ್ನು ಮೀರಿದ್ದಾಗಿದೆ, ಆದರೆ ನಿಮ್ಮ ಇಂದ್ರಿಯಗಳು ಇಂದು ಪ್ರೀತಿಯ ಭಾವಪರವಶತೆಯನ್ನು ಅನುಭವಿಸುತ್ತವೆ.

### ಸಿಂಹ ರಾಶಿ

ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ನಿಮಗೆ ಗೊತ್ತಿದ್ದ ಯಾರಾದರೂ ಹಣಕಾಸಿಗೆ ಸಂಬಂಧಿಸಿದ ವಿಷಯಗಳಿಗೆ ಅತಿಯಾಗಿ ಪ್ರತಿಕ್ರಿಯಿಸಬಹುದು, ಇದು ಮನೆಯಲ್ಲಿ ಆತಂಕದ ಕ್ಷಣಗಳು ತರುತ್ತದೆ.

### ಕನ್ಯಾ ರಾಶಿ

ನಿಮ್ಮ ಶಕ್ತಿಯನ್ನು ಸ್ವಯಂ ಸುಧಾರಣೆ ಯೋಜನೆಗಳಲ್ಲಿ ಹಾಗೂ ನಿಮ್ಮನ್ನು ಉತ್ತಮವಾಗಿಸುವ ಯೋಜನೆಗಳಲ್ಲಿ ಹಾಕಿ. ಸ್ವಲ್ಪ ಹೆಚ್ಚು ಹಣ ಮಾಡಲು ನಿಮ್ಮ ನವೀನ ಕಲ್ಪನೆಯನ್ನು ಬಳಸಿ. ಧಾರ್ಮಿಕ ಸ್ಥಳಕ್ಕೆ ಅಥವಾ ಸಂಬಂಧಿಗಳ ಭೇಟಿ ಸಾಧ್ಯವಿದೆ. ಇಂದು ನೀವು ನಿಮ್ಮ ಅತ್ಯುತ್ತಮ ನಡವಳಿಕೆಯನ್ನು ಹೊಂದಿರಬೇಕು – ಏಕೆಂದರೆ ನಿಮ್ಮ ಪ್ರೇಮಿ ಅತ್ಯಂತ ಅನಿರೀಕ್ಷಿತ ಮನಸ್ಥಿತಿಯನ್ನು ಹೊಂದಿರುತ್ತಾರೆ.

### ತುಲಾ ರಾಶಿ

ನಿಮ್ಮ ವಿಶ್ವಾಸ ಮತ್ತು ಚೈತನ್ಯ ಇಂದು ಅಧಿಕವಾಗಿರುತ್ತದೆ. ಹಣ ನಿಮಗೆ ಅಗತ್ಯವಾಗಿದೆ ಆದರೆ ನಿಮ್ಮ ಸಂಬಂಧಗಳನ್ನು ಹಾಳುಮಾಡುವಷ್ಟು ಹಣದ ಬಗ್ಗೆ ಗಂಭೀರವಾಗಬೇಡಿ. ಕುಟುಂಬದ ಸದಸ್ಯರ ಸಹಾಯ ನಿಮ್ಮ ಅಗತ್ಯಗಳನ್ನು ಪೂರೈಸುತ್ತದೆ. ಇಂದು ನೀವು ನಿಮ್ಮ ಅತ್ಯುತ್ತಮ ನಡವಳಿಕೆಯನ್ನು ಹೊಂದಿರಬೇಕು – ಏಕೆಂದರೆ ನಿಮ್ಮ ಪ್ರೇಮಿ ಅಸಮಾಧಾನಗೊಳ್ಳಲು ಹೆಚ್ಚು ಸಮಯ ತೆಗೆದುಕೊಳ್ಳುವುದಿಲ್ಲ.

### ವೃಶ್ಚಿಕ ರಾಶಿ

ಗಾಳಿಯಲ್ಲಿ ಮನೆ ಕಟ್ಟುವಲ್ಲಿ ನಿಮ್ಮ ಸಮಯ ವ್ಯರ್ಥ ಮಾಡಬೇಡಿ. ಬದಲಿಗೆ ಏನಾದರೂ ಅರ್ಥಪೂರ್ಣವಾದದ್ದನ್ನು ಮಾಡಲು ನಿಮ್ಮ ಶಕ್ತಿ ವ್ಯಯಿಸಿ. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು. ಇಂದು ನೀವು ಲಾಭ ಪಡೆಯುತ್ತೀರಿ – ಕುಟುಂಬದ ಸದಸ್ಯರು ಸಕಾರಾತ್ಮಕ ರೀತಿಯಲ್ಲಿ ನಿಮಗೆ ಪ್ರತಿಕ್ರಿಯಿಸುತ್ತಾರೆ. ನಿಮ್ಮ ಪ್ರೀತಿ ಅಸಮ್ಮತಿಯನ್ನು ಆಮಂತ್ರಿಸಬಹುದು.

### ಧನು ರಾಶಿ

ನಿಮ್ಮ ಸಂಗಾತಿಯ ಅಹ್ಲಾದಕರ ಮನಸ್ಥಿತಿ ನಿಮ್ಮ ದಿನವನ್ನು ಉಜ್ವಲವಾಗಿಸಬಹುದು. ನೀವು ತ್ವರಿತ ಹಣ ಪಡೆಯುವ ಬಯಕೆ ಹೊಂದಿರುತ್ತೀರಿ. ನೀವು ಪ್ರೀತಿಪಾತ್ರರ ಜೊತೆ ವಾದಗಳಿಗೆ ಕಾರಣವಾಗಬಹುದಾದ ವಿವಾದಾತ್ಮಕ ವಿಷಯಗಳನ್ನು ತಪ್ಪಿಸಬೇಕು. ಇಂದು ನಿಮ್ಮ ಹೃದಯ ಬಡಿತವು ನಿಮ್ಮ ಸಂಗಾತಿಯೊಡನೆ ಲಯದಲ್ಲಿ ಪ್ರೀತಿಯ ಸಂಗೀತವನ್ನು ನುಡಿಸುತ್ತದೆ.

### ಮಕರ ರಾಶಿ

ನೀವು ಧೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ಆರೋಗ್ಯ ಚೆನ್ನಾಗಿಲ್ಲದ ಒಬ್ಬ ಸಂಬಂಧಿಯನ್ನು ಭೇಟಿ ಮಾಡಿ. ಪ್ರಣಯ ನಿಮ್ಮ ಪ್ರೀತಿಪಾತ್ರರು ಇಂದು ಅತಿಯಾದ ಬೇಡಿಕೆಗಳನ್ನಿಡುವುದರಿಂದ ಪ್ರಣಯದಲ್ಲಿ ಹಿನ್ನೆಡೆಯಿರುತ್ತದೆ.

### ಕುಂಭ ರಾಶಿ

ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ಇಂದು ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯ ಕಾರಣದಿಂದ ತೊಂದರೆಗೊಳಗಾಗಬಹುದು. ಇದಕ್ಕಾಗಿ ನೀವು ನಿಮ್ಮ ಯಾವುದೇ ವಿಶ್ವಾಸಾರ್ಹರಿಂದ ಸಲಹೆಯನ್ನು ತೆಗೆದುಕೊಳ್ಳಬೇಕು. ಸ್ನೇಹಿತರು ಇಂದು ರಾತ್ರಿ ರೋಮಾಂಚಕವಾದದ್ದನ್ನೇನಾದರೂ ಯೋಜಿಸಿ ನಿಮಗೆ ಆನಂದ ತರುತ್ತಾರೆ.

### ಮೀನ ರಾಶಿ

ಧ್ಯಾನ ಪರಿಹಾರ ತರುತ್ತದೆ. ಚಂದ್ರನ ಸ್ಥಾನದಿಂದಾಗಿ, ಇಂದು ನಿಮ್ಮ ಹಣವನ್ನು ಅನಗತ್ಯ ಕೆಲಸಗಳಿಗೆ ಖರ್ಚು ಮಾಡಬಹುದು. ನೀವು ಹಣವನ್ನು ಸಂಗ್ರಹಿಸಲು ಬಯಸಿದರೆ ನಿಮ್ಮ ಸಂಗಾತಿಯೊಂದಿಗೆ ಅಥವಾ ಪೋಷಕರೊಂದಿಗೆ ಮಾತನಾಡಿ. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ. ನೀವು ಸಂಜೆ ಸ್ನೇಹಿತರೊಂದಿಗೆ ಹೊರಗೆ ಹೋದರೆ ತತ್ಕ್ಷಣದ ಪ್ರಣಯ ನಿಮಗೆ ದೊರಕಬಹುದು. ನಿಮ್ಮ ಹಿಂದಿನ ದಿನಗಳಲ್ಲಿ ಕೆಲಸದ ಸ್ಥಳದಲ್ಲಿ ಅನೇಕ ಕೆಲಸಗಳು ಅಪೂರ್ಣವಾಗಿ ಬಿಟ್ಟಿದ್ದೀರಿ, ಅವುಗಳ ಪಾವತಿ ಇಂದು ನೀವು ಮಾಡಬೇಕಾಗುತ್ತದೆ.

# ಮಕ್ಕಳ ರಕ್ಷಣಾ ನೀತಿಯನ್ನು ಕಡ್ಡಾಯವಾಗಿ ಅನುಸರಿಸಬೇಕು : ಕೆ.ನಾಗಣ್ಣ ಗೌಡ

**ಶಿವಮೊಗ್ಗ:** ಎಲ್ಲ ಇಲಾಖೆಗಳು ಕಡ್ಡಾಯವಾಗಿ ಮಕ್ಕಳ ರಕ್ಷಣಾ ನೀತಿಯನ್ನು ಅನುಸರಿಸಿ ಕಾರ್ಯ ನಿರ್ವಹಿಸಬೇಕು ಹಾಗೂ ನಾವೆಲ್ಲ ಸೇರಿ ಮಕ್ಕಳಿಗೆ ಆಗುತ್ತಿರುವ ಅನಾಹುತಗಳನ್ನು ತಪ್ಪಿಸಿ, ಅವರನ್ನು ಸಮಾಜದ ಮುಖ್ಯವಾಹಿನಿಗೆ ತರಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ಕೆ.ನಾಗಣ್ಣ ಗೌಡ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಂಗಳವಾರ ಜಿ.ಪಂ ಸಭಾಂಗಣದಲ್ಲಿ ಜಿಲ್ಲೆಯ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಮಕ್ಕಳ ಹಕ್ಕುಗಳ ರಕ್ಷಣೆ ಕುರಿತು ಏರ್ಪಡಿಸಲಾಗಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರತಿ ಅಂಗನವಾಡಿಯ ಮಕ್ಕಳನ್ನು ನಿಯಮಿತವಾಗಿ ಆರೋಗ್ಯ ತಪಾಸಣೆಗೊಳಪಡಿಸಿ, ಗಂಭೀರ ಮತ್ತು ಮಧ್ಯಮ ತೀವ್ರ ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳನ್ನು ಎನ್‌ಆರ್‌ಸಿ ಗೆ ದಾಖಲು ಮಾಡಬೇಕು. ಜಿಲ್ಲೆಯಲ್ಲಿ ಅಂಗನವಾಡಿಯಿಂದ ಮಕ್ಕಳನ್ನು ಗುರುತಿಸಿ ಎನ್‌ಆರ್‌ಸಿ ಗೆ ದಾಖಲಿಸುವ ಸಂಖ್ಯೆ ಕಡಿಮೆ ಇದೆ. ಈ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು, ಸಿಡಿಪಿಓ ಗಳು ಗಮನ ಹರಿಸಿ ಸೂಕ್ತ ಕ್ರಮ ಜರುಗಿಸಬೇಕು. ತಾಲ್ಲೂಕುಗಳಲ್ಲಿ ಸಂಬಂಧಿಸಿದ ಅಧಿಕಾರಿಗಳ ಸಮನ್ವಯ ಸಭೆ ನಡೆಸಿ ಈ ಯೋಜನೆ ಸದುಪಯೋಗವಾಗುವಂತೆ ಕ್ರಮ ಕೈಗೊಳ್ಳಬೇಕು.

ಜಿಲ್ಲೆಯಲ್ಲಿ ಬಾಲ್ಯ ವಿವಾಹ ಪ್ರಕರಣಗಳ ಸಂಖ್ಯೆ ಹೆಚ್ಚಿದೆ. 2024–25 ರಲ್ಲಿ 79 ಬಾಲ್ಯ ವಿವಾಹ ಪ್ರಕರಣ ದಾಖಲಾಗಿದೆ. ಇಷ್ಟೂ ಪ್ರಕರಣಗಳಿಗೆ ಎಫ್‌ಐಆರ್



ದಾಖಲಿಸಿ, ಅನುಸರಣೆ ಕೈಗೊಳ್ಳಬೇಕು. ಬಾಲ ಗರ್ಭಿಣಿಯರಿಗೆ ಪರಿಹಾರ, ಪುನರ್ವಸತಿ ನೀಡಬೇಕು. ಹೆಣ್ಣು ಮಕ್ಕಳ ರಕ್ಷಣಾ ನೀತಿ ಪ್ರಕಾರ ಎಲ್ಲರೂ ಕೆಲಸ ಮಾಡಬೇಕು.ಮುಖ್ಯವಾಗಿ ಬಾಲ್ಯ ವಿವಾಹಗಳು ಆಗದಂತೆ ಕ್ರಮಗಳನ್ನು ಕೈಗೊಳ್ಳಬೇಕು. ಕೇವಲ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖಾ ಅಧಿಕಾರಿಗಳು ಮಾತ್ರವಲ್ಲ, ತಹಶೀಲ್ದಾರ್, ಇಓ, ಡಿಸಿಎಂ, ಸಮಾಜ ಕಲ್ಯಾಣ ಇಲಾಖೆ, ಕಾರ್ಮಿಕ ಅಧಿಕಾರಿ, ಶಾಲಾ ಮುಖ್ಯೋಪಾಧ್ಯಯರು, ಪೊಲೀಸ್ ಇಲಾಖೆ ಇತರೆ ಕಾರ್ಯಕ್ರಮ ಅನುಷ್ಟಾನ ಅಧಿಕಾರಿಗಳು ಸಹ ಎಫ್‌ಐಆರ್ ಮಾಡಲು ಅವಕಾಶ ಇದ್ದು ಎಲ್ಲ ಇಲಾಖೆಗಳು ಸಮನ್ವಯದೊಂದಿಗೆ ಕೆಲಸ ಮಾಡಬೇಕು. ಆಶಾ, ಅಂಗನವಾಡಿ ಕಾರ್ಯಕರ್ತೆಯರು, ಶಿಕ್ಷಕರಿಗೆ ಮೊದಲ ಹಂತದಲ್ಲಿ ಬಾಲ್ಯ ವಿವಾಹದ ಬಗ್ಗೆ ತಿಳಿಯುವ ಸಂಭವ ಹೆಚ್ಚು ಇರುತ್ತದೆ. ಬಾಲ್ಯ ವಿವಾಹದ ಕುರಿತು ವಿವೇಕ ಹೇಳುವುದಕ್ಕಿಂತ ಶಿಕ್ಷೆಯ ತೀವ್ರತೆ, ದುಷ್ಪರಿಣಾಮಗಳ ಬಗ್ಗೆ ಹೆಚ್ಚಿನ ಅರಿವು ಮತ್ತು ಜಾಗೃತಿ ಮೂಡಿಸಬೇಕು. ಬಾಲ್ಯ ವಿವಾಹ ಕುರಿತು ಮೊದಲೇ ಮಾಹಿತಿ ನೀಡುವವರಿಗೆ ಪ್ರೋತ್ಸಾಹ ಧನ ಸಹ ನೀಡಲಾಗುವುದು. ಈ ಬಗ್ಗೆ ಹೆಚ್ಚಿನ ಪ್ರಚಾರ ಮಾಡಬೇಕು ಎಂದರು.

ಶಾಲೆಯಿಂದ ಹೊರಗುಳಿದ ಮಕ್ಕಳ ಕುರಿತು ಆರ್‌ಡಿಪಿಆರ್ ಮತ್ತು ಶಾಲಾ ಶಿಕ್ಷಣ ಇಲಾಖೆಗಳ ಅಂಕಿ ಅಂಶಗಳು ತಾಳೆಯಾಗುತ್ತಿಲ್ಲ. ಸಾಕಷ್ಟು ವ್ಯತ್ಯಾಸ ಇದೆ. ಇದನ್ನು ಸರಿಪಡಿಸಿಕೊಳ್ಳಬೇಕು. ಶಾಲೆಯಿಂದ ಮಕ್ಕಳು ಹೊರಗುಳಿದ ಕಾರಣ ಗುರುತಿಸಿ ಜಿಲ್ಲಾಧಿಕಾರಿಗಳಿಗೆ ವರದಿ ನೀಡಬೇಕು. ಶಾಲೆಗೆ ಮರಳಿ ಬರಲು ಕೇವಲ ಮನವೊಲಿಸಿದರೆ ಸಾಲದು, ಮಕ್ಕಳು ಅನಾರೋಗ್ಯದಿಂದ ಇದ್ದಾರಾ, ವಿಕಲಚೇತನರಾ, ಏಕ ಪೋಷಕ, ಅಥವಾ ಅನಾಥರು ಹೀಗೆ ಗುರುತಿಸಿ ವರದಿ ನೀಡಿದಲ್ಲಿ ಸೂಕ್ತ ಪರಿಹಾರ ಸಾಧ್ಯವಾಗುತ್ತದೆ ಎಂದು ಸದಸ್ಯರು ತಿಳಿಸಿದರು.

ಅಧ್ಯಕ್ಷರು ಮಾತನಾಡಿ, ಶಾಲೆಗಳು ಮುಚ್ಚಲು ಮುಖ್ಯ ಕಾರಣ ಅಂಗನವಾಡಿಯೊಂದಿಗೆ ಉತ್ತಮ ಸಂಬಂಧ ಸಾಧಿಸದೇ ಇರುವುದು. ಅಂಗನವಾಡಿಗೆ ಶಾಲೆಯಿಂದ ಭೇಟಿ ನೀಡಿ, ಪೋಷಕರು, ಮಕ್ಕಳಿಗೆ ಸರ್ಕಾರಿ ಶಾಲೆಗೆ ಬರುವಂತೆ ಮನವೊಲಿಸಬೇಕು. ಅಂಗನವಾಡಿಗಳೊಂದಿಗೆ ಶಾಲೆಗಳು ಉತ್ತಮ ಬಾಂಧವ್ಯ ಇಟ್ಟುಕೊಳ್ಳಬೇಕೆಂದರು.

ಮಾರ್ಗಸೂಚಿಯನ್ವಯ ಕೋಚಿಂಗ್ ಸೆಂಟರ್‌ಗೆ ಅನುಮತಿ ನೀಡಬೇಕು. ಅನಧಿಕೃತ ಕೋಚಿಂಗ್ ಸೆಂಟರ್ ಗಳ ಕುರಿತು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದರು.

ಬಿಸಿಎಂ, ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳು ತಮ್ಮ ವ್ಯಾಪ್ತಿಯ ವಸತಿನಿಲಯಗಳಲ್ಲಿ ಮುಖ್ಯವಾಗಿ ಹೆಣ್ಣು ಮಕ್ಕಳು ಸೇರಿದಂತೆ ಮಕ್ಕಳ ರಕ್ಷಣಾ ನೀತಿಯನ್ನು ಖಾತ್ರಿಪಡಿಸಬೇಕು. ಹೆಣ್ಣು ಮಕ್ಕಳ ಹಾಸ್ಟೆಲ್‌ನಲ್ಲಿ ಮಹಿಳಾ ಅಧೀಕ್ಷಕರು ಮತ್ತು ಸಿಬ್ಬಂದಿಯನ್ನು ನೇಮಿಸಬೇಕು. ಭದ್ರತಾ ಸಿಬ್ಬಂದಿ ನಿಯೋಜನೆ, ಚಲನವಲನ ವಹಿ ನಿರ್ವಹಣೆ ಸೇರಿದಂತೆ ಎಲ್ಲ ಅಗತ್ಯ ಕ್ರಮ ಕೈಗೊಳ್ಳಬೇಕು. ಮಕ್ಕಳಿಗೆ ಲಭಿಸಬೇಕಾದ ಎಲ್ಲ ಮೂಲಭೂತ ಸೌಕರ್ಯ, ಸೌಲಭ್ಯಗಳನ್ನು ಸಕಾಲದಲ್ಲಿ ಒದಗಿಸಬೇಕು. ದೌರ್ಜನ್ಯ, ಪೋಕ್ಸೋ ಪ್ರಕರಣಗಳು ಆಗದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಆರ್‌ಡಿಪಿಆರ್ ಇಲಾಖೆಯಿಂದ ಪ್ರತಿ ಗ್ರಾ.ಪಂ ಯಲ್ಲಿ ಮಕ್ಕಳ ಸ್ನೇಹಿ ಅಭಿಯಾನ, ಚಟುವಟಿಕೆಗಳನ್ನು ಕೈಗೊಳ್ಳಬೇಕು. ಕಾರ್ಮಿಕ ಇಲಾಖೆ ವತಿಯಿಂದ ನಿಯಮಿತವಾಗಿ ದಾಳಿ ನಡೆಸಿ ಕಿಶೋರ ಮತ್ತು ಬಾಲ ಕಾರ್ಮಿಕರನ್ನು ಪತ್ತೆ ಹಚ್ಚಿ, ಪರಿಹಾರ, ಪುನರ್ವಸತಿ, ಸೂಕ್ತ ಕ್ರಮ ವಹಿಸಬೇಕು. ಬಾಲಕಾರ್ಮಿಕತೆಯನ್ನು ತಡೆಯುವ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದರು.ಸಭೆಯಲ್ಲಿ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ, ಜಿ.ಪಂ ಸಿಇಓ ಎನ್. ಹೇಮಂತ್, ಆಯೋಗದ ಸದಸ್ಯರಾದ ವೆಂಕಟೇಶ್, ಡಾ.ಕೆ.ಟಿ.ತಿಪ್ಪೇಸ್ವಾಮಿ, ಶಶಿಧರ್ ಕೋಸಂಬೆ, ಶ್ರೀಮತಿ ಮಂಜು, ಅಪರ್ಣಾ ಎಂ ಕೊಳ್ಳ, ಶೇಖರೇಗೌಡ ಜಿ ರಾಮತ್ನಾಳ, ಜಿಲ್ಲಾ ಮಟ್ಟದ ಅಧಿಕಾರಿಗಳು, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರು, ಬಾಲ ನ್ಯಾಯ ಮಂಡಳಿ ಸದಸ್ಯರು, ಶಿಕ್ಷಣ ಇಲಾಖೆ, ಆರೋಗ್ಯ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಪಾಲ್ಗೊಂಡಿದ್ದರು.

# ಮೇ 24 ರಂದು ಯಕ್ಷರಂಗದ ಸರ್ವ ಸದಸ್ಯರ ಮಹಾಸಭೆ




**ದಾವಣಗೆರೆ:** ದಾವಣಗೆರೆ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಅಂಗ ಸಂಸ್ಥೆ ಯಕ್ಷರಂಗ ಯಕ್ಷಗಾನ ಸಂಸ್ಥೆಯ 2025–27ನೇ ಸಾಲಿನ ನೂತನ ಪದಾಧಿಕಾರಿಗಳ ಆಯ್ಕೆಗಾಗಿ ಮೇ 24 ರಂದು ಶನಿವಾರ ಸಂಜೆ 5.00ಕ್ಕೆ ಕಲಾಕುಂಚ ಕಛೇರಿ ಸಭಾಂಗಣದಲ್ಲಿ ಸರ್ವ ಸದಸ್ಯರ ಮಹಾಸಭೆ ಕರೆಯಲಾಗಿದೆ ಎಂದು ಯಕ್ಷರಂಗದ ಪ್ರಧಾನ ಕಾರ್ಯದರ್ಶಿ ಬೇಳೂರು ಸಂತೋಷ್‌ಕುಮಾರ್ ಶೆಟ್ಟಿ ತಿಳಿಸಿದ್ದಾರೆ.

ಯಕ್ಷರಂಗದ ಅಧ್ಯಕ್ಷರಾದ ಮಲ್ಯಾಡಿ ಪ್ರಭಾಕರ ಶೆಟ್ಟಿಯವರ ಅಧ್ಯಕ್ಷತೆಯಲ್ಲಿ ನಡೆಯುವ ಈ ಮಹತ್ವಪೂರ್ಣ ಸಭೆಯಲ್ಲಿ ವಾರ್ಷಿಕ ವರದಿ ಮಂಡನೆ, ವಾರ್ಷಿಕ ಲೆಕ್ಕಪತ್ರ ಮಂಡನೆ, ಅನುಮೋದನೆ ಮುಂದಿನ ಯಕ್ಷಗಾನ ಕಾರ್ಯಕ್ರಮ ಉಚಿತ ತರಬೇತಿ ಕುರಿತು ವಿಚಾರ ವಿನಿಮಯ ನಡೆಯಲಿದ್ದು ಯಕ್ಷಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಈ ಮಹಾಸಭೆಯ ಯಶಸ್ವಿಗೊಳಿಸಬೇಕಾಗಿ ಯಕ್ಷರಂಗದ ಖಜಾಂಚಿ ನೀಲಾವರ ಭಾಸ್ಕರನಾಯಕ್ ವಿನಂತಿಸಿದ್ದಾರೆ.

# ಗ್ರಾಮ ಪಂಚಾಯತಿ ಅಧ್ಯಕ್ಷರಾಗಿ ಸಾಕಮ್ಮ ನಿಂಗರಾಜ್



**ಮಾಯಕೊಂಡ;**ಇಲ್ಲಿನ ಗ್ರಾಮ ಪಂಚಾಯತಿ ಅಧ್ಯಕ್ಷರಾಗಿ ಸಾಕಮ್ನ ನಿಂಗರಾಜ್ ಅವಿರೋಧ ಆಯ್ಕೆಯಾದರು.

ಲತಾ ಮಲ್ಲಿಕಾರ್ಜುನ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ಸೋಮವಾರ ಚುನಾವಣೆ ನಡೆಯಿತು. ಸಾಕಮ್ಮ ನಿಂಗರಾಜ್ ಹೊರತುಪಡಿಸಿ ಬೇರೆಯಾವ ನಾಮಪತ್ರ ಸಲ್ಲಿಕೆಯಾಗದ್ದರಿಂದ ಸಾಕಮ್ಮ ಅವರನ್ನು ಅವಿರೋಧ ಆಯ್ಕೆಯಾದರು ಎಂದು ಘೋಷಿಸಲಾಯಿತು, ಎಂದು ಚುನಾವಣಾಧಿಕಾರಿ ಜಿ.ಪಂ. ಸಹಾಯಕ ನಿರ್ದೇಶಕ ಬಸವರಾಜಪ್ಪ ಘೋಷಿಸಿದರು. ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷೆ ಲತಾ ಮಲ್ಲಿಕಾರ್ಜುನ ಸದಸ್ಯರಾದ ವಗ್ಗಪ್ಪರ ಮಲ್ಲಪ್ಪ, ಎನ್.ಎಂ. ಮಂಜುನಾಥ, ಬಸವರಾಜ್, ಹನುಮಂತಪ್ಪ,

ಸುನಿತಾ ಹನುಮಂತಪ್ಪ, ಮೈತ್ರಮ್ಮ ಬಸವರಾಜಪ್ಪ, ಗೌರಮ್ಮ ಶಿವಕುಮಾರ್, ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಜಿ.ಬಿ. ಮಲ್ಲೇಶ್, ಪಿಡಿಒ ಶ್ರೀನಿವಾಸ್ ಮತ್ತು ಸಿಬ್ಬಂದಿ ಮುಖಂಡರಾದ ರೇವಣಸಿದ್ದಪ್ಪ, ಕಡೆಕೊಪ್ಪ ನಿಂಗಪ್ಪ ಮತ್ತಿತರರು ಇದ್ದರು.

# ನಡೆ–ನುಡಿ ಒಂದಾಗಿಸಿದ ಶರಣ ಧರ್ಮ –ಶಿವನಕೆರೆ ಬಸವಲಿಂಗಪ್ಪ

**ದಾವಣಗೆರೆ:** 12ನೇ ಶತಮಾನದ ಶರಣರು ಕಾಯಕ ದಾಸೋಹ, ಸಮಾನತೆ, ಸ್ವಾತಂತ್ರ್ಯ ಮುಂತಾದ ಗುಣಗಳಲ್ಲಿ ನಡೆ–ನುಡಿ ಒಂದಾಗಿಸಿ ನಿಜವಾದ ಕಲ್ಯಾಣ ರಾಜ್ಯವನ್ನುಂಟು ಮಾಡಿದ್ದರು. ಅವರು ಸದಾ ಎಲ್ಲರ ಕಷ್ಟ ಸುಖಗಳಿಗೆ ಸ್ಪಂದಿಸುತ್ತಿದ್ದರು ಎಂದು ಶಿವನ ಕೆರೆ ಬಸವಲಿಂಗಪ್ಪ ಹೇಳಿದರು.

ಕ್ಯಾಲಿಫೋರ್ನಿಯಾದ ವೀರಶೈವ ಸಮಾಜ ಆಫ್ ನಾರ್ಥ್ ಅಮೇರಿಕಾದ ಲಿವರ್ ಮೋರ್ ದೇವಸ್ಥಾನದಲ್ಲಿ ಬಸವ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸುವ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಬಸವಣ್ಣನವರು ಇಡೀ ಕಲ್ಯಾಣದ ಕಡು ಬಡವರು, ಮಹಿಳೆಯರ ಕಷ್ಟ ಸುಖಗಳಿಗೆ ಅಪಾರವಾಗಿ ಸ್ಪಂಧಿಸುತ್ತಿದ್ದರು. ಹಾಗಾಗಿ ಅವರ ಜೀವನದಲ್ಲಿ ಸಮಾನತೆಗಾಗಿ ನಿರಂತರ ಪ್ರಯತ್ನ ಮಾಡಿದರು. ಅವರು ಬಾಲ್ಯದಲ್ಲಿಯೇ ಮಹಿಳಾ ಸಮಾನತೆ, ಸ್ವಾತಂತ್ರ್ಯವನ್ನು ಎತ್ತಿಹಿಡಿದರು ಎಂದು ತಿಳಿಸಿದರು.

ಬಸವಣ್ಣನವರು ಶರಣ ಗಣವನ್ನೇ ಹುಟ್ಟುಹಾಕಿ, ಅರಿವು ಆಧಾರಿತ ಸಾಮೂಹಿಕ ಕಾರ್ಯಗಳನ್ನು ಇಡೀ ಕಲ್ಯಾಣದಲ್ಲೆಲ್ಲ ಜಾರಿಗೆ ತಂದರು. ಇದಕ್ಕೆ ಅವರು ಮುಖ್ಯವಾಗಿ ಅನುಸರಿಸಿದ್ದು ನಡೆ–ನುಡಿ.

ನುಡಿದರೆ ಲಿಂಗ ಮೆಚ್ಚಿ ಅಹುದಹುದೆನಬೇಕು



ನುಡಿಯೊಳಗಾಗಿ ನಡೆಯದಿದ್ದರೆ,

ಕೂಡಲಸಂಗಮದೇವನೆಂತೊಲಿವನಯ್ಯಾ

ಎನ್ನುವ ಅವರ ತತ್ವದಿಂದ

ಕಲ್ಯಾಣವೇ ಅವರನ್ನು ಮೆಚ್ಚಿ ಭಕ್ತರಾದರು ಎಂದರು..

ಹೀಗಾಗಿ 10–15 ವರ್ಷದಲ್ಲಿ ಕಲ್ಯಾಣವನ್ನು ಕಟ್ಟಿ ದೊಡ್ಡ ಕ್ರಾಂತಿಯನ್ನೇ ಅಂದು ಮಾಡಿದ್ದರು. ಇಂದು ಸಹ ನಾವು ನಡೆ–ನುಡಿಯನ್ನು ಒಂದಾಗಿಸಿದರೆ ನಮ್ಮನ್ನು ಜನ ಒಪ್ಪುತ್ತಾರೆ. ಇದನ್ನು ಗಾಂಧೀಜಿ, ಮಾರ್ಟಿನ್ ಲೂಥರ್ ಕಿಂಗ್, ಲಾಲ್ ಬಹದ್ದೂರ್ ಶಾಸ್ತ್ರಿ ಮುಂತಾದವರೆಲ್ಲರೂ ನಡೆ–ನುಡಿಯನ್ನು ಒಂದಾಗಿಸಿ ಜನ ಜೀವನವನ್ನು ಹಸನಾಗಿ ಮಾಡಿದ ಹಲವಾರು ಉದಾಹರಣೆಗಳಿವೆ ಎಂದು ತಿಳಿಸಿಕೊಟ್ಟರು.

ಅಮೇರಿಕಾದ ಬಸವಭಕ್ತರು ಅಪಾರ ಶ್ರಮ, ಶ್ರದ್ದೆಯಿಂದ ಬಸವಣ್ಣನ ಕಾಯಕ, ಶ್ರಮ, ಶ್ರದ್ಧೆ ರೂಢಿಸಿಕೊಂಡು ಲಂಚ, ವಂಚನೆ, ಪ್ರಾಮಾಣಿಕತೆಯನ್ನು ರೂಪಿಸಿಕೊಂಡು ಅತ್ಯುತ್ತಮ ಬದುಕನ್ನು ಬದುಕುತ್ತಿದ್ದೀರಿ ತಮಗೆ ಪರಮ ಆರೋಗ್ಯ, ಪರಮಶಾಂತಿ, ಪರಮಾನಂದ ದೊರಕಲಿ ಎಂದು ಮೆಚ್ಚುಗೆ ಸೂಚಿಸಿದರು.

ಕಾರ್ಯಕ್ರಮದಲ್ಲಿ ವಿ.ಎಸ್.ಎನ್.ಎ.ದ ಆಧ್ಯಕ್ಷ ಪ್ರದೀಪ್ ಅಂಗಡಿ, ಅಭಿಷೇಕ್, ದೀಪಕ್, ಅಶ್ವಿನ್, ಅನಿಲ್ ಹಾಲಪ್ಪ, ಸದಾಶಿವ್, ಎಂ.ಸಿ. ಗೌಡ, ಮೂರ್ತಿ ಮುಂತಾದವರು ಕಾರ್ಯಕ್ರಮವನ್ನು ಆಯೋಜಿಸಿದ್ದರು. ವಿ. ಎಸ್. ಎನ್. ಎ ಶರಣರು ಬಸವಣ್ಣನವರ ಜೀವನದ ಘಟನೆಗಳನ್ನು ಆಧರಿಸಿ ಕಿರು ನಾಟಕ, ವಚನಗಾಯನ ಮುಖ್ಯವಾಗಿ ಎಕ್ಕುಂಡಿ ಕುಟುಂಬದವರಿಂದ ಹಿಂದೂಸ್ಥಾನಿ ವಚನಗಾಯನ ಏರ್ಪಟ್ಟಿತ್ತು.

# ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿ ಖರೀದಿಗೆ ಬೆಂಬಲ ಬೆಲೆ ನಿಗದಿ

**ಗದಗ :** 2024–25 ನೇ ಸಾಲಿನ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ಹಿಂಗಾರು ಹಂಗಾಮಿನ ಸೂರ್ಯಕಾಂತಿ ಹುಟ್ಟುವಳಿ ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇತ್ತೀಚೆಗೆ 2024–25 ನೇ ಸಾಲಿನ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಕೃಷಿ ಹುಟ್ಟುವಳಿಯಿಂದ ಸೂರ್ಯಕಾಂತಿ ಖರೀದಿಸುವ ಕುರಿತು ಜಿಲ್ಲಾ ಟಾಸ್ಕ್ ಫೋರ್ಸ ಸಮಿತಿಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ತೆರೆಯಲಾಗುವ ಸೂರ್ಯಕಾಂತಿ ಹುಟ್ಟುವಳಿ ಖರೀದಿ ಕೇಂದ್ರಗಳಲ್ಲಿ ಖರೀದಿಸಲಾಗುವ ಎಫ್. ಎ ಕ್ಯೂ ಗುಣಮಟ್ಟ ಪರಿಶೀಲನೆಗಾಗಿ ಗ್ರೇಡರ್‌ಗಳನ್ನು ನೇಮಕ ಮಾಡಬೇಕು ಮತ್ತು ಅವರಿಗೆ ಎಫ್‌ಎಕ್ಯೂ ಗ್ರೇಡಿಂಗ್ ತರಬೇತಿ ನೀಡಬೇಕು. ಸರ್ಕಾರದ ಆದೇಶಾನುಸಾರ ಪ್ರತಿ ಎಕರೆಗೆ 4 ಕ್ವಿಂಟಲ್ ಗರಿಷ್ಟ ಪ್ರಮಾಣ ಹಾಗೂ ಪ್ರತಿ ರೈತರಿಂದ ಗರಿಷ್ಟ 20 ಕ್ವಿಂಟಾಲ್ ಸೂರ್ಯಕಾಂತಿ ಖರೀದಿಸಬೇಕು. ಸರ್ಕಾರದ ಬೆಂಬಲ ಬೆಲೆಯಲ್ಲಿ ಸೂರ್ಯಕಾಂತಿ



ಹುಟ್ಟುವಳಿಯ ಖರೀದಿ ಕುರಿತು ರೈತರು ಸದುಪಯೋಗಪಡೆದುಕೊಳ್ಳಲು ರೈತರಿಗೆ ತಿಳುವಳಿಕೆ ನೀಡಲು ಕರಪತ್ರ ಗಳ ಮೂಲಕ ಹಾಗೂ ವ್ಯಾಪಕ ಪ್ರಚಾರ ಕೈಗೊಳ್ಳುವುದರ ಮೂಲಕ ಹೆಚ್ಚಿನ ಸಂಖ್ಯೆಯಲ್ಲಿ ಜಿಲ್ಲೆಯ ರೈತರು ಯೋಜನೆಯ ಲಾಭ ಪಡೆಯಲು ಅನುಕೂಲವಾಗುವಂತೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ನಿರ್ದೇಶನ ನೀಡಿದರು.

ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರಾದ ಸುಧಾ ಬಂಡಿ ಅವರು ಮಾತನಾಡಿ ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿ ಹುಟ್ಟುವಳಿಗೆ ಪ್ರತಿ ಕ್ವಿಂಟಾಲ್‌ಗೆ ರೂ 7,280 ರಂತೆ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ಸರ್ಕಾರದ ಆದೇಶದ ಅನುಸಾರ ಎನ್.ಸಿ.ಸಿ.ಎಫ್. ಸಂಸ್ಥೆಯನ್ನು ಕೇಂದ್ರದ ಖರೀದಿ ಏಜೆನ್ಸಿಯಾಗಿ ಹಾಗೂ ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾ ಮಂಡಳಿ ನಿಯಮಿತ ( ಕೆ ಓ ಎಫ್ ) ಬೆಂಗಳೂರು ಇವರನ್ನು ರಾಜ್ಯ ಮಟ್ಟದ ಖರೀದಿ ಏಜೆನ್ಸಿಯಾಗಿ ನೇಮಿಸಿದ್ದು ರೈತರು ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರೆಗೆ ನೋಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆ ಪ್ರಾರಂಭಿಸಲು ಆದೇಶಿಸಲಾಗಿದೆ. ಜಿಲ್ಲೆಯ 9 ಕಡೆಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲು ತೀರ್ಮಾನಿಸಲಾಯಿತು.

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ , ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ತೋಟಗಾರಿಕೆ ಇಲಾಖೆ, ಸಹಕಾರಿ ಸಂಘಗಳ ಉಪನಿಬಂಧಕರು, ಕೆ ಓ ಎಫ್ ವ್ಯವಸ್ಥಾಪಕರು ಹಾಜರಿದ್ದರು.

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಯನ್ವಯ ಜಿಲ್ಲೆಯ 9 ಕಡೆಗಳಲ್ಲಿನ ಸೂರ್ಯಕಾಂತಿ ಖರೀದಿ ಕೇಂದ್ರಗಳು : ಗದಗ–ಬಳಗಾನೂರು, ಹೊಂಬಳ,: ಶಿರಹಟ್ಟಿ– ರಣತೂರ, ಶಿಗ್ಲಿ ; ರೋಣ– ಅಬ್ಬಿಗೇರಿ,: ನರಗುಂದ– ಕಣಕಿಕೊಪ್ಪ , ನರಗುಂದ ; ಮುಂಡರಗಿ– ಬರದೂರು, ಕಲಕೇರಿ.

# ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಹಾಸನ :** ಜಿಲ್ಲೆಯಲ್ಲಿಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣಇಲಾಖೆಯ ಮೆಟ್ರಿಕ್ ನಂತರ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪ.ಜಾ/ಪ. ವರ್ಗದ ಪಿ.ಯು.ಸಿ, ಐ.ಟಿ.ಐ ಮತ್ತುಡಿಪ್ಲೋಮೋ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ 2025–26ನೇ ಸಾಲಿಗೆ ಆನ್ ಲೈನ್ ಮೂಲಕ ಅರ್ಜಿಆಹ್ವಾನಿಸಲಾಗಿದೆ.

ವಿದ್ಯಾರ್ಥಿಯ ಪೋಷಕರ ವಾರ್ಷಿಕಆದಾಯ ಮಿತಿ:ಪ್ರವರ್ಗ–1, ಎಸ್.ಸಿ &ಎಸ್.ಟಿ : ರೂ.2.50 ಲಕ್ಷ

ಪ್ರವರ್ಗ–2ಎ 2ಬಿ,3ಎ, 3ಬಿ ಇತರೆ ಹಿಂದುಳಿದ ವರ್ಗ ಹಾಗೂ ಇತರೆ ರೂ.1.00 ಲಕ್ಷ. ವಿದ್ಯಾರ್ಥಿಗಳು https://shp.karnataka.gov.in/bcwdಅನ್ನು ಸಂಪರ್ಕಿಸಿ ಆನ್‌ಲೈನ್ ನಲ್ಲಿಅರ್ಜಿಯನ್ನು ಸಲ್ಲಿಸಬೇಕು.ONLINE ಮೂಲಕ ಅರ್ಜಿ ಸಲ್ಲಿಸಲುಕೊನೆಯಜೂ.20, ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆಇರಬೇಕಾದಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದಆದೇಶಕ್ಕಾಗಿಇಲಾಖೆಯ ವೆಬ್‌ಸೈಟ್www.bcwd.karnataka.gov.in ನ್ನು ನೋಡಬಹುದು. ಅರ್ಜಿ ಸಲ್ಲಿಸಲುತಾಂತ್ರಿಕ ತೊಂದರೆಗಳಾದಲ್ಲಿ ಛಿಭಿತಿಜುಜಟಠಿಟುಟಿಜ@ ರಟಚಿಟ.ಛಿಂಟ ಗೆ ಇ–ಮೇಲ್ ಮುಖಾಂತರಅಥವಾಜಿಲ್ಲಾ / ತಾಲ್ಲೂಕು ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನುಅಗತ್ಯ ದಾಖಲೆಗಳೊಂದಿಗೆ ಸಹಾಯವಾಣಿ ಸಂಖ್ಯೆ: 8050770004 ಮತ್ತು 8050770005ಮೂಲಕಸಂಪರ್ಕಿಸಲು ಹಿಂದುಳಿದ ವರ್ಗಗಳ ಕಲ್ಯಾಣಇಲಾಖೆಯಜಿಲ್ಲಾಅಧಿಕಾರಿ ತಿಳಿಸಿದ್ದಾರೆ.

# 025–26 ನೇ ಸಾಲಿನ ಪ್ರಥಮ ವರ್ಷದ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಗದಗ :** ಗದಗ ಜಿಲ್ಲೆಯ ಸರ್ಕಾರಿ ಪಾಲಿಟೆಕ್ನಿಕ್ ಹೊಳೆಆಲೂರ ನಲ್ಲಿ ಏಪ್ರಿಲ್ 11 ರಿಂದ ಮೇ 9 ರವರೆಗೆ ಮೊದಲ ಹಂತ ಹಾಗೂ ಮೇ 13 ರಿಂದ 17 ರವರೆಗೆ ದ್ವಿತೀಯ ಹಂತ , ಮೇ 19 ರಿಂದ 22 ರವರೆಗೆ ತೃತೀಯ ಹಂತ ಹಾಗೂ ಮೇ 23 ರಿಂದ 27 ರವರೆಗೆ ನಾಲ್ಕನೇ ಹಂತವಾಗಿ 2025–26 ನೇ ಸಾಲಿನ ಪ್ರಥಮ ವರ್ಷದ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಿದ್ದು ಎಸ್‌ಎಸ್‌ಎಲ್‌ಸಿ ಪಾಸಾದ ಅರ್ಹ ವಿದ್ಯಾರ್ಥಿಗಳು ಅಗತ್ಯ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.ಸಂಸ್ಥೆಯಲ್ಲಿ ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ , ಕಂಪ್ಯೂಟರ್ ಸೈನ್ಸ್ ಮತ್ತು ಇಂಜನೀಯರಿಂಗ್ , ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜನೀಯರಿಂಗ್ ಮತ್ತು ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಇಂಜನೀಯರಿಂಗ್ ಕೋರ್ಸ ಗಳಿದ್ದು ಆಫ್ ಲೈನ್ ಮೂಲಕ ಮೆರಿಟ್ ಹಾಗೂ ರೋಸ್ಟರ್ ಗಳಿಗೆ ಅನುಗುಣವಾಗಿ ಪ್ರಾಚಾರ್ಯರ ಹಂತದಲ್ಲಿಯೇ ಪ್ರವೇಶ ಪ್ರಕ್ರಿಯೆಯನ್ನು ನಡೆಸಲಾಗುವುದು. ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂಖ್ಯೆ 8317433922, 9448183626 ಸಂಪರ್ಕಿಸಬಹುದಾಗಿದೆ ಎಂದು ಹೊಳೆ ಆಲೂರ ಸರ್ಕಾರಿ ಪಾಲಿಟೆಕ್ನಿಕ್ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾರಿಗೆ ಅದಾಲತ್ ಸಭೆ

**ಚಿಕ್ಕಮಗಳೂರು:** ಮೇ 26 ರಂದು ಬೆಳಿಗ್ಗೆ 12 ಗಂಟೆಗೆ ಸ.ಪ್ರಾ.ಸಾ.ಅ ತರೀಕೆರೆ ಕಛೇರಿಯಲ್ಲಿ ಈ ಕಛೇರಿ ವ್ಯಾಪ್ತಿಯ ಸಾರಿಗೆ ವಿಭಾಗದ ಕುಂದು ಕೊರತೆಗಳ ಕುರಿತು ಚರ್ಚಿಸಲು ಸಾರಿಗೆ ಆದಾಲತ್ ಸಭೆ ನಡೆಸಲಾಗಿದೆ.

# ನಗು ಮನಸ್ಸನ್ನು ಪ್ರಪುಲ್ಲಗೊಳಿಸುತ್ತದೆ : ಹಾಸ್ಯನಟ ಶೃಂಗೇರಿ ಸುಬ್ಬಣ್ಣ



**ಕಡೂರು:** ನಗು ಮನಸ್ಸನ್ನು ಪ್ರಪುಲ್ಲಗೊಳಿಸುತ್ತದೆ. ನಗು ಸಣ್ಣ ಮಗುವನ್ನು ಆಕರ್ಷಿಸುತ್ತದೆ ಸದಾ ನಗುತ್ತಿರೋಣ ಆರೋಗ್ಯ ಹೆಚ್ಚಿಸಿಕೊಳ್ಳೋಣ ಎಂದು ಶೃಂಗೇರಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ, ಹಾಸ್ಯನಟ ಶೃಂಗೇರಿ ಸುಬ್ಬಣ್ಣ ಹೇಳಿದರು.

ಚಿಕ್ಕಮಗಳೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಮತ್ತು ಕಡೂರು ರೋಟರಿ ಕ್ಲಬ್ ಸಹಯೋಗದೊಂದಿಗೆ ನಡೆದ ದತ್ತಿ ಉಪನ್ಯಾಸದೊಂದಿಗೆ ಹಾಸ್ಯ ಸಂಜೆ ಮತ್ತು ಮತ್ತೆ ದ್ವಂದ್ವ ಕೃತಿ ಲೋಕಾರ್ಪಣೆ ಸಮಾರಂಭ ಹಾಸ್ಯ ಸಂಜೆಯ ಕಾರ್ಯಕ್ರಮದಲ್ಲಿ ಜೀವನದಲ್ಲಿ ಹಾಸ್ಯ ಪ್ರಸಂಗಗಳು ಕುರಿತು ಉಪನ್ಯಾಸ ನೀಡಿ, ಜೀವನದಲ್ಲಿ ನಿತ್ಯವು ಹಾಸ್ಯ ಪ್ರಸಂಗಗಳನ್ನು ಕಾಣಬಹುದು ಅಂತಹ ಮನಸ್ಥಿತಿ ನಮ್ಮಲ್ಲಿರಬೇಕು ಯಾರ ಬಗ್ಗೆಯೂ ಪರಿಹಾಸ್ಯ ಮಾಡದೆ ನಮ್ಮನ್ನು ನಾವು ಹಾಸ್ಯಕ್ಕೆ ಒಡ್ಡಿಕೊಳ್ಳಬೇಕು. ಒಂದಷ್ಟು ಹಾಸ್ಯ ಪ್ರಸಂಗಗಳು ಹಾಗೂ ಹನಿಗವನಗಳ ಮೂಲಕ ಸಭೆಯನ್ನು ನಗೆಗಡಲಲ್ಲಿ ತೇಲಿಸಿದರು.

ರೋಟರಿ ಸಂಸ್ಥೆಯ ಹಿರಿಯ ಸದಸ್ಯರಾದ ಬಿ.ಶಿವಕುಮಾರ್ ಮತ್ತೆ ದ್ವಂದ್ವ ಕೃತಿ ಲೋಕಾರ್ಪಣೆ ಮಾಡಿ ಮಾತನಾಡಿ, ಯಾವುದೇ ಸೌಲಭ್ಯಗಳಿಲ್ಲದ ಗ್ರಾಮೀಣ ಪ್ರದೇಶದಲ್ಲಿ ಕವಿಗಳು ಲೇಖಕರು, ಬರಹಗಾರರು ಹೊರಹೊಮ್ಮುವುದು ತುಂಬಾ ಪ್ರಾಯಾಸದ ಸಂಗತಿ. ಹೀಗಿರುವಾಗ ತಾಲ್ಲೂಕಿನ ಚಿಕ್ಕಬಾಸೂರು ಗ್ರಾಮದ ಅನಂತು ಅವರಿಂದ ಈ ಕೃತಿ ಲೋಕಾರ್ಪಣೆಗೊಂಡಿದೆ. ಇದು ಹೆಮ್ಮೆಯ ಸಂಗತಿ. ಇವರಿಂದ ಇನ್ನೂ ಹೆಚ್ಚು ಹೆಚ್ಚು ಕೃತಿಗಳು ಪ್ರಕಟವಾಗಲಿ ಎಂದು ಆಶಿಸೋಣ ಎಂದು ತಿಳಿಸಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಸೂರಿ ಶ್ರೀನಿವಾಸ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ನನ್ನ ಜಿಲ್ಲೆಯಲ್ಲಿ ಕಥಾಕಮ್ಮಟ, ಮತ್ತು ಕಾವ್ಯ ಕಮ್ಮಟಗಳನ್ನು ಆಯೋಜಿಸಿದ್ದರ ಸಲುವಾಗಿ ಬರಹಗಾರರ ಸಂಖ್ಯೆ ಹೆಚ್ಚುತ್ತಿದೆ. ಇದು ಒಳ್ಳೆಯ ಬೆಳವಣಿಗೆ. ಕೃತಿಕಾರರು ವೃತ್ತಿಯಲ್ಲಿ ರೈಲ್ವೆ ಉದ್ಯೋಗಿಯಾಗಿದ್ದರೂ ಸಹ ಪೃವೃತ್ತಿಯಲ್ಲಿ ಸಾಹಿತ್ಯ ಚಟುವಟಿಕೆಗಳನ್ನು ರೂಢಿಸಿಕೊಂಡಿದ್ದಾರೆ ಇವರ ಮತ್ತೆ ದ್ವಂದ್ವ ಕೃತಿಯಲ್ಲಿ ಗ್ರಾಮೀಣ ಸೊಗಡನ್ನು ಒಳಗೊಂಡ ಈ ಕೃತಿ ಗ್ರಾಮೀಣ ಪ್ರದೇಶಗಳ ನಂಬಿಕೆಗಳು ಆಚರಣೆಗಳು ರೂಢಿ ಮತ್ತು ಸಂಪ್ರದಾಯಗಳನ್ನು ಒಳಗೊಂಡಿದೆ ಎಂದು ತಿಳಿಸಿದರು.

# ಆರೋಗ್ಯಕರ ಜೀವನ ಉತ್ತಮ ದೃಷ್ಟಿಗೆ ದಾರಿ –ನೇತ್ರತಜ್ಞಡಾ.ಬಿ.ಜಿ.ಪ್ರದೀಪ್



**ಚಿತ್ರದುರ್ಗ :** ಆರೋಗ್ಯಕರ ಜೀವನ ಉತ್ತಮ ದೃಷ್ಟಿಗೆ ದಾರಿ ಎಂದು ಜಿಲ್ಲಾಸ್ಪತ್ರೆಯ ನೇತ್ರತಜ್ಞರಾದ ಡಾ.ಬಿ.ಜಿ.ಪ್ರದೀಪ್ ಅಭಿಪ್ರಾಯಪಟ್ಟರು.

ನಗರದ ಕರ್ನಾಟಕ ಪ್ರಾದೇಶಿಕ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘಗಳ ಒಕ್ಕೂಟದಲ್ಲಿ ಬುಧವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ, ಜಿಲ್ಲಾ ಅಂಧತ್ವ ನಿಯಂತ್ರಣಾಧಿಕಾರಿಗಳ ಕಚೇರಿ ವತಿಯಿಂದ ಕೆಓಎಫ್ ನಿಗಮದ ಎಲ್ಲಾ ವಿಭಾಗದ ನೌಕರರಿಗೆ ಉಚಿತ ನೇತ್ರ ತಪಾಸಣೆ ಹಾಗೂ ರಕ್ತದೊತ್ತಡ, ಮಧುಮೇಹ ಪರೀಕ್ಷೆ ನಡೆಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಉತ್ತಮವಾದ ಆಹಾರ ಕ್ರಮಗಳನ್ನು ಅನುಸರಿಸುವುದನ್ನು ಜನ ಮರೆತಿದ್ದಾರೆ. ಉತ್ತಮ ಚಟುವಟಿಕೆಯುಳ್ಳ ಜೀವನ ಶೈಲಿ ರೂಢಿಸಿಕೊಂಡಿರುವುದಿಲ್ಲ. ಇವೆಲ್ಲವುಗಳ ವ್ಯತ್ಯಾಸದಿಂದ ಮಧುಮೇಹ, ರಕ್ತದೊತ್ತಡದಂತಹ ಕಾಯಿಲೆಗಳು ಹೆಚ್ಚಾಗುತ್ತಿವೆ. ಇಂತಹ ಖಾಯಿಲೆಗಳಿಂದ ಅಕ್ಷಿಪಟಲದ ತೊಂದರೆಯಿಂದ ದೃಷ್ಟಿದೋಷಗಳು, ಅಂಧತ್ವ ಹೆಚ್ಚಾಗುತ್ತಿರುವುದರ ಬಗ್ಗೆ ಆತಂಕ ವ್ಯಕ್ತಪಡಿಸಿದರು.

ಸಾಮಾನ್ಯವಾಗಿ ಹಿಂದೆ ಕನ್ನಡಕ ಬರುತ್ತಿದ್ದು 40 ವರ್ಷ ವಯಸ್ಸಿನ ನಂತರ ಇರುತ್ತಿತ್ತು. ಹಾಗಾಗಿ ಅದನ್ನು ಚಾಳೀಸು ಎಂಬುದು ಅಭ್ಯಾಸ. ಆದರೆ ಈಗ ಯಾವ ವಯಸ್ಸಿಗಾದರೂ ಬರಬಹುದು. ಉತ್ತಮ ಪೋಷಕಾಂಶವುಳ್ಳ ತರಕಾರಿಗಳನ್ನು, ವಿಟಮಿನ್–ಎ ಅಂಶ ಇರುವ ಹಣ್ಣು, ತರಕಾರಿ ಸೇವಿಸಿ ಉತ್ತಮ ದೃಷ್ಟಿ ಹೊಂದಬಹುದಾಗಿದೆ ಎಂದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಟಿ.ಶ್ರೀನಿವಾಸಮೂರ್ತಿ ಮಾತನಾಡಿ, ಸಾಮಾನ್ಯವಾಗಿ ಜನರು ವಿವಿಧ ರೀತಿಯ ಅಡುಗೆಗಳನ್ನ ಮಾಡುವುದನ್ನೆ ಮರೆತುಬಿಟ್ಟಿದ್ದಾರೆ. ಬೇಳೆ ಸಾರು, ಅನ್ನ ಮಾಡುವುದು ಸರ್ವೆ ಸಾಮಾನ್ಯವಾಗಿದ್ದು, ಬಹುಬೇಗ ಮಧುಮೇಹ ಬರುವ ಲಕ್ಷಣಗಳು ಹೆಚ್ಚಾಗಿವೆ. ಎಲ್ಲಾ ರೀತಿಯ ಧಾನ್ಯಗಳನ್ನು, ಸಿರಿಧಾನ್ಯಗಳನ್ನು, ದ್ವಿದಳ ಧಾನ್ಯಗಳನ್ನು ಮೊಳಕೆ ಕಾಳುಗಳಿಂದ ತಯಾರಿಸುವ ಆಹಾರ ಪದಾರ್ಥಗಳನ್ನು ಬಳಸುವುದು ಅಭ್ಯಾಸ ಮಾಡಿಕೊಳ್ಳಬೇಕು. ದಿನವೂ ಅರ್ಧ ಗಂಟೆ ಉತ್ತಮ ದೈಹಿಕ ಚಟುವಟಿಕೆಗಳಾದ ಯೋಗ, ಧ್ಯಾನ, ವ್ಯಾಯಾಮ, ವಾಕಿಂಗ್ ಮಾಡುವುದರೊಂದಿಗೆ ಉತ್ತಮ ಆರೋಗ್ಯ ಹೊಂದಬಹುದಾಗಿದೆ ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕೆಓಎಫ್ ವ್ಯವಸ್ಥಾಪಕ ನಿರ್ದೇಶಕ ಡಾ ಜೈಕೃಷ್ಣ, ಜಿಲ್ಲಾ ಆಸ್ಪತ್ರೆಯ ನೇತ್ರಧಿಕಾರಿಗಳಾದ ಕೆ.ಸಿ.ರಾಮು, ಡಾ.ಐಶ್ವರ್ಯ, ಐಸಿಟಿಸಿ ವಿಭಾಗದ ನಾಗರಾಜ್, ಲೋಕೇಶ್, ಶುಶ್ರೂಷಾಧಿಕಾರಿ ಸ್ವಾತಿ, ಜಿಲ್ಲಾಸ್ಪತ್ರೆಯ ನೇತ್ರ ವಿಭಾಗದ ನೇಹಾ, ಗೀತಾ, ಅನಿಲ್ ಇದ್ದರು.

### 'ಬುದ್ಧ–ಬಸವ–ಅಂಬೇಡ್ಕರ್' ವಿಚಾರೋತ್ಸವ ಕಾರ್ಯಕ್ರಮದಲ್ಲಿ ಡಾ.ಅಪ್ಪಗೆರೆ ಸೋಮಶೇಖರ್ ಅಭಿಮತ

# ಬಹುತ್ವ ಸಂಸ್ಕೃತಿಯು ಭಾರತದ ಬೆನ್ನೆಲುಬು



**ಬಳ್ಳಾರಿ :** ಜಾತ್ಯತೀತ ಹಾಗೂ ಬಹುತ್ವ ಸಂಸ್ಕೃತಿಯು ಭಾರತದ ಬೆನ್ನೆಲುಬಾಗಿದ್ದು, ಬುದ್ಧ–ಬಸವ ಅವರ ತತ್ವಾದರ್ಶ ಹಾಗೂ ಅಂಬೇಡ್ಕರ್ ಅವರು ನೀಡಿರುವ ಸಂವಿಧಾನದಡಿ ನಾವೆಲ್ಲರೂ ಒಗ್ಗಟ್ಟಾಗಿದ್ದೇವೆ ಎಂದು ಕಲಬುರಗಿ ಕೇಂದ್ರೀಯ ವಿಶ್ವವಿದ್ಯಾಲಯದ ಕನ್ನಡ ಪ್ರಾಧ್ಯಾಪಕರಾದ ಡಾ.ಅಪ್ಪಗೆರೆ ಸೋಮಶೇಖರ್ ಹೇಳಿದರು.

ವಿಶ್ವವಿದ್ಯಾಲಯದ ಬಯಲು ರಂಗಮಂದಿರದಲ್ಲಿ ಬುಧವಾರ ಆಯೋಜಿಸಿದ್ದ "ಬುದ್ಧ, ಬಸವ, ಅಂಬೇಡ್ಕರ್ ವಿಚಾರೋತ್ಸವ" ಕಾರ್ಯಕ್ರಮವನ್ನು ಅವರುಗಳ ಭಾವಚಿತ್ರಕ್ಕೆ ಗಣ್ಯರೊಂದಿಗೆ ಪುಷ್ಪಾರ್ಚನೆ ನೆರವೇರಿಸಿ ಅವರು ಮಾತನಾಡಿದರು.

ಬುದ್ಧ, ಬಸವ, ಅಂಬೇಡ್ಕರ್‌ರವರ ತತ್ವಗಳಿಂದ ಭಾರತದ ಸಂವಿಧಾನ ರಚಿತವಾಗಿದೆ. ಸಂವಿಧಾನವು ದೇಶದಲ್ಲಿರುವ ಎಲ್ಲ ವರ್ಗದವರಿಗೆ ಅನ್ವಯಿಸುತ್ತದೆ. ವ್ಯಕ್ತಿ ಮತ್ತು ಸಮುದಾಯ ಪ್ರಗತಿ ಹೊಂದಲು ನಮ್ಮಲ್ಲಿರುವ ಕೀಳರಿಮೆ ಮನಸ್ಥಿತಿಯಿಂದ ಹೊರಬರಬೇಕು. ಈ ಮೂರು ಮಹಾನ್ ವ್ಯಕ್ತಿಗಳ ಆಶಯಗಳು ಭಾರತದ ಸಂವಿಧಾನದ ರೂಪದಲ್ಲಿ ಮೂಡಿ ಬಂದಿವೆ ಎಂದು ಪ್ರತಿಬಿಂಬಿಸಿದರು.

ಬೌದ್ಧ ಸಾಹಿತಿಗಳಾದ ಆಯುಷ್ಮಾನ್ ಬುದ್ಧಘೋಷ್ ದೇವೇಂದ್ರ ಹೆಗ್ಗಡೆ ಅವರು ಮಾತನಾಡಿ, ಬುದ್ಧ ಕಾಲಾತೀತ ಪುರುಷ. ಎಲ್ಲ ಕಾಲಕ್ಕೂ ಸಾಗುವ ಬುದ್ಧನ ವಿಚಾರಗಳು ಅಂದಿನಿಂದ ಇಲ್ಲಿಯವರೆಗೂ ಪ್ರಸ್ತುತವಾಗಿವೆ. ಬುದ್ಧನ ಪಂಚಶೀಲವು ಎಲ್ಲ ಜಾತಿ, ಧರ್ಮ, ಜನಾಂಗಕ್ಕೆ ಬೆಳಕನ್ನು ನೀಡುವುದಾಗಿದೆ. ಪ್ರತಿಯೊಂದು ಸಮಸ್ಯೆಗೂ ಬುದ್ಧನಲ್ಲಿ ಪರಿಹಾರವಿದೆ. ಇಂದಿನ ಯುವ ಪೀಳಿಗೆಗೆ ಬುದ್ಧನ ಪರಿಚಯ ಇಲ್ಲದಂತಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ಸಾಹಿತಿ ಹಾಗೂ ವಿವಿಯ ಸಿಂಡಿಕೇಟ್ ಸದಸ್ಯರಾದ ಪ್ರೊ. ಅಮರೇಶ್ ನುಗಡೋಣಿ ಅವರು ಮಾತನಾಡಿ, ಬುದ್ಧ, ಬಸವ, ಅಂಬೇಡ್ಕರ್ ಚಿಂತನೆಗಳು ಮನುಷ್ಯ ಜೀವನಕ್ಕೆ ಅವಶ್ಯವಾದ ವಿಚಾರಗಳಾಗಿವೆ. ಬಸವಣ್ಣನ ಚಿಂತನೆಗಳನ್ನು ನಾವೆಲ್ಲರೂ ಅಳವಡಿಸಿಕೊಳ್ಳಬೇಕಾಗಿದೆ. ಕತ್ತಲೆಯಿಂದ ಬೆಳಕಿನಡೆಗೆ ಸಾಗಲು ಇವರ ವಿಚಾರಗಳು ಪ್ರೇರಣೆಯಾಗಿವೆ. ಬಸವಣ್ಣನವರ ವಚನಗಳು ಮತ್ತು ಅವರಲ್ಲಿದ್ದ ಜ್ಞಾನದ ಅರಿವು ಹೊಸತನದೆಡೆಗೆ ಸಾಗುವುದಾಗಿದೆ ಎಂದರು.

ವಿವಿಯ ಕುಲಪತಿಗಳಾದ ಪ್ರೊ.ಎಂ ಮುನಿರಾಜು ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಅನ್ಯಾಯಕ್ಕೆ ಒಳಗಾದ ಪ್ರತಿಯೊಂದು ಜಾತಿಗೆ ನ್ಯಾಯ ದೊರಕಿಸಿದವರು ಅಂಬೇಡ್ಕರ್ ಅವರು. ಬುದ್ಧ, ಬಸವ ಅಂಬೇಡ್ಕರ್‌ರವರ ವೈಚಾರಿಕತೆಗಳನ್ನು ವಿದ್ಯಾರ್ಥಿಗಳಲ್ಲಿ ಮೂಡಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ. ಅವರ ಚಿಂತನೆಗಳನ್ನು ವಿದ್ಯಾರ್ಥಿಗಳು ಅಳವಡಿಸಿಕೊಂಡು ಕುಟುಂಬ, ಸಮಾಜ, ದೇಶಕ್ಕೆ ತಮ್ಮದೇ ಆದ ಕೊಡುಗೆ ನೀಡಬೇಕೆಂದು ಕರೆ ನೀಡಿದರು.

ವಿವಿಯಲ್ಲಿ ಬುದ್ಧ, ಬಸವ ಹಾಗೂ ಅಂಬೇಡ್ಕರ್ ಭಾಷಣ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ನಗದು ಬಹುಮಾನ ಮತ್ತು ಪ್ರಮಾಣ ಪತ್ರಗಳನ್ನು ವಿತರಿಸಲಾಗಿತ್ತು ಎಂದರು.

ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಎನ್.ಡಿ.ವೆಂಕಮ್ಮ ಅವರು ಬುದ್ಧ ವಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ವಿವಿಯ ಕುಲಸಚಿವರಾದ ಎಸ್.ಎನ್.ರುದ್ರೇಶ್, ಮೌಲ್ಯಮಾಪನ ಕುಲಸಚಿವರಾದ ಪ್ರೊ.ಎನ್.ಎಂ ಸಾಲಿ, ಕಾರ್ಯಕ್ರಮದ ಸಂಚಾಲಕರಾದ ಪ್ರೊ.ಎನ್.ಶಾಂತನಾಯ್ಕ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಕಾರ್ಯಕ್ರಮ ಪ್ರಾರಂಭಕ್ಕೂ ಮೊದಲು ವಿವಿಯ ಕುಲಸಚಿವರಾದ ಎಸ್ ಎನ್ ರುದ್ರೇಶ್ ಇವರ ನೇತೃತ್ವದಲ್ಲಿ ಬುದ್ಧ, ಬಸವ, ಅಂಬೇಡ್ಕರ್‌ರವರ ಭಾವಚಿತ್ರವನ್ನೊಳಗೊಂಡ ತೆರೆದ ವಾಹನ ಹಾಗೂ ಅವರುಗಳ ವೇಷಭೂಷಣ ಧರಿಸಿದ್ದ ವಿದ್ಯಾರ್ಥಿಗಳನ್ನು ಒಳಗೊಂಡ ಭವ್ಯ ಮೆರವಣಿಗೆಯು ವಿಶ್ವವಿದ್ಯಾಲಯದ ಆವರಣದಲ್ಲಿ ನಡೆಯಿತು.

ಕಾರ್ಯಕ್ರಮವನ್ನು ಡಾ.ಸುಷ್ಮಾ ಜೋಗನ್ ಹಾಗೂ ಡಾ.ಶ್ರೀದೇವಿ ಆಲೂರು ನಿರೂಪಿಸಿದರು. ಪ್ರದರ್ಶನ ಕಲೆ ಹಾಗೂ ನಾಟಕ ವಿಭಾಗದ ವತಿಯಿಂದ ಕ್ರಾಂತಿ ಗೀತೆಗಳನ್ನು ಪ್ರಸ್ತುತಪಡಿಸಲಾಯಿತು.

ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು. ಬಳಿಕ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮ ನಡೆದವು.

# ವಿಮಾ ಮೊತ್ತ ನೀಡಲು ನಿರಾಕರಿಸಿ ಸೇವಾನ್ಯೂನತೆ

**ಶಿವಮೊಗ್ಗ :** ಶಿವಮೊಗ್ಗದ ಶ್ರೀಮತಿ ಕೋಂ ಲೇಟ್ ಮಂಜುನಾಥಗೌಡ ಎಂಬುವವರು ಮ್ಯಾನೇಜಿಂಗ್ ಡೈರೆಕ್ಟರ್, ಶ್ರೀರಾಮ್ ಲೈಫ್ ಇನ್ಸೂರನ್ಸ್ ಕಂ.ಲಿ.– ಹೈದರಾಬಾದ್ ಮತ್ತು ಮ್ಯಾನೇಜರ್, ಶ್ರೀರಾಮ್ ಲೈಫ್ ಇನ್ಸೂರನ್ಸ್ ಕಂ.ಲಿ. ಶಿವಮೊಗ್ಗ ಇವರುಗಳ ವಿರುದ್ಧ ವಿಮಾ ಸೌಲಭ್ಯ ನೀಡುವಲ್ಲಿನ ಸೇವಾ ನ್ಯೂನತೆ ಕುರಿತು ವಕೀಲರ ಮೂಲಕ ಸಲ್ಲಿಸಿದ ದೂರನ್ನು ಆಲಿಸಿದ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ವಿಮಾ ಕಂಪೆನಿಯು ದೂರುದಾರರಿಗೆ ಸೂಕ್ತ ಪರಿಹಾರ ನೀಡುವಂತೆ ತೀರ್ಪು ನೀಡಿದೆ.

ದೂರುದಾರರ ಮಗನಾದ ಸಚಿನ್ ಎಂಬುವವರು 2022ರಲ್ಲಿ ರೂ. 23,411 /– ಪಾವತಿಸಿ ಶ್ರೀರಾಮ್ ಲೈಫ್ ಇನ್ಸೂರನ್ಸ್ ಕಂಪನಿಯಿಂದ ಪಾಲಿಸಿಯನ್ನು ಪಡೆದಿರುತ್ತಾರೆ. 2023ರಲ್ಲಿ ಸಚಿನ್ ಆತ್ಮಹತ್ಯೆ ಮಾಡಿಕೊಂಡಿದ್ದು, ಪಾಲಸಿದಾರನ ತಾಯಿಯವರು ವಿಮಾ ಹಣವನ್ನು ಪಡೆಯಲು ಕ್ಲೈಮ್ ಮಾಡಿರುತ್ತಾರೆ. ಆದರೆ ಇನ್ಸೂರನ್ಸ್ ಕಂಪನಿಯವರು ನೀಡಲು ನಿರಾಕರಿಸಿದ್ದು, ಲೀಗಲ್ ನೋಟೀಸ್‌ಗೂ ಕೂಡ ಉತ್ತರ ಕೊಡದೆ ವಿಮಾ ಹಣವನ್ನೂ ಕೊಡದೆ ಸೇನಾ ನ್ಯೂನ್ಯತೆ ಎಸಗಿದ್ದಾರೆಂದು ಆಯೋಗಕ್ಕೆ ದೂರು ಸಲ್ಲಿರುತ್ತಾರೆ.

ಆಯೋಗವು ದೂರನ್ನು ಪರಿಶೀಲಿಸಿ ನೀಡಿದ ನೋಟಿಸ್‌ಗೆ ಎದುರುದಾರರು ವಕೀಲರ ಮೂಲಕ ಹಾಜರಾಗಿ ತಕರಾರು ಸಲ್ಲಿಸಿರುತ್ತಾರೆ. ದೂರುದಾರರು ಮತ್ತು ಎದುರುದಾರರು ಸಲ್ಲಿಸಿರುವ ಪ್ರಮಾಣ ಪತ್ರ ಮತ್ತು ದಾಖಲೆಗಳನ್ನು ಪರಿಶೀಲಿಸಿ ಮತ್ತು ಉಭಯ ಪಕ್ಷಗಾರರ ವಕೀಲರ ವಾದವನ್ನು ಆಲಿಸಿ, ಪಾಲಿಸಿ ವಿತರಿಸಿದ ಒಂದು ವರ್ಷದೊಳಗೆ ಪಾಲಿಸಿ ಪಡೆದುಕೊಂಡ ವ್ಯಕ್ತಿ ಆತ್ಮಹತ್ಯೆ ಮಾಡಿಕೊಂಡರೆ ಮೊದಲನೆ ಪ್ರೀಮಿಯಂನ ಮೊತ್ತದಲ್ಲಿ ಶೇ.80ರಷ್ಟು ಪಾವತಿಸಬೇಕಾಗಿರುತ್ತದೆ ಎಂಬ ವಿಷಯವು ಪಾಲಿಸಿಯ ಷರತ್ತಿನಲ್ಲಿರುತ್ತದೆ. ಆದ್ದರಿಂದ ಎದುರುದಾರರು ಸೇವಾ ನ್ಯೂನತೆ ಎಸಗಿರುವುದಾಗಿ ಪರಿಗಣಿಸಿ ಈ ಆದೇಶದ 45 ದಿನಗಳೊಳಗೆ ಪಾಲಿಸಿಯ ಮೊದಲನೇ ಪ್ರೀಮಿಯಂ ಮೊತ್ತದ ಶೇ.80 ರಷ್ಟು ಅಂದರೆ ರೂ. 17,506/– ಗಳನ್ನು ವಾರ್ಷಿಕ ಶೇ.10% ಬಡ್ಡಿಯೊಂದಿಗೆ ದಿ: 22/11/2024 ರಿಂದ ಪೂರ ಹಣ ನೀಡುವವರೆಗೂ, ತಪ್ಪಿದಲ್ಲಿ ಈ ಮೊತ್ತಕ್ಕೆ ಶೇ.12% ರಂತೆ ಬಡ್ಡಿ ಸಹಿತ ಪಾವತಿಸಲು ಹಾಗೂ ರೂ.50,000 ಗಳನ್ನು ಮಾನಸಿಕ ಹಿಂಸೆಗಾಗಿ ಮತ್ತು ರೂ.10,000 ಗಳನ್ನು ವ್ಯಾಜ್ಯದ ಖರ್ಚಾಗಿ ನೀಡಬೇಕೆಂದು, ತಪ್ಪಿದಲ್ಲಿ ಈ ಮೊತ್ತಗಳ ಮೇಲೆ ವಾರ್ಷಿಕ ಶೇ.12% ಬಡ್ಡಿಯನ್ನು ಈ ಆದೇಶವಾದ ದಿನಾಂಕದಿಂದ ಹಣವನ್ನು ಪಾವತಿಸುವವರೆಗೂ ನೀಡಬೇಕೆಂದು ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಟಿ.ಶಿವಣ್ಣ ಮತ್ತು ಸದಸ್ಯರಾದ ಬಿ.ಡಿ.ಯೋಗಾನಂದ ಭಾಂಡ್ಯ ಇವರನ್ನೊಳಗೊಂಡ ಪೀಠವು ಮೇ.05 ರಂದು ಆದೇಶಿಸಿದೆ ಎಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸಹಾಯಕ ರಿಜಿಸ್ಟ್ರಾರ್ ಎಂ.ಟಿ.ಗಂಗಾಧರ ನಾಯ್ಕ್ ತಿಳಿಸಿದ್ದಾರೆ.

# ಮಹಿಳೆಯರು ಆರ್ಥಿಕ ಸಬಲರಾಗಬೇಕು : ಆಶಾಬೋಸ್ಲೆ

**ತರೀಕೆರೆ:** ಸಮಾಜದಲ್ಲಿ ವಿಧವಾ ಮಹಿಳೆಯರ ಸಬಲೀಕರಣ ಕುರಿತು ಮಹಿಳೆಯರು ತಮ್ಮ ಹಕ್ಕನ್ನು ಪಡೆದುಕೊಳ್ಳಬೇಕು ಮತ್ತು ಕುಟುಂಬದಲ್ಲಿ ಆರ್ಥಿಕ ಸಬಲೀಕರಣ ಆಗಬೇಕು ಎಂದು ಸೀನಿಯರ್ ಚೇಂಬರ್ ಇಂಟರ್ನ್ಯಾಷನಲ್ ಸಂಸ್ಥೆಯ ತಾಲ್ಲೂಕು ಅಧ್ಯಕ್ಷೆ ಆಶಾಬೋಸ್ಲೆ ತಿಳಿಸಿದರು.

ಅವರು ಸೀನಿಯರ್ ಚೇಂಬರ್ ಇಂಟರ್ನ್ಯಾಷನಲ್ ಸಂಸ್ಥೆ ವತಿಯಿಂದ ತಾಲ್ಲೂಕಿನ ಬೇಲೇನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಎ.ರಂಗಾಪುರ ಗ್ರಾಮದಲ್ಲಿ ವಿಧವಾ ಮಹಿಳೆಯರಿಗೆ ಸಬಲೀಕರಣ ಕಾರ್ಯಕ್ರಮ ಅಧ್ಯಕ್ಷೆ ವಹಿಸಿ ಮಾತನಾಡಿದರು. ಕಾರ್ಯಕ್ರಮ ಪ್ರಾರಂಭದಲ್ಲಿ ಕಾಶ್ಮೀರದ ಪಹಲ್ಗಾಮ್‌ನಲ್ಲಿ ಮಡಿದ 26 ಜನ ಮೃತರಾದ ವ್ಯಕ್ತಿಗಳಿಗೆ ಮೌನಚರಣೆ ಮೂಲಕ ಶ್ರದ್ಧಾಂಜಲಿ ಸಲ್ಲಿಸಿ ನಂತರ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡುತ್ತಾ ಮಹಿಳೆಯರಿಗೆ ವಿವಿಧ ಕ್ಷೇತ್ರಗಳಲ್ಲಿ ಸ್ಥಾನಮಾನ ಇದೆ. ಪಂಚಾಯಿತಿಯಲ್ಲೂ ಸಹ ಶೇ.50 ರಷ್ಟು ಮೀಸಲಾತಿ ಇದೆ ಎಂದು ತಿಳಿಸಿದರು.

ಸಂಸ್ಥೆಯ ಖಜಾಂಚಿ ಯಶೋಧ ಆಂಜನೇಯ ಮಾತನಾಡುತ್ತಾ ಮಹಿಳೆಯರು ತಮ್ಮ ಬದುಕಿನ ಜೊತೆಗೆ ಸ್ವ–ಸಹಾಯ ಸಂಘಗಳನ್ನು ಮಾಡಿಕೊಂಡು ಉಳಿತಾಯ ಅದರ ಜೊತೆಗೆ ಸರ್ಕಾರದ ವಿವಿಧ ಸಾಲ ಸೌಲಭ್ಯಗಳು ಪಡೆದುಕೊಳ್ಳಬೇಕು. ಅದರಲ್ಲೂ ವಿಧವಾ ಮಹಿಳೆಯರು ತಮ್ಮ ಸಬಲೀಕರಣ ದತ್ತ ಹೆಜ್ಜೆ ಹಾಕಬೇಕು. ಹಪ್ಪಳ, ಉಪ್ಪಿನ ಕಾಯಿ, ರೊಟ್ಟಿ ಹೀಗೆ ಹಲವಾರು ಉತ್ಪನ್ನಗಳನ್ನು ಮನೆಯಲ್ಲಿ ಬಿಡುವಿನ ಸಮಯದಲ್ಲಿ ಮಾಡಬಹುದರಿಂದ ಆರ್ಥಿಕ ಸಬಲೀಕರಣ ಹೊಂದಬಹುದೆಂದರು.

# ಸಿ.ಕೆ.ಪುರದಲ್ಲಿ ಯುಜುಡಿ ಪೈಪು ಹೊಡೆದು 15 ದಿವಸವಾದರೂ ರಿಪೇರಿ ಕಾಣದಾಗಿದೆ : ಡಾ ಎಚ್.ಕೆ.ಎಸ್. ಸ್ವಾಮಿ



**ಚಿತ್ರದುರ್ಗ :** ಸಿ.ಕೆ.ಪುರದ ಮುಖ್ಯರಸ್ತೆಯಲ್ಲಿ ಯುಜಿಡಿ ಪೈಪ್ ಗಳು 15 ದಿನದಿಂದ ಕಟ್ಟಿಕೊಂಡು, ಗಲೀಜು ನೀರು ರಸ್ತೆಯ ಮೇಲೆ ಜಲಪಾತದಂತೆ ಹರಿಯುತ್ತಿದ್ದರೂ ಸಹ ನಗರಸಭೆಯವರ ಗಮನಕ್ಕೆ ಬಾರದಿರುವುದು ಶೋಚನೀಯ, ಯುಸಿಡಿ ಪೈಪ್ ಗಳು ಕಟ್ಟಿಕೊಂಡು ಗಲೀಜ್ ನೀರು ರಸ್ತೆಗೆ ಚೆಲ್ಲುತ್ತಿದ್ದು ರಸ್ತೆಯಲ್ಲಿ ನಡೆದಾಡುವ ಜನರು ಗಲೀಜನ್ನ ದಾಟಿಕೊಂಡು, ತುಳಿದುಕೊಂಡು, ಮೂಗು ಮುಚ್ಚಿಕೊಂಡು, ನಡೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಶಾಲೆಗೆ ಹೋಗುವ ವಿದ್ಯಾರ್ಥಿಗಳು, ಸಾರ್ವಜನಿಕರು ವೃದ್ಧರು, ಈ ಗಲೀಜು ನೀರನ್ನು ತುಳಿದುಕೊಂಡು ರಸ್ತೆ ದಾಟಬೇಕಾಗಿದೆ. ವೇಗವಾಗಿ ಚಲಿಸುವ ವಾಹನಗಳು ಗಲೀಜು ನೀರನ್ನು ಅಕ್ಕಪಕ್ಕ ಸಾರ್ವಜನಿಕರಿಗೆ ಸಿಡಿಸಿ, ಅವರ ಬಟ್ಟೆಗಳನ್ನ ಗಲೀಜು ಗೊಳಿಸುತ್ತಿವೆ. ಶಾಲಾ ಮಕ್ಕಳು ಈ ಗಲೀಜು ನೀರನ್ನು

ಸಿಡಿಸಿಕೊಂಡು, ಸಮವಸ್ತ್ರ ಗಳನ್ನ ಗಲೀಜು ಮಾಡಿಕೊಂಡು, ಶಾಲೆ ಕಾಲೇಜುಗಳಿಗೆ ಹೋಗುತ್ತಿದ್ದಾರೆ. ಸುತ್ತಮುತ್ತಲು ವಾಸವಿರುವ ನಿವಾಸಿಗಳು 15 ದಿನದಿಂದ ಗಲೀಜು ಮತ್ತು ದುರ್ವಾಸನೆಯನ್ನು ಸಹಿಸಿಕೊಂಡು ಬದುಕುವಂತಾಗಿದೆ, ಅಲ್ಲಿಯ ನಿವಾಸಿಗಳಿಗೆ ನರಕದಲ್ಲಿ ಬದುಕುತ್ತಿದ್ದೇವೆ ಎಂಬ ಭಾವನೆ ಮೂಡುತ್ತಿದೆ, ರಸ್ತೆಯಲ್ಲಿ ಸಂಚರಿಸುವ ಸಾರ್ವಜನಿಕರಿಗೂ ಸಹ ಈ ಕೆಟ್ಟ ವಾಸನೆ ಬಡಿದು, ಮೂಗು ಮುಚ್ಚಿಕೊಂಡು, ಗಾಡಿ ಚಲಾಯಿಸಿಕೊಂಡು ರಸ್ತೆದಾಟುತ್ತಿದ್ದಾರೆ, ಇದರ ಬಗ್ಗೆ ನಗರಸಭೆಯವರು ಗಮನಹರಿಸಿ ಶೀಘ್ರವಾಗಿ ರಿಪೇರಿ ಮಾಡಿ, ಜನರ ಆರೋಗ್ಯ ರಕ್ಷಿಸಬೇಕೆಂದು ಕರ್ನಾಟಕ ಜ್ಞಾನ–ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿ ಅವರು ವಿನಂತಿಸಿಕೊಂಡಿದ್ದಾರೆ.

ಜನರ ಆರೋಗ್ಯದ ಜೊತೆ ನಗರಸಭೆ ಚೆಲ್ಲಾಟ ಮಾಡುವುದನ್ನು ನಿಲ್ಲಿಸಿ, ನಗರ ವೀಕ್ಷಣೆ ಮಾಡುವಂತಹ ಸಂದರ್ಭದಲ್ಲಿ, ಎಲ್ಲೆಲ್ಲಿ ಯುಜಿಡಿ ಪೈಪ್ಗಳು ಹೊಡೆದಿದೆ, ಮುಚ್ಚಿ ಹೋಗಿವೆ ಹಾಗೂ ಗಲೀಜು ನೀರನ್ನು ಹೊರ ಸೂಸುತ್ತಿವೆ ಎಂಬುದನ್ನು ಕಂಡು ಹಿಡಿದು, ಒಂದೆರಡು ದಿನದಲ್ಲಿ ರಿಪೇರಿ ಮಾಡಿದರೆ ಜನರು ಸಹ ಸಹಿಸಿಕೊಳ್ಳುತ್ತಾರೆ, ಆದರೆ 15 ದಿವಸವಾದರೂ ಸಹ ಮುಖ್ಯರಸ್ತೆಯಲ್ಲಿ ಯುಜಿಡಿ ಪೈಪ್ ನಿಂದ, ಗಲೀಜು ನೀರು, ಜಲಪಾತದಂತೆ ಹೊರ ಚಿಮ್ಮುತ್ತಿದ್ದರು ಸಹ ನಗರಸಭೆಯವರ ಅಧಿಕಾರಿಗಳ ಗಮನಕ್ಕೆ ಬಾರದಿರುವುದು ಆಶ್ಚರ್ಯವಾಗಿದೆ. ಜನರ ಆರೋಗ್ಯವಾದ ಬಗ್ಗೆ ಕಾಳಜಿ ವಹಿಸುವಂತಹ ಆರೋಗ್ಯ ಇಲಾಖೆ, ನಗರಸಭೆ, ಜಿಲ್ಲಾಡಳಿತ ಇಂತಹ ಕೆಲಸಗಳನ್ನು ತುರ್ತು ನಿರ್ವಹಣೆ ಎಂದು ಪರಿಗಣಿಸಿ, ಶೀಘ್ರವಾಗಿ ಅವುಗಳನ್ನು ಸರಿಪಡಿಸಿ, ಜನರನ್ನ ಆರೋಗ್ಯಪೂರ್ಣವಾಗಿ ಬದುಕಲು ಅವಕಾಶ ಮಾಡಿಕೊಡಬೇಕು ಎಂದರು.

ನಗರದ ಬಹಳಷ್ಟು ಕಡೆ ಯುಜಿಡಿ ಪೈಪ್ಗಳು ಸರಿಯಾಗಿ ನಿರ್ವಹಣೆ ಮಾಡದೆ, ಅವುಗಳನ್ನ ಸರಿಪಡಿಸಲು ಯಂತ್ರಗಳಿಲ್ಲದೆ ಅಥವಾ ಯಂತ್ರಗಳಿದ್ದರೂ ಸಹ ಅವು ಕೆಟ್ಟು ನಿಂತಿರುವ ಪರಿಸ್ಥಿತಿಯಲ್ಲಿದ್ದರೆ, ಅವುಗಳನ್ನು ರಿಪೇರಿ ಮಾಡಿಸಿ, ಕೆಟ್ಟು ನಿಂತಿರುವ ಯಂತ್ರಗಳನ್ನ ಸರಿಪಡಿಸಿಕೊಂಡು, ನಗರಸಭೆ ಶೀಘ್ರವಾಗಿ ಇಂತಹ ಯುಜಿಡಿ ಪೈಪ್ಗಳನ್ನ ಸರಿಯಾಗಿ ನಿರ್ವಹಣೆ ಮಾಡಿ, ಸರಾಗವಾಗಿ ಗಲೀಜು ನೀರು ಹರಿದು ಹೋಗುವಂತೆ ಮಾಡಬೇಕಾಗಿದ್ದು ಅವರ ಕರ್ತವ್ಯವಾಗಿದೆ ಎಂದರು.


ಮುಖ್ಯ ರಸ್ತೆಯಲ್ಲಿ ಯುಜುಡಿ ಪೈಪ್ ಹೊಡೆದು 15 ದಿವಸವಾದರೂ ರಿಪೇರಿ ಕಾಣದೆ, ಜನರು ಅರ್ಜಿ ಹಿಡಿದು ನಗರಸಭೆಗೆ, ಕಮಿಷನ್ ರವರನ್ನು, ಆಯುಕ್ತರನ್ನ ಭೇಟಿಯಾಗಲು ಗಂಟೆಗಟ್ಟಲೆ ಕಾದು, ಅರ್ಜಿ ಸಲ್ಲಿಸಿ, ಮನೆಗೆ ವಾಪಸ್ ಆಗಿ ಬಂದು, ಬೇಜಾರಾಗಿ ಕುಳಿತಿರುವ ನಾಗರಿಕರಿಗೆ, ಸಹಾಯ ಮಾಡುವಂತಹ ಯಾವುದಾದರೂ ಒಂದು ವ್ಯವಸ್ಥೆ ನಿರ್ಮಾಣವಾಗಬೇಕು ಎಂದರು.

ನಾಗರೀಕರ ಸಮಸ್ಯೆಗಳನ್ನ ದೂರವಾಣಿಯ ಮುಖಾಂತರವೇ ಪರಿಶೀಲಿಸಿ, ಸುಲಭವಾಗಿ ಇಂತಹ ಪರಿಹಾರಗಳನ್ನ ಕಂಡುಕೊಳ್ಳಬಹುದಾದಂತ ವ್ಯವಸ್ಥೆ ನಿರ್ಮಾಣವಾಗಬೇಕು. ತೆರಿಗೆ ಕಟ್ಟಿದ ಜನರನ್ನ ಮತ್ತೆ ಮತ್ತೆ ಕಚೇರಿಗೆ ಅರ್ಜಿ ಹಿಡಿದುಕೊಂಡು ಅಲೆದಾಡಿಸುವಂತಹ ಪರಿಸ್ಥಿತಿ ನಿರ್ಮಾಣ ಮಾಡಿರುವುದು ನಮ್ಮ ದೇಶದಲ್ಲಿ ಆಡಳಿತ ವ್ಯವಸ್ಥೆ ಎಷ್ಟರ ಮಟ್ಟಿಗೆ ಜನ ವಿರೋಧಿಯಾಗಿದೆ ಎಂಬುದನ್ನ ಅರ್ಥ ಮಾಡಿಕೊಳ್ಳಬಹುದು. ಬ್ರಿಟಿಷರ ಆಡಳಿತದಿಂದಲು ಸಹ ನಾವು ಜನ ವಿರೋಧಿ ನೀತಿಗಳನ್ನೇ ಅಳವಡಿಸಿಕೊಂಡು, ಅವುಗಳನ್ನೇ ಮುಂದುವರಿಸಿಕೊಂಡು ಬರುತ್ತಿರುವುದ ಲಕ್ಷಣಗಳು ಎದ್ದು ಕಾಣುತ್ತಿವೆ. ಭಾರತ ಸ್ವಾತಂತ್ರ ಗಳಿಸಿದರು ಸಹ ಇನ್ನೂ ಸ್ವತಂತ್ರವಾಗಿ ಚಿಂತನೆ ಮಾಡದೆ, ಸ್ವತಂತ್ರವಾಗಿ ಕೆಲಸ ನಿರ್ವಹಿಸದೆ, ಗುಲಾಮಗಿರಿಯ ಲಕ್ಷಣವನ್ನೇ ಇನ್ನೂ ತೋರಿಸುತ್ತಿರುವುದು ಆಶ್ಚರ್ಯಕರವಾಗಿದೆ ಎಂದರು. ನಗರಗಳ ಅಭಿವೃದ್ಧಿಯಲ್ಲಿ ಯುಜಿಡಿ ಪೈಪ್ಗಳು ನಿರ್ವಹಣೆಗಾಗಿ ಸರಿಯಾದ ಯಂತ್ರೋಪಕರಣಗಳನ್ನು ಇಟ್ಟುಕೊಳ್ಳದಿದ್ದರೆ ಇಂತಹ ಅನಾಹುತಗಳು ಹೆಚ್ಚಾಗುತ್ತಾ ಬರುತ್ತದೆ, ಬೆಂಕಿ ಬಿದ್ದಾಗ ಬಾವಿ ತೋಡುವ ಪ್ರವೃತ್ತಿ ನಮ್ಮದಾಗಿದೆ, ಎಲ್ಲಾ ಕಡೆ ಯುಜಿಡಿ ಪೈಪಿಗಳು ಒಂದಲ್ಲ ಒಂದು ದಿನ ತೆರೆದುಕೊಂಡು, ಮುಚ್ಚಿಕೊಂಡು, ಕಟ್ಟಿಕೊಂಡು ನೀರು ಹೊರ ಚೆಲುವುದಂತು ಸಾಮಾನ್ಯವಾದ ಲಕ್ಷಣವಾಗಿದೆ. ಎಂಥಾ ಇಂಜಿನಿಯರಿಂಗ್ ಕೆಲಸ ಮಾಡಿದರು ಸಹ, ಇವು ಮಧ್ಯೆ ಮಧ್ಯೆ ಕೈ ಕೊಡುವ ಸಂದರ್ಭದಲ್ಲಿ, ನಿರ್ವಹಣೆ ಮಾಡುವಂತಹ ಚಾಣಾಕ್ಷತನವನಾದರೂ ನಾವು ಅಳವಡಿಸಿಕೊಂಡಿರಬೇಕಾಗುತ್ತದೆ. ಜನರ ಆರೋಗ್ಯದ ಜೊತೆ ಚೆಲ್ಲಾಟ ಮಾಡಿಕೊಂಡು, ಅವರ ಬದುಕನ್ನ ನರಕಮಯ ಮಾಡುವುದು ಎಷ್ಟರಮಟ್ಟಿಗೆ ನ್ಯಾಯ ಎಂದು ಪ್ರಕಟ ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

## ರಾಜ್ಯಾದ್ಯಾಂತ ವರುಣನ ಆರ್ಭಟ: ಸಿಡಿಲಿಗೆ 7 ಮಂದಿ ಬಲಿ

**ಬೆಂಗಳೂರು:** ಬೆಂಗಳೂರು ಸೇರಿದಂತೆ ರಾಜ್ಯದ ಹಲವಾರು ಭಾಗಗಳಲ್ಲಿ ಮಳೆಯಾಗಿದೆ. ಬಿರುಗಾಳಿ ಮತ್ತು ಗುಡುಗು ಸಹಿತ ಮಳೆಯು ಮೇ ಮಧ್ಯಭಾಗದ ವಿಶಿಷ್ಟ ಹವಾಮಾನ ಬದಲಾವಣೆಗಳ ಆರಂಭಕ್ಕೆ ಮುನ್ನುಡಿ ಬರೆದಿದೆ. ಭಾರತೀಯ ಹವಾಮಾನ ಇಲಾಖೆ ಈ ಹಿಂದೆ ಬೆಂಗಳೂರು ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಗುಡುಗು ಸಹಿತ ಹಗುರದಿಂದ ಮಧ್ಯಮ ಮಳೆಯಾಗುವ ಮುನ್ಸೂಚನೆ ನೀಡಿತ್ತು. ರಾಜ್ಯದಲ್ಲಿ ಮಂಗಳವಾರ ಸಿಡಿಲಾಘಾತಕ್ಕೆ ಬಳ್ಳಾರಿ ಜಿಲ್ಲೆಯಲ್ಲಿ ಒಂದೇ ಕುಟುಂಬದ ಇಬ್ಬರು, ಕೊಪ್ಪಳ ಮತ್ತು ಹಾವೇರಿ ಜಿಲ್ಲೆಯಲ್ಲಿ ತಲಾ ಇಬ್ಬರು ಹಾಗೂ ವಿಜಯಪುರ ಜಿಲ್ಲೆಯ ಒಬ್ಬರು ಸೇರಿ ಒಟ್ಟು ಏಳು ಮಂದಿ ಮೃತಪಟ್ಟಿದ್ದಾರೆ.

# ಗ್ಯಾರಂಟಿ ಯೋಜನೆ ಅರ್ಹರಿಗೆ ತಲುಪಿಸುವಲ್ಲಿ ಶ್ರಮಿಸೋಣ



**ದಾವಣಗೆರೆ :** ತಾಲ್ಲೂಕು ಪಂಚಾಯ್ತಿ ಕಚೇರಿಯಲ್ಲಿ ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರ ನೂತನ ಕಚೇರಿಯನ್ನು ಜಿಲ್ಲಾ ಸಮಿತಿ ಅಧ್ಯಕ್ಷ ಶಾಮನೂರು ಬಸವರಾಜ್ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರವು ಬಡಜನರ ಕಲ್ಯಾಣಕ್ಕಾಗಿ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿದೆ. ಈ ಯೋಜನೆಗಳು ಗ್ರಾಮೀಣ ಮಟ್ಟದ ಫಲಾನುಭವಿಗಳೆಲ್ಲರಿಗೂ ತಲುಪುವಂತೆ ಮಾಡುವಲ್ಲಿ ತಾಲ್ಲೂಕು ಅನುಷ್ಠಾನ ಸಮಿತಿ ಸದಸ್ಯರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಯಾವ ಗ್ರಾಮಗಳಲ್ಲಿ ಗ್ಯಾರಂಟಿ ಯೋಜನೆಗಳು ಸಮರ್ಪಕವಾಗಿ ತಲುಪುತ್ತಿಲ್ಲ ಎಂಬುದನ್ನು ಸಮಿತಿ ಸದಸ್ಯರು ಗುರುತಿಸಬೇಕು. ಆಯಾ ಗ್ರಾಮಗಳ ಪಿಡಿಒಗಳಿಂದ ಮಾಹಿತಿ ಪಡೆದು ಅಧ್ಯಕ್ಷರ ಗಮನಕ್ಕೆ ತಂದರೆ, ಜಿಲ್ಲಾ ಸಮಿತಿಯ ಸದಸ್ಯರೂ ಆಗಿರುವ ತಾಲ್ಲೂಕು ಅಧ್ಯಕ್ಷರು ಜಿಲ್ಲಾ ಮಟ್ಟದ ಸಭೆಯಲ್ಲಿ ಪ್ರಸ್ತಾಪಿಸುತ್ತಾರೆ. ಆಗ ಅಧಿಕಾರಿಗಳೊಂದಿಗೆ ಚರ್ಚಿಸಿ ಸಮಸ್ಯೆಗಳನ್ನು ಪರಿಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡೋಣ. ಈ ಮೂಲಕ ಜಿಲ್ಲೆಗೂ ಹಾಗೂ ಜನಪ್ರತಿನಿಧಿಗಳಿಗೂ ಉತ್ತಮ ಹೆಸರು ತರೋಣ ಎಂದು ಕರೆ ನೀಡಿದರು.

ಗ್ಯಾರಂಟಿ ಅನುಷ್ಠಾನ ಸಮಿತಿಯ ತಾಲ್ಲೂಕು ಅಧ್ಯಕ್ಷ ಕೆ.ಬಿ. ಉಮೇಶ್ ಮಾತನಾಡಿ, ಅಧಿಕಾರಿಗಳ ಸಹಕಾರದೊಂದಿಗೆ ತಾಲ್ಲೂಕು ಮಟ್ಟದಲ್ಲಿ ಸರ್ಕಾರದ ಗ್ಯಾರಂಟಿ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವ ಕಾರ್ಯವನ್ನು ನಾವು ನಿಷ್ಠೆಯಿಂದ ಮಾಡುತ್ತೇವೆ ಎಂದು ಭರವಸೆ ನೀಡಿದರು.

ಸದಸ್ಯ ಎಂ.ಎನ್. ಸಮೀವುಲ್ಲಾ ಅವರು, ಯಾವುದೇ ಲೋಪದೋಷಗಳಾಗದಂತೆ ಗ್ಯಾರಂಟಿ ಯೋಜನೆಗಳು ಜನರಿಗೆ ತಲುಪುವಂತೆ ನೋಡಿ ಕೊಳ್ಳುತ್ತೇವೆ. ಇದರಿಂದ ಜಿಲ್ಲೆಯ ನಾಯಕರಿಗೂ ಮತ್ತು ಸರ್ಕಾರಕ್ಕೂ ಮುಜುಗರವಾಗದಂತೆ ಜಾಗರೂಕರಾಗಿರುತ್ತೇವೆ ಎಂದರು.

ತಾಲ್ಲೂಕು ಸಮಿತಿ ಸದಸ್ಯ ಲೋಕಿಕೆರೆ ಬಿ.ಹೆಚ್. ಅಂಜಿನಪ್ಪ ಅವರು, ಅನೇಕ ಪಿಡಿಒಗಳಿಗೆ ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯರ ಬಗ್ಗೆ ತಿಳಿದಿಲ್ಲ. ಈ ಕುರಿತು ಅಧಿಕಾರಿಗಳು ಸದಸ್ಯರ ಬಗ್ಗೆ ಮಾಹಿತಿ ನೀಡುವ ಕೆಲಸ ಮಾಡಬೇಕು ಎಂದು ಒತ್ತಾಯಿಸಿದರು. ಜಿಲ್ಲೆಯ ಇತರೆ ಕ್ಷೇತ್ರಗಳಿಗಿಂತ ಮಾಯಕೊಂಡ ಕ್ಷೇತ್ರದಲ್ಲಿ ಮೂಲ ಸೌಕರ್ಯಗಳ ಕೊರತೆ ಹೆಚ್ಚಾಗಿದೆ. ಕೇವಲ ಶಾಸಕರ ಅನುದಾನದಿಂದ ಕ್ಷೇತ್ರದ ಅಭಿವೃದ್ಧಿ ಸಾಧ್ಯವಿಲ್ಲ. ಆದ್ದರಿಂದ ಸಂಸದರು ಮತ್ತು ಜಿಲ್ಲಾ ಉಸ್ತುವಾರಿ ಸಚಿವರು ಮಾಯಕೊಂಡ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಗಮನ ನೀಡಬೇಕು ಎಂದು ಅವರು ಮನವಿ ಮಾಡಿದರು. ನಮ್ಮ ಕ್ಷೇತ್ರದ ಅನೇಕ ಕುಗ್ರಾಮಗಳಿಗೆ ಸೂಕ್ತ ಬಸ್ ವ್ಯವಸ್ಥೆ ಇಲ್ಲ. ಇದರಿಂದ ವಿದ್ಯಾರ್ಥಿಗಳು ಮತ್ತು ಮಹಿಳೆಯರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಬಸ್ ವ್ಯವಸ್ಥೆ ಸುಧಾರಣೆಯಾದರೆ ಮಾತ್ರ ಶಕ್ತಿ ಯೋಜನೆಯು ಅರ್ಥಪೂರ್ಣವಾಗುತ್ತದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಅಂಜಿನಪ್ಪ ಆಗ್ರಹಿಸಿದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಪಂಚಾಯ್ತಿ ಕಾರ್ಯನಿರ್ವಾಹಕ ಅಧಿಕಾರಿ ರಾಮಭೋವಿ, ಉಪಾಧ್ಯಕ್ಷ ಎಸ್.ಕೆ. ಚಂದ್ರಶೇಖರ್, ತಾಲ್ಲೂಕು ಅನುಷ್ಠಾನ ಸಮಿತಿ ಸದಸ್ಯರಾದ ವಿಜಯಕುಮಾರ್ ಎಸ್., ಡಿ.ರಾಜಪ್ಪ, ಎನ್.ಎಂ. ಮಂಜುನಾಥ್, ತಿಪ್ಪೇಸ್ವಾಮಿ, ಎಸ್. ಸತೀಶ್, ಅಂಜಿನಪ್ಪ ಬಿ.ಹೆಚ್., ನೂರುಲ್ಲಾ ಹಾಗೂ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಪಾಕಿಸ್ಥಾನಕ್ಕೆ ಒಂದು ಗತಿ ಕಾಣಿಸಲು ಇದೊಂದು ಒಳ್ಳೆಯ ಅವಕಾಶವಿತ್ತು, ಟ್ರಂಪ್ ಮಾತಿನಿಂದ ಕದನ ವಿರಾಮಕ್ಕೆ ಒಪ್ಪಿರುವುದು ಸರಿಯಲ್ಲ: ಹೊರಟ್ಟಿ



**ಬೆಳಗಾವಿ:** ಪಾಕಿಸ್ಥಾನ ನಾಶವಾಗಬೇಕಿತ್ತು. ಶತ್ರು ರಾಷ್ಟ್ರಕ್ಕೆ ಒಂದು ಗತಿ ಕಾಣಿಸಲು ಇದೊಂದು ಒಳ್ಳೆಯ ಅವಕಾಶವಿತ್ತು, ಟ್ರಂಪ್ ಮಾತಿನಿಂದ ಪ್ರಧಾನಮಂತ್ರಿ ನರೇಂದ್ರ ಕದನ ವಿರಾಮಕ್ಕೆ ಒಪ್ಪಿರುವುದು ಸರಿಯಲ್ಲ ಎಂದು ವಿಧಾನ ಪರಿಷತ್ತಿನ ಅಧ್ಯಕ್ಷ ಬಸವರಾಜ ಹೊರಟ್ಟಿ ಅವರು ಬೇಸರ ವ್ಯಕ್ತಪಡಿಸಿದ್ದಾರೆ.

ಬೆಳಗಾವಿ ಜಿಲ್ಲೆಯ ಹುಕ್ಕೇರಿ ಪಟ್ಟಣದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕದನ ವಿರಾಮ ಘೋಷಣೆಯಾದ ಕೆಲವೇ ನಿಮಿಷಗಳಲ್ಲಿ ಪಾಕಿಸ್ತಾನ ತನ್ನ ದುರ್ವರ್ತನೆಯನ್ನು ಮತ್ತೆ ಪ್ರದರ್ಶಿಸಿದೆ. ಯುದ್ಧ ನಿಲ್ಲಿಸಿದ್ದು ತಪ್ಪು ಎಂಬುದನ್ನು ಇದೇ ತೋರಿಸುತ್ತದೆ ಎಂದು ಹೇಳಿದರು.

ಭಾರತ ಮತ್ತು ಪಾಕಿಸ್ತಾನದ ನಡುವೆ ಮಧ್ಯಸ್ಥಿಕೆ ವಹಿಸಲು ಟ್ರಂಪ್ ಯಾರು? ನಾವು ಅದರ ವ್ಯವಹಾರಗಳಲ್ಲಿ ಮಧ್ಯಪ್ರವೇಶಿಸಿದರೆ ಅಮೆರಿಕ ನಮ್ಮ ಮಾತನ್ನು ಕೇಳುತ್ತದೆಯೇ ಎಂದು ಪ್ರಶ್ನಿಸಿದರು.

ಪಾಕಿಸ್ತಾನ ಎಂದಿಗೂ ಭಾರತದ ಹಿತಾಸಕ್ತಿಯಲ್ಲಿ ಕಾರ್ಯನಿರ್ವಹಿಸುವುದಿಲ್ಲ ಮತ್ತು ಯಾವಾಗಲೂ ಎದುರಾಳಿ ಎಂದು ಪರಿಗಣಿಸಬೇಕು. ಭಾರತ ಸರ್ಕಾರವು ಹೆಚ್ಚು ರಾಜಿಯಾಗದ ನಿಲುವನ್ನು ತೆಗೆದುಕೊಳ್ಳಬೇಕು, ಮೋದಿ ವಿದೇಶಿ ಪ್ರಭಾವಕ್ಕೆ ಮಣಿಯುವ ಬದಲು ದೃಢ ನಿರ್ಧಾರ ತೆಗೆದುಕೊಳ್ಳಬೇಕಾಗಿತ್ತು ಎಂದು ತಿಳಿಸಿದರು.

ಭಯೋತ್ಪಾದನೆಯ ಕುರಿತು ಮಾತನಾಡಿ, ಪಾಕಿಸ್ಥಾನಕ್ಕೆ ಒಂದು ಗತಿ ಕಾಣಿಸಲು ಇದೊಂದು ಒಳ್ಳೆಯ ಅವಕಾಶವಾಗಿತ್ತು. ಎಲ್ಲ ದೇಶಗಳು ಶೃಂಗ ಸಭೆ ನಡೆಸಿ ಭಯೋತ್ಪಾದಕರನ್ನು ನಾಶ ಮಾಡಿ ಸ್ವತ್ಛಗೊಳಿಸಬೇಕು. ರಾಜಕೀಯ ಪಕ್ಷಗಳಿಗೆ ದೇಶ ಮೊದಲು ಎಂಬ ಭಾವನೆ ಇರಬೇಕು ಎಂದು ಒತ್ತಿ ಹೇಳಿದರು.

# ಅಂಗನವಾಡಿ ಆರಂಭವಾಗಿ 50 ವರ್ಷ: ಅಕ್ಟೋಬರ್‌ನಲ್ಲಿ ಸುವರ್ಣ ಮಹೋತ್ಸವ ಆಚರಿಸಲು ನಿರ್ಧಾರ



**ಬೆಂಗಳೂರು:** ರಾಜ್ಯದಲ್ಲಿ ಅಂಗನವಾಡಿ ಕೇಂದ್ರಗಳು ಆರಂಭಗೊಂಡು ಅಕ್ಟೋಬರ್‌ಗೆ 50 ವರ್ಷಗಳು ತುಂಬಲಿವೆ. ಈ ಹಿನ್ನೆಲೆಯಲ್ಲಿ ಸುವರ್ಣ ಮಹೋತ್ಸವ ಆಚರಣೆಗೆ ನಿರ್ಧರಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮಾಹಿತಿ ನೀಡಿದರು.

ವಿಧಾನಸೌಧ ಸಮ್ಮೇಳನ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಮಗ್ರ ಶಿಶು ವಿಕಾಸ ಯೋಜನೆ ಬೆಂಗಳೂರು ಮತ್ತು ಮೈಸೂರು ವಿಭಾಗದ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಅರಮನೆ ಮೈದಾನದಲ್ಲಿ ಕಾರ್ಯಕ್ರಮ ಆಯೋಜಿಸಲು ತೀರ್ಮಾನಿಸಿದ್ದೇವೆ. ಕೇಂದ್ರ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಅನ್ನಪೂರ್ಣ ದೇವಿಯವರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಲಾಗುವುದು. ಈ ಸಂಬಂಧ "ನಾವು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಚರ್ಚಿಸಿದ್ದೇವೆ.

ಒಂದು ಲಕ್ಷಕ್ಕೂ ಹೆಚ್ಚು ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ಮತ್ತು ಇತರರು ಈ ಕಾರ್ಯಕ್ರಮಕ್ಕೆ ಹಾಜರಾಗಲಿದ್ದಾರೆ ಎಂದು ಅವರು ಹೇಳಿದರು. ಸಮಗ್ರ ಮಕ್ಕಳ ಅಭಿವೃದ್ಧಿ ಸೇವೆಗಳ (ಐಸಿಡಿಎಸ್) ಸಭೆಯನ್ನು ಪರಿಶೀಲಿಸಿದ ಹೆಬ್ಬಾಳ್ಕರ್, ಎಲ್‌ಕೆಜಿ ಮತ್ತು ಯುಕೆಜಿ ತರಗತಿಗಳನ್ನು ಪ್ರಾರಂಭಿಸುವ ಬಗ್ಗೆ ಒತ್ತಿ ಹೇಳಿದರು.

ನಾವು ಅಂಗನವಾಡಿ ಕೇಂದ್ರಗಳಲ್ಲಿ ಎಲ್‌ಕೆಜಿ, ಯುಕೆಜಿಯನ್ನು ಪ್ರಾರಂಭಿಸಬೇಕಾಗಿದೆ" ಎಂದರು. ಈ ತರಗತಿಗಳು ಪ್ರಾರಂಭವಾಗುವಂತೆ ನೋಡಿಕೊಳ್ಳಲು ಅವರು ಉಪ ನಿರ್ದೇಶಕರು ಮತ್ತು ಮಕ್ಕಳ ಅಭಿವೃದ್ಧಿ ಯೋಜನಾ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಐಸಿಡಿಎಸ್ ಅಡಿಯಲ್ಲಿ ಪೋಶನ್ ಟ್ರ್ಯಾಕರ್ ಸೂಚಕಗಳು, ಅನುದಾನ ಬಳಕೆ, ಅಂಗನವಾಡಿ ಕಟ್ಟಡಗಳ ನಿರ್ಮಾಣ, ಕಾರ್ಯಕರ್ತರು ಮತ್ತು ಸಹಾಯಕರ ನೇಮಕಾತಿ ಮತ್ತು ಆಯುಷ್ಮಾನ್ ಭಾರತ್ ಆರೋಗ್ಯ ಕಾರ್ಡ್‌ಗಳ ವಿತರಣೆಯಂತಹ ಹಲವಾರು ಯೋಜನೆಗಳ ಬಗ್ಗೆ ಚರ್ಚಿಸಲಾಯಿತು.

# ಬಿತ್ತನೆ ಬೀಜ ಮಾರಾಟ ಕೇಂದ್ರಗಳಲ್ಲಿ ದರಪಟ್ಟಿ ಪ್ರದರ್ಶಿಸಲು : ಎಡಿಸಿ ಸೂಚನೆ



**ತುಮಕೂರು:** ರೈತರ ಅನುಕೂಲಕ್ಕಾಗಿ ಬಿತ್ತನೆ ಬೀಜ ಹಾಗೂ ಕೃಷಿ ಉಪಕರಣಗಳ ದರಪಟ್ಟಿಯನ್ನು ಜಿಲ್ಲೆಯ ಎಲ್ಲಾ ರೈತ ಸಂಪರ್ಕ ಕೇಂದ್ರ ಮತ್ತು ಬೀಜ ಮಾರಾಟ ಕೇಂದ್ರಗಳಲ್ಲಿ ಕಡ್ಡಾಯವಾಗಿ ಪ್ರದರ್ಶಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸೋಮವಾರ ಸಂಜೆ ಜಿಲ್ಲಾಧಿಕಾರಿ ಕಚೇರಿ ನ್ಯಾಯಿಕ ಸಭಾಂಗಣದಲ್ಲಿ ಮುಂಗಾರು ಹಂಗಾಮಿಗಾಗಿ ಬಿತ್ತನೆ ಬೀಜ ಮತ್ತು ರಸಗೊಬ್ಬರಗಳ ವಿತರಣೆ, ದಾಸ್ತಾನಿಗೆ ಸಂಬಂಧಿಸಿದಂತೆ ಪೂರ್ವಭಾವಿ ಸಭೆ ನಡೆಸಿ ಮಾತನಾಡಿದ ಅವರು ಜಿಲ್ಲೆಯ ಎಲ್ಲಾ ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜಗಳನ್ನು ಸರ್ಕಾರ ನಿಗಧಿಪಡಿಸಿದ ದರದಲ್ಲೇ ಮಾರಾಟ ಮಾಡಬೇಕು. ರೈತರಿಗೆ ಅಗತ್ಯ ಬಿತ್ತನೆ ಬೀಜಗಳು ಸುಲಭವಾಗಿ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು. ಬಿತ್ತನೆ ಬೀಜ ಮಾರಾಟ ಕೇಂದ್ರಗಳಲ್ಲಿ ಬೀಜಗಳ ಕೊರತೆಯಾಗದಂತೆ ಕ್ರಮ ಕೈಗೊಳ್ಳಬೇಕೆಂದು ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಮೇ 20 ರಿಂದ ಬಿತ್ತನೆ ಬೀಜಗಳ ವಿತರಣೆ ಪ್ರಾರಂಭಿಸಲಾಗುತ್ತಿದ್ದು, ರೈತರಿಗೆ ಗುಣಮಟ್ಟದ ಬೀಜ ಒದಗಿಸುವ ದೃಷ್ಟಿಯಿಂದ ವಿತರಣೆಗೆ ಮುನ್ನ ಪ್ರತಿಯೊಂದು ಕೇಂದ್ರದಲ್ಲಿಯೂ ಬೀಜದ ತಳಿ ಹಾಗೂ ಪ್ರತಿ ಲಾಟ್‌ನಿಂದ ಬಿತ್ತನೆ ಬೀಜಗಳ ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೆ ಒಳಪಡಿಸಿ ಗುಣಮಟ್ಟವನ್ನು ಖಾತ್ರಿ ಪಡಿಸಿಕೊಂಡ ನಂತರ ವಿತರಣೆ ಕಾರ್ಯ ಕೈಗೊಳ್ಳಬೇಕು ಎಂದು ತಿಳಿಸಿದರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕ ರಮೇಶ್ ಮಾತನಾಡಿ, ಬಿತ್ತನೆ ಬೀಜ ಮಾರಾಟ ಮಾಡಲು ಜಿಲ್ಲೆಯಲ್ಲಿ 50 ರೈತ ಸಂಪರ್ಕ ಕೇಂದ್ರಗಳೊಂದಿಗೆ ಗುಬ್ಬಿ ತಾಲೂಕಿನ ಚೇಳೂರು; ಮಧುಗಿರಿ ತಾಲ್ಲೂಕು ಕಸಬಾ ಹಾಗೂ ಕೊಡಿಗೇನಹಳ್ಳಿ; ಪಾವಗಡ ತಾಲ್ಲೂಕು ಕಸಬಾ ಎಪಿಎಂಸಿ, ನಾಗಲಮಡಿಕೆ, ವೈ.ಎನ್.ಹೊಸಕೋಟೆ, ಲಿಂಗದಹಳ್ಳಿ, ಮಂಗಳವಾಡ; ಶಿರಾ ಎಪಿಎಂಸಿ, ತಾವರೆಕೆರೆ, ಪಟ್ಟನಾಯಕನಹಳ್ಳಿ, ಹುಲಿಕುಂಟೆ ಸೇರಿ ಒಟ್ಟು 12 ಹೆಚ್ಚುವರಿ ಮಾರಾಟ ಕೇಂದ್ರಗಳನ್ನು ತೆರೆಯಲಾಗುವುದು ಎಂದು ತಿಳಿಸಿದರು.

ರೈತ ಮುಖಂಡ ಆರಾಧ್ಯ ಮಾತನಾಡುತ್ತಾ, ಖಾಸಗಿ ರಸಗೊಬ್ಬರ ಮಾರಾಟ ಕೇಂದ್ರಗಳಲ್ಲಿ ಸರ್ಕಾರ ನಿಗಧಿಪಡಿಸಿದ ದರಕ್ಕಿಂತ ಹೆಚ್ಚಿನ ದರದಲ್ಲಿ ರಸಗೊಬ್ಬರವನ್ನು ಮಾರಾಟ ಮಾಡಲಾಗುತ್ತಿದೆ. ಜೊತೆಗೆ ರೈತರಿಗೆ ಬ್ಯಾಂಕುಗಳಲ್ಲಿ ತ್ವರಿತವಾಗಿ ಸಾಲ ಲಭ್ಯವಾಗದ ಕಾರಣ ಅವರು ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಮೊರೆ ಹೋಗಬೇಕಾದ ಪರಿಸ್ಥಿತಿ ಉಂಟಾಗುತ್ತಿದೆ. ರೈತರ ಸಮಸ್ಯೆಗಳನ್ನು ಸೂಕ್ಷ್ಮವಾಗಿ ಪರಿಗಣಿಸಿ ತಕ್ಷಣವೇ ಸೂಕ್ತ ಕ್ರಮ ಕೈಗೊಳ್ಳುವಂತೆ ಕೃಷಿ ಇಲಾಖೆಯ ಅಧಿಕಾರಿಗಳಲ್ಲಿ ಮನವಿ ಮಾಡಿದರು.

ಸಭೆಯಲ್ಲಿ ತೋಟಗಾರಿ–ಕೆ ಇಲಾಖೆ ಉಪ ನಿರ್ದೇಶಕ ಶಾರದಮ್ಮ, ತುಮಕೂರು ಉಪ ಕೃಷಿ ನಿರ್ದೇಶಕ ಹುಲಿರಾಜ್, ಮಧುಗಿರಿ ಉಪ ಕೃಷಿ ನಿರ್ದೇಶಕ ಚಂದ್ರಕುಮಾರ್ ಎಚ್.ಎಲ್, ಸಹಾಯಕ ಕೃಷಿ ನಿರ್ದೇಶಕರು ಹಾಗೂ ವಿವಿಧ ರೈತ ಮುಖಂಡರು ಉಪಸ್ಥಿತರಿದ್ದರು.

# ತುರ್ತು ಪರಿಸ್ಥಿತಿ ಹೆದರಿಸುವ, ಅಗತ್ಯ ಭದ್ರತೆ ಕೈಗೊಳ್ಳುವ ಅಣಕು ಪ್ರದರ್ಶನದ ಮೂಲಕ ಜಾಗೃತಿ ಕಾರ್ಯಕ್ರಮ



**ಹರಿಹರ :** ಜಿಲ್ಲಾಧಿಕಾರಿಗಳು ಹಾಗೂ ಉಪ ವಿಭಾಗಾಧಿಕಾರಿಗಳು ರವರ ಪತ್ರದ ಸೂಚನೆಯಂತೆ ತುರ್ತು ಪರಿಸ್ಥಿತಿ ಎದುರಿಸುವ ಹಾಗೂ ಅಗತ್ಯ ಭದ್ರತೆ ಕೈಗೊಳ್ಳುವ ಬಗ್ಗೆ ಅಣಕು ಪ್ರದರ್ಶನ ಹಾಗೂ ಜಾಗೃತಿ ಮೂಡಿಸುವ ಸಂಬಂಧ ಮಂಗಳವಾರ ನಗರದ ಕೆ.ಎಸ್.ಆರ್.ಟಿ.ಸಿ ಬಸ್ ಸ್ಟಾಂಡ್ ಬಳಿ ಬೆಳಿಗ್ಗೆ ಸುಮಾರು 10.00 ಘಂಟೆಗೆ ತಹಶೀಲ್ದಾರ್ ಕೆ.ಎಂ.ಗುರುಬಸವರಾಜ್ ಅಧ್ಯಕ್ಷತೆಯಲ್ಲಿ ಅಣಕು ಪ್ರದರ್ಶನ ಯಶಸ್ವಿಯಾಗಿ ನಡೆಯಿತು.

ಅಣಕು ಪ್ರದರ್ಶನದಲ್ಲಿ ಪೊಲೀಸ್ ಇಲಾಖೆ ಅಗ್ನಿಶಾಮಕ ದಳ ಗೃಹರಕ್ಷಕ ದಳ ಮುಂತಾದ ತಂಡಗಳಿಂದ ಯಶಸ್ವಿ ಪ್ರದರ್ಶನ ನಡೆಸಲಾಯಿತು. ಮಂಗಳವಾರ ವಾರದ ಸಂತೆಯ ದಿನವಾದ ಹಿನ್ನೆಲೆಯಲ್ಲಿ ನೂರಾರು ಜನ ನಗರದ ಗ್ರಾಮೀಣ ಪ್ರದೇಶದ ಜನರು ಹಣಕ್ಕೂ ಪ್ರದರ್ಶನವನ್ನು ವೀಕ್ಷಿಸಿದರು.

ಅಣಕು ಪ್ರದರ್ಶನದ ಮೂಲಕ ಕಾರ್ಯಾಚರಣೆಯನ್ನು ಅಗ್ನಿಶಾಮಕ ದಳದ ಪ್ರಭಾರಿ ಅಗ್ನಿಶಾಮಕ ಠಾಣಾಧಿಕಾರಿ ಆರ್. ಸಂಜೀವ್ ಕುಮಾರ್, ಪ್ರಧಾನ ಅಗ್ನಿಶಾಮಕರುಗಳಾದ ಕೆ.ಎಸ್ ಆಂಜನೇಯ, ಎಸ್.ಟಿ. ಬಸವರಾಜ್, ಸಿ.ಶಂಕರಮೂರ್ತಿ, ಚಾಲಕ ತಂತ್ರಜ್ಞ ಎಂ.ಪಿ.ಕುಮಾರ್, ಅಗ್ನಿಶಾಮಕ ಚಾಲಕರಾದ ಡಿ.ಚಂದ್ರಾ ನಾಯಕ್, ಜೆ.ಪತಿಯನಾಯಕ್, ಅಗ್ನಿಶಾಮಕರುಗಳಾದ ಎಚ್. ಮೋಹನ್ ಜೀತ್, ಎನ್.ಬಾಲು ಕುಮಾರ್, ಮಹೇಶ್ ಬೆಳಗೆರೆ, ಟಿ.ಎಂ.ಮಹಾದೇವ, ಎಂ.ಆರ್. ಚಂದನ್, ಭೂಷಣ್ ಕೆ ಹೊಸೂರ್, ಜೆ.ಕೆ. ಗವಿನಾಯಕ್, ಫಿರೋಜ್ ಖಾನ್ ದೇಸಾಯಿ ಮುಂತಾದವರು ಅತ್ಯುತ್ತಮವಾಗಿ ಅಣಕು ಪ್ರದರ್ಶನ ನಡೆಸಿಕೊಟ್ಟರು.

ಇಂದು ನಡೆದ ಅಣಕು ಪ್ರದರ್ಶನಕ್ಕೆ ಸರ್ಕಾರದ ಸುತ್ತೋಲೆಯ ಹಿನ್ನೆಲೆಯಲ್ಲಿ ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ಖುದ್ದಾಗಿ ಹಾಜರಾಗಿ ವೀಕ್ಷಣೆ ಮಾಡಿದ್ದು ಮಾತ್ರ ವಿಶೇಷವಾಗಿತ್ತು.

# ರೈತರಿಗೆ ಕಳಪೆ ಮತ್ತು ಕೆಳಮಟ್ಟದ ಪರಿಕರಗಳನ್ನು ಮಾರಾಟ ಮಾಡಬಾರದು



ಮೊಳಕಾಲ್ಮೂರು. ಪ್ರಸಕ್ತ ಸಾಲಿನಲ್ಲಿ ಉತ್ತಮ ಮುಂಗಾರು ಮಳೆ ನಿರೀಕ್ಷೆ ಇದ್ದು, ಯಾವುದೇ ಕಾರಣಕ್ಕೂ ರೈತರಿಗೆ ಕಳಪೆ ಮತ್ತು ಕೆಳಮಟ್ಟದ ಪರಿಕರಗಳನ್ನು ಮಾರಾಟ ಮಾಡಬಾರದೆಂದು ಸಹಾಯಕ ಕೃಷಿ ನಿರ್ದೇಶಕ ಎನ್.ವಿ.ಪ್ರಕಾಶ್ ತಿಳಿಸಿದರು.

ಪಟ್ಟಣದ ಲಕ್ಷ್ಮಿ ವೆಂಕಟೇಶ್ವರ ಅಗ್ರಿ ಮಾರ್ಟ್ ನ ಸಭಾಂಗಣದಲ್ಲಿ ಜಿ.ಪಂ. ಚಿತ್ರದುರ್ಗ, ತಾಲೂಕು ಪಂಚಾಯಿತಿ ಹಾಗೂ ಸಹಾಯಕ ಕೃಷಿ ಇಲಾಖೆ ಮೊಳಕಾಲ್ಮೂರು ಇವರ ಸಹಯೋಗದೊಂದಿಗೆ ತಾಲೂಕಿನ ಕೃಷಿ ಪರಿಕರ ಮಾರಾಟಗಾರರಿಗೆ "ದಾಖಲಾತಿ ನಿರ್ವಹಣೆ ಹಾಗೂ ಸುರಕ್ಷಿತ ಕೀಟನಾಶಕ ಬಳಕೆ" ಕುರಿತು ಹಮ್ಮಿಕೊಂಡಿದ್ದ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕೃಷಿ ಪರಿಕರ ಮಾರಾಟಗಾರರು ರೈತರಿಗೆ ಸಕಾಲಕ್ಕೆ ರಸಗೊಬ್ಬರ, ಕೃಷಿ ಪರಿಕರಗಳನ್ನು ಒದಗಿಸಬೇಕಾಗಿದೆ. ಕೀಟನಾಶಕ ಕಾಯಿದೆಯಡಿ ನೋಂದಣಿಯಾಗದ ಜೈವಿಕ ಕೀಟನಾಶಕಗಳ ಹೆಸರಿನಡಿ ವಿವಿಧ ಕೀಟನಾಶಕಗಳನ್ನು ಮಿಶ್ರಣಮಾಡಿ ಮಾರಾಟ ಮಾಡುತ್ತಿರುವವರ ವಿರುದ್ಧ ಸೂಕ್ತ ಕ್ರಮ ಜರುಗಿಸುವುದು. ಪಿ.ಒ.ಎಸ್. ಮಿಷನ್ ಮುಖಾಂತರ ವಹಿವಾಟು ನಡೆಸಬೇಕು. ರೈತರಿಗೆ ಅಧಿಕೃತ ರಶೀದಿ ಕೊಡಬೇಕು, ದಾಸ್ತಾನು ವಿವರ ವಾರಕ್ಕೊಮ್ಮೆ ವರದಿ ಸಲ್ಲಿಸಬೇಕು. ಕೃಷಿ ಪರಿಕರ ಮಾರಾಟಗಾರರ ನೊಂದಣಿ ಕಡ್ಡಾಯವಾಗಿ ನವೀಕರಣಗೊಳಿಸಿ ಕೊಂಡಿರಬೇಕೆಂದು ತಿಳಿಸಿದರು.

ಚಿತ್ರದುರ್ಗದ ಜಂಟಿ ಕೃಷಿ ನಿರ್ದೇಶಕರ ಕಛೇರಿಯ ಸಹಾಯಕ ಕೃಷಿ ನಿರ್ದೇಶಕರು(ಜಾರಿದಳ) ಸಂಕಾಳ ಮಲ್ಲನಗೌಡ ಮಾತನಾಡಿ ತಾಲೂಕಿನ ಕೃಷಿ ಪರಿಕರ ಮಾರಾಟಗಾರರು ಮಾರಾಟ ಮಾಡುವ ಅಧಿಕೃತ ಲೈಸನ್ಸ್ ಹೊಂದಿರುವುದು ಹಾಗು ಕಾಲ ಕಾಲಕ್ಕೆ ಮರು ನವೀಕರಣ ಮಾಡಿಕೊಳ್ಳುವುದಕ್ಕೆ ಆದ್ಯತೆ ನೀಡಲು ತಿಳಿಸುತ್ತಾ, ತಪ್ಪಿದಲ್ಲಿ ತಮ್ಮ ಮಾರಾಟ ಮಳಿಗೆಯನ್ನು ತಕ್ಷಣದಿಂದಲೆ ಸೀಜ್ ಮಾಡಲಾಗುವುದು, ರಸ ಗೊಬ್ಬರ ಮರಾಟಗಾರರು ಪಿ.ಓ.ಎಸ್. ಯಂತ್ರದ ಮೂಲಕವೇ ದಾಸ್ತಾನು ಪಡೆದು ಮಾರಾಟಮಾಡಬೇಕು, ಮಾರಾಟ ಮಾಡಿದ ಕೃಷಿ ಪರಿಕರಗಳಿಗೆ ಅಧಿಕೃತ ರಶೀದಿ ನೀಡಬೇಕು. ಕಳಪೆ ಗುಣಮಟ್ಟದ ಅಥವಾ ಅವಧಿ ಮೀರಿದ ಕೃಷಿ ಪರಿಕರಗಳನ್ನು ಮಾಡಿದ್ದು ಕಂಡುಬಂದಲ್ಲಿ ಕೃಷಿ ಪರಿಕರಗಳ ಕೃತಕ ಅಭಾವ ಸೃಷ್ಠಿಸಿದಲ್ಲಿ ನಿರ್ದಾಕ್ಷಣ್ಯವಾಗಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸುತ್ತಾ, ಈ ವರ್ಷ ಉತ್ತಮ ಮುಂಗಾರು ಮಳೆ ನಿರೀಕ್ಷೆ ಇದ್ದು, ರೈತರಿಗೆ ಸರಿಯಾದ ಸಮಯಕ್ಕೆ ರಸಗೊಬ್ಬರ, ಕೃಷಿ ಪರಿಕರಗಳನ್ನು ಒದಗಿಸಲು ಎಲ್ಲಾ ಅಧಿಕೃತ ಮಾರಾಟಗಾರರಿಗೆ ತಿಳಿಸಿದರು.

ಚಳ್ಳಕೆರೆ ವಿಭಾಗದ ಉಪ ಕೃಷಿ ನಿರ್ದೇಶಕ –2, ಬಿ.ಎನ್.ಪ್ರಭಾಕರ್ ಮಾತನಾಡಿ ಅಲ್ಪ ಪ್ರಮಾಣದ ಮೊಳಕಾಲ್ಮೂರು ಮತ್ತು ಚಳ್ಳಕೆರೆ ತಾಲೂಕುಗಳಲ್ಲಿ ಬಿದ್ದಂತ ಮಳೆಯನ್ನು ಸದ್ಬಳಕೆ ಮಾಡಿಕೊಂಡು ಆ ಸಂದರ್ಭದಲ್ಲಿಯೇ ಬಿತ್ತನೆ ಮಾಡಬೇಕಾಗಿದೆ. ರೈತರಿಗೆ ಕೃಷಿ ಪರಿಕರಗಳನ್ನು ತಕ್ಷಣವೇ ಸಿಗುವಂತಾಗಬೇಕಾಗಿದೆ. ಮುಂಚಿತವಾಗಿ ದಾಸ್ತಾನು ಮಾಡಿದ ಪರಿಕರಗಳಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುವುದು ಸಂಸ್ಕೃತಿಯಲ್ಲ. ಪ್ರತಿ ಸಂದರ್ಭದಲ್ಲಿ ಇತಿ ಮಿತಿಯೊಳಗೆ ರೈತರಿಗೆ ಶೋಷಣೆ ಮಾಡದೆ ವ್ಯವಹಾರವು ದೂರದೃಷ್ಠಿ ಹೊಂದಿರಬೇಕು. ಮಾರಾಟಗಾರರು ಅಧಿಕೃತ ಪರವಾನಗಿ ಹಾಗೂ ಧರ ಪಟ್ಟಿ ಕಾಣುವಂತೆ ಪಾರದರ್ಶಕವಾಗಿ ಪ್ರದರ್ಶಿಸಬೇಕು . ತಾಲೂಕಿನಲ್ಲಿ 64 ಡೀಲರ್ಸ್ ಗಳಿದ್ದು, ಈ ಜೊತೆಗೆ ಸೂಡೋ ಡೀಲರ್ಸ್ ಗಳಿದ್ದು, ರೈತರಿಗೆ ಸರಿಯಾದ ಸಮಯಕ್ಕೆ ರಸಗೊಬ್ಬರ, ಕೃಷಿ ಪರಿಕರಗಳನ್ನು ಒದಗಿಸಬೇಕೆಂದು ತಿಳಿಸಿದರು.

## ಪಾಕ್ 'ಉಗ್ರ ಮುಖ' ಬಯಲಿಗೆ ಭಾರತ ಪಣ

# ಭಯೋತ್ಪಾದಕ ರಾಷ್ಟ್ರದ ಮೇಲೆ ಒತ್ತಡ ಹೆಚ್ಚಿಸಲು 51 ಸಂಸದರು ವಿದೇಶಕ್ಕೆ



**ನವದೆಹಲಿ:** ಪಹಲ್ಗಾಮ್ ನರಮೇಧಕ್ಕೆ ಪ್ರತಿಯಾಗಿ ಪಾಕಿಸ್ತಾನದ ಉಗ್ರ ನೆಲೆ, ಸೇನಾ ನೆಲೆಗಳ ಮೇಲೆ ಆಪರೇಷನ್ ಸಿಂಧೂರ ದಾಳಿ ನಡೆಸಿದ್ದ ಭಾರತ, ಇದೀಗ ಪಾಕಿಸ್ತಾನದ ವಿರುದ್ಧ ರಾಜತಾಂತ್ರಿಕ ದಾಳಿಗೆ ಸಪ್ತಾಸ್ತ್ರ ಬಳಸಲು ನಿರ್ಧರಿಸಿದೆ. ವಿವಿಧ ರಾಜಕೀಯ ಪಕ್ಷಗಳಿಗೆ ಸೇರಿದ 7 ನಾಯಕರ ನೇತೃತ್ವದಲ್ಲಿ ಸಂಸದರ ನಿಯೋಗವೊಂದನ್ನು ಹಲವು ದೇಶಗಳಿಗೆ ರವಾನಿಸುವ ಮೂಲಕ ಪಾಕಿಸ್ತಾನದ ಉಗ್ರವಾದದ ಮುಖವಾಡ ಬಯಲು ಮಾಡುವ ದಾಳ ಉರುಳಿಸಿದೆ.

ಅಚ್ಚರಿಯ ವಿಷಯವೆಂದರೆ ಈ ಹಿಂದೆ ಕರ್ನಾಟಕ ವಿಧಾನಸಭೆಯಲ್ಲಿ ಪಾಕಿಸ್ತಾನ ಜಿಂದಾಬಾದ್ ಘೋಷಣೆ ವಿವಾದದಲ್ಲಿ ಸಿಕ್ಕಿಹಾಕಿಕೊಂಡಿದ್ದ ಸಂಸದ ನಾಸಿರ್ ಹುಸೇನ್ ಹೆಸರನ್ನು ಕಾಂಗ್ರೆಸ್ ಕಳುಹಿಸಿದ್ದರೂ, ಸರ್ಕಾರ ಅವರನ್ನು ಪರಿಗಣಿಸಿಲ್ಲ. ಆದರೆ, ಕಾಂಗ್ರೆಸ್ ಹೆಸರು ಕಳುಹಿಸದೇ ಇದ್ದರೂ ಶಶಿ ತರೂರ್ ಅವರಿಗೆ ತಂಡದ ನೇತೃತ್ವ ನೀಡುವ ಮೂಲಕ ಅವರ ವಿದೇಶಾಂಗ ವಿಷಯಗಳ ನಿರ್ವಹಣೆಯ ಜ್ಞಾನಕ್ಕೆ ಮನ್ನಣೆ ನೀಡಿದೆ.

ಶುಕ್ರವಾರ ಕೇಂದ್ರ ಸರ್ಕಾರವು ನಿಯೋಗವನ್ನು ಕಳಿಸುವ ವಿಷಯ ಪ್ರಸ್ತಾಪ ಮಾಡಿತ್ತು. ಇದೀಗ ಈ ನಿಯೋಗಗಳ ನೇತೃತ್ ಯಾರು ವಹಿಸಲಿದ್ದಾರೆಂಬ ಮಾಹಿತಿಯನ್ನು ಬಿಡುಗಡೆ ಮಾಡಿದೆ. ಅದರನ್ವಯ ಬಿಜೆಪಿಯ ರವಿಶಂಕರ್ ಪ್ರಸಾದ್, ಬಿಜೆಡಿಯ ಬೈಜಯಂತ್ ಪಾಂಡಾ, ಜೆಡಿಯುನ ಸಂಜಯ್ ಕುಮಾರ್, ಕಾಂಗ್ರೆಸ್‌ನ ಶಶಿ ತರೂರ್, ಡಿಎಂಕೆಯ ಕನಿಮೋಳಿ, ಎನ್‌ಸಿಪಿ (ಶರದ್ ಬಣ) ಸುಪ್ರಿಯಾ ಸುಳೆ, ಶಿವಸೇನೆಯ ಶ್ರೀಕಾಂತ್ ಶಿಂಧೆ ಅವರು ನಿಯೋಗಗಳ ನಾಯಕತ್ವ ವಹಿಸಲಿದ್ದಾರೆ.

ಮೇ 22ರಿಂದ ಪ್ರವಾಸ ಆರಂಭಿಸಲಿರುವ ಈ 1 ಸರ್ವಪಕ್ಷ ನಿಯೋಗಗಳು ವಿವಿಧ ದೇಶಗಳಿಗೆ ಹೋಗಿ, ಭಾರತದ ರಾಷ್ಟ್ರೀಯ ಒಮ್ಮತ ಮತ್ತು ಎಲ್ಲಾ ವಿಧದ ಭಯೋತ್ಪಾದನೆಯನ್ನು ಎದುರಿಸಲು ದೃಢನಿಶ್ಚಯವನ್ನು ಪ್ರದರ್ಶಿಸುತ್ತವೆ. ಉಗ್ರವಾದದ ವಿರುದ್ಧ ಶೂನ್ಯ ಸಹಿಷ್ಣುತೆಯ ಸಂದೇಶವನ್ನು ಜಗತ್ತಿಗೆ ಸಾರುತ್ತಾರೆ' ಎಂದು ಸಂಸದೀಯ ವ್ಯವಹಾರ ಗಳ ಸಚಿವಾಲಯ ಪ್ರಕಟಣೆ ಹೊರಡಿಸಿದೆ.

**ಸಮಿತಿಯಲ್ಲಿ ಯಾರ್‍ಯಾರು ?**

ಈ ನಿಯೋಗಗಳಲ್ಲಿ ಸಂಸದರಾದ ಅನುರಾಗ್ ಠಾಕೂರ್, ಅಪರಾಜಿತಾ ಸಾರಂಗಿ, ಮನೀಶ್ ತಿವಾರಿ, ಅಸಾದುದ್ದೀನ್ ಒವೈಸಿ, ಅಮರ್ ಸಿಂಗ್, ರಾಜೀವ್ ಪ್ರತಾಪ್ ರೂಡಿ, ಸಮಿಕ್ ಭಟ್ಟಾಚಾರ್ಯ, ಬ್ರಿಜ್ ಲಾಲ್, ಸರ್ಫರಾಜ್ ಅಹ್ಮದ್, ಪ್ರಿಯಾಂಕಾ ಚತುರ್ವೇದಿ, ವಿಕ್ರಮಜಿತ್ ಸಾಹಿ, ಸಸ್ಮಿತ್ ಪಾತ್ರ ಮತ್ತು ಭುವನೇಶ್ವರ ಕಲಿತಾ ಇರಲಿದ್ದಾರೆ.

ಕೇಂದ್ರದ ಮಾಜಿ ಸಚಿವ ಸಲ್ಮಾನ್ ಖುರ್ಷಿದ್ ಹಾಲಿ ಸಂಸದರಲ್ಲದೇ ಇದ್ದರೂ, ರಾಜತಾಂತ್ರಿಕ ಪರಿಣತಿ ಗಮನಿಸಿ ಅವರನ್ನೂ ನಿಯೋಗ–ಕ್ಕೆ ಸೇರಿಸಿಕೊಳ್ಳಲಾಗಿದೆ.

**ಯಾವ ತಂಡ ಎಲ್ಲೆಲ್ಲಿಗೆ?**

* ಬಿಜೆಪಿ ಸಂಸದ ಬೈಜಯಂತ್ ಪಾಂಡಾ ನೇತೃತ್ವದಲ್ಲಿ ಗುಂಪು ಸೌದಿ ಅರೇಬಿಯಾ, ಕುವೈತ್, ಬಹ್ರೈನ್ ಮತ್ತು ಅಲ್ಜೀರಿಯಾಕ್ಕೆ ಪ್ರಯಾಣಿಸಲಿದೆ. ನಿಯೋಗದಲ್ಲಿ ಬಿಜೆಪಿ ಸಂಸದರಾದ ನಿಶಿಕಾಂತ್ ದುಬೆ, ಫಾಂಗ್ನಾನ್ ಕೊನ್ಯಾಕ್ ಮತ್ತು ರೇಖಾ ಶರ್ಮಾ, ಎಐಎಂಐಎಂನ ಅಸದುದ್ದೀನ್ ಓವೈಸಿ, ನಾಮನಿರ್ದೇಶಿತ ಸಂಸದ ಸತ್ನಮ್ ಸಿಂಗ್ ಸಂಧು ಮತ್ತು ಹಿರಿಯ ರಾಜಕಾರಣಿ ಗುಲಾಮ್ ನಬಿ ಆಜಾದ್ ಇದ್ದಾರೆ. ಮಾಜಿ ವಿದೇಶಾಂಗ ಕಾರ್ಯದರ್ಶಿ ಮತ್ತು ರಾಯಭಾರಿ ಹರ್ಷವರ್ಧನ್ ಶ್ರಿಂಗ್ಲಾ ಕೂಡ ಈ ಗುಂಪಿನ ಭಾಗವಾಗಿದ್ದಾರೆ.

* ಬಿಜೆಪಿಯ ರವಿಶಂಕರ್ ಪ್ರಸಾದ್ ನೇತೃತ್ವದಲ್ಲಿ 2ನೇ ನಿಯೋಗ ಬ್ರಿಟನ್, ಫ್ರಾನ್ಸ್, ಜರ್ಮನಿ, ಯುರೋಪ್, ಇಟಲಿ ಮತ್ತು ಡೆನ್ಮಾರ್ಕ್‌ಗೆ ಭೇಟಿ ನೀಡಲಿದೆ. ಈ ನಿಯೋಗದಲ್ಲಿ ಟಿಡಿಪಿಯ ದಗ್ಗುಬತಿ ಪುರಂದೇಶ್ವರಿ, ಶಿವಸೇನೆ (ಯುಬಿಟಿ)ಯ ಪ್ರಿಯಾಂಕಾ ಚತುರ್ವೇದಿ, ನಾಮನಿರ್ದೇಶಿತ ಸಂಸದ ಗುಲಾಮ್ ಅಲಿ ಖತಾನಾ, ಕಾಂಗ್ರೆಸ್ ಸಂಸದ ಅಮರ್ ಸಿಂಗ್, ಬಿಜೆಪಿಯ ಸಮಿಕ್ ಭಟ್ಟಾಚಾರ್ಯ, ಮತ್ತು ಮಾಜಿ ಸಚಿವ ಎಂ.ಜೆ. ಅಕ್ಬರ್, ಮಾಜಿ ಉಪ ಎನ್‌ಎಸ್‌ಎ ಪಂಕಜ್ ಸರನ್ ಇರಲಿದ್ದಾರೆ.

* ಜೆಡಿ(ಯು)ನ ಸಂಜಯ್ ಕುಮಾರ್ ಝಾ ನೇತೃತ್ವದ 3 ಗುಂಪು ಇಂಡೋನೇಷ್ಯಾ, ಮಲೇಷ್ಯಾ, ದಕ್ಷಿಣ ಕೊರಿಯಾ, ಜಪಾನ್ ಮತ್ತು ಸಿಂಗಾಪುರಕ್ಕೆ ಪ್ರಯಾಣಿಸಲಿದೆ. ಬಿಜೆಪಿ ಸಂಸದರಾದ ಅಪರಾಜಿತಾ ಸಾರಂಗಿ, ಬ್ರಿಜ್ ಲಾಲ್, ಪ್ರದಾನ್ ಬರುವಾ ಮತ್ತು ಹೇಮಾಂಗ್ ಜೋಶಿ, ತೃಣಮೂಲ ಕಾಂಗ್ರೆಸ್ ಸಂಸದ ಯೂಸುಫ್ ಪಠಾಣ್, ಸಿಪಿಐ(ಎಂ) ಸಂಸದ ಜಾನ್ ಬ್ರಿಟ್ಟಾಸ್ ಮತ್ತು ಹಿರಿಯ ಕಾಂಗ್ರೆಸ್ ನಾಯಕ ಸಲ್ಮಾನ್ ಖುರ್ಷಿದ್. ರಾಯಭಾರಿ ಮೋಹನ್ ಕುಮಾರ್ ಈ ಗುಂಪಿನಲ್ಲಿ ಇರಲಿದ್ದಾರೆ.


* ಶಿವಸೇನಾ ಸಂಸದ ಶ್ರೀಕಾಂತ್ ಶಿಂಧೆ ನೇತೃತ್ವದ 4ನೇ ಗುಂಪು, ಯುಎಇ, ಲೈಬೀರಿಯಾ, ಪ್ರಜಾಸತ್ತಾತ್ಮಕ ಗಣರಾಜ್ಯ ಕಾಂಗೋ ಮತ್ತು ಸಿಯೆರಾ ಲಿಯೋನ್ ಪ್ರವಾಸ ಮಾಡಲಿದೆ. ತಂಡದಲ್ಲಿ ಬಿಜೆಪಿ ಸಂಸದರಾದ ಬನ್ಸುರಿ ಸ್ವರಾಜ್, ಅತುಲ್ ಗರ್ಗ್ ಮತ್ತು ಮನನ್ ಕುಮಾರ್ ಮಿಶ್ರಾ, ಐಯುಎಂಎಲ್‌ನ ಇ.ಟಿ. ಮೊಹಮ್ಮದ್ ಬಶೀರ್, ಬಿಜೆಡಿಯ ಡಾ. ಸಸ್ಮಿತ್ ಪತ್ರ ಮತ್ತು ಬಿಜೆಪಿ ನಾಯಕ ಎಸ್. ಎಸ್. ಅಹ್ಲುವಾಲಿಯಾ ಇರಲಿದ್ದಾರೆ. ರಾಯಭಾರಿ ಸುಜನ್ ಚಿನೋಯ್ ಈ ನಿಯೋಗದ ಭಾಗವಾಗಿರಲಿದ್ದಾರೆ.

* ಕಾಂಗ್ರೆಸ್ ಸಂಸದ ಡಾ. ಶಶಿ ತರೂರ್ ನೇತೃತ್ವದ 5ನೇ ಗುಂಪು, ಅಮೆರಿಕ, ಪನಾಮ, ಗಯಾನಾ, ಬ್ರೆಜಿಲ್ ಮತ್ತು ಕೊಲಂಬಿಯಾದಲ್ಲಿ ಭಾರತವನ್ನು ಪ್ರತಿನಿಧಿಸಲಿದೆ. ನಿಯೋಗದಲ್ಲಿ ಎಲ್‌ಜೆಪಿ (ರಾಮ್ ವಿಲಾಸ್) ಸಂಸದ ಶಾಂಭವಿ, ಜೆಎಂಎಂನ ಡಾ. ಸರ್ಫರಾಜ್ ಅಹ್ಮದ್, ಟಿಡಿಪಿಯ ಜಿ.ಎಂ. ಹರೀಶ್ ಬಾಲಯೋಗಿ, ಬಿಜೆಪಿಯ ಶಶಾಂಕ್ ಮಣಿ ತ್ರಿಪಾಠಿ ಮತ್ತು ಭುವನೇಶ್ವರ್ ಕಲಿತಾ, ಶಿವಸೇನೆಯ ಮಿಲಿಂದ್ ದಿಯೋರಾ ಇದ್ದಾರೆ. ಅಮೆರಿಕಾದ ಮಾಜಿ ರಾಯಭಾರಿ ತರಂಜಿತ್ ಸಿಂಗ್ ಸಂಧು ಮತ್ತು ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಕೂಡ ಈ ತಂಡದಲ್ಲಿರಲಿದ್ದಾರೆ.

* ಡಿಎಂಕೆಯ ಕನಿಮೋಳಿ ಕರುಣಾನಿಧಿ ನೇತೃತ್ವದ 6ನೇ ಗುಂಪು, ಗ್ರೀಸ್, ಸ್ಲೋವೇನಿಯಾ, ಲಾಟ್ವಿಯಾ ಮತ್ತು ರಷ್ಯಾಕ್ಕೆ ಪ್ರಯಾಣಿಸಲಿದೆ. ಗುಂಪಿನಲ್ಲಿ ಎಸ್‌ಪಿಯ ರಾಜೀವ್ ರೈ, ಎನ್‌ಸಿಯ ಮಿಯಾನ್ ಅಲ್ತಾಫ್ ಅಹ್ಮದ್, ಬಿಜೆಪಿಯ ಬ್ರಿಜೇಶ್ ಚೌಟಾ, ಆರ್‌ಜೆಡಿಯ ಪ್ರೇಮ್ ಚಂದ್ ಗುಪ್ತಾ ಮತ್ತು ಎಎಪಿಯ ಡಾ. ಅಶೋಕ್ ಕುಮಾರ್ ಮಿತ್ತಲ್ ಇರಲಿದ್ದಾರೆ. ಹಿರಿಯ ರಾಜತಾಂತ್ರಿಕರಾದ ಮಂಜೀವ್ ಸಿಂಗ್ ಪುರಿ ಮತ್ತು ಜಾವೇದ್ ಅಶ್ರಫ್ ನಿಯೋಗವನ್ನು ಮುನ್ನಡೆಸಲಿದ್ದಾರೆ.

* ಎನ್‌ಸಿಪಿ (ಶರದ್ ಪವಾರ್ ಬಣ) ಸಂಸದೆ ಸುಪ್ರಿಯಾ ಸುಳೆ ನೇತೃತ್ವದ 7ನೇ ತಂಡ ಈಜಿಪ್ಟ್, ಕತಾರ್, ಇಥಿಯೋಪಿಯಾ ಮತ್ತು ದಕ್ಷಿಣ ಆಫ್ರಿಕಾಕ್ಕೆ ಭೇಟಿ ನೀಡಲಿದ್ದಾರೆ. ಅವರೊಂದಿಗೆ ಬಿಜೆಪಿಯ ರಾಜೀವ್ ಪ್ರತಾಪ್ ರೂಡಿ, ಅನುರಾಗ್ ಠಾಕೂರ್, ಎಎಪಿಯ ವಿಕ್ರಮ್‌ಜೀತ್ ಸಿಂಗ್ ಸಹ್ನಿ, ಕಾಂಗ್ರೆಸ್‌ನ ಮನೀಶ್ ತಿವಾರಿ ಮತ್ತು ಟಿಡಿಪಿಯ ಲಾವು ಶ್ರೀ ಕೃಷ್ಣ ದೇವರಾಯಲು ಇರಲಿದ್ದಾರೆ. ರಾಯಭಾರಿ ಸೈಯದ್ ಅಕ್ಬರುದ್ದೀನ್ ಜೊತೆಗೆ ಹಿರಿಯ ನಾಯಕರಾದ ಆನಂದ್ ಶರ್ಮಾ ಮತ್ತು ವಿ. ಮುರಳೀಧರನ್ ಕೂಡ ಈ ನಿಯೋಗದಲ್ಲಿರಲಿದ್ದಾರೆ.

# ಕಲ್ಲು ಗಣಿಗಾರಿಕೆ ಅನುಮತಿ ರದ್ದುಪಡಿಸಲು ಒತ್ತಾಯ



**ಚಿಕ್ಕಮಗಳೂರು:** ತಾಲ್ಲೂಕಿನ ಕೆಸವಿನಹಳ್ಳು ಗ್ರಾಮದಲ್ಲಿ ಖಾಸಗೀ ಸಂಸ್ಥೆ ನಡೆಸುತ್ತಿರುವ ಕಲ್ಲು ಗಣಿಗಾರಿಕೆಯ ಅನುಮತಿಯನ್ನು ರದ್ದುಪಡಿಸಬೇಕು ಎಂದು ಸುತ್ತಮುತ್ತಲಿನ ಗ್ರಾಮಸ್ಥರು ಬಿಎಸ್ಪಿ ನೇತೃತ್ವದಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆಗೆ ಮನವಿ ಸಲ್ಲಿಸಿದರು.

ಈ ಕುರಿತು ಮಾತನಾಡಿದ ಬಿಎಸ್ಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಟಿ.ರಾಧಾಕೃಷ್ಣ ಆಲ್ದೂರು ಹೋಬಳಿಯ ಕೆಸವಿನ ಹಕ್ಕು ಗ್ರಾಮದಲ್ಲಿನ ಗಣಿಗಾರಿಕೆಯಿಂದ ಚಂಡಗೋಡು, ಗುಡ್ಡದೂರು, ಬೆಳಗೋಡು, ಕಂಚಿಕಲ್‌ದುರ್ಗ, ದೋಣಗುಡಿಗೆ, ವಗರ್‌ರಸ್ತೆ ಗ್ರಾಮಗಳಿಗೆ ತೀವ್ರ ಆತಂಕ ಎದುರಾಗಿದೆ ಎಂದರು.

ಖಾಸಗೀ ಸಂಸ್ಥೆಯೊಂದಕ್ಕೆ ಭೂ ವಿಜ್ಞಾನ ಇಲಾಖೆ ಕ್ರಷನ್ ನಡೆಸಲು ಅನುಮತಿ ನೀಡಿದೆ. ಆದರೆ ಈ ಸಂಸ್ಥೆ ನೀಡಿರುವ ಅನುಮತಿಯನ್ನು ಮೀರಿ ಸುಮಾರು 300 ಅಡಿ ಆಳದಷ್ಟು ಕೊರೆದು ಕಲ್ಲುಗಳನ್ನು ತೆಗೆಯುತ್ತಿರುವ ಪರಿಣಾಮ ಗ್ರಾಮಗಳಲ್ಲಿ ಭೂಕಂಪನವಾಗಿ ನಿವಾಸಿಗಳು ಭಯಭೀತರಾಗುತ್ತಿದ್ದಾರೆ ಎಂದು ಹೇಳಿದರು. ಕೂಡಲೇ ಭೂವಿಜ್ಞಾನ ಇಲಾಖೆ ಖಾಸಗೀ ಸಂಸ್ಥೆಗೆ ನೀಡಿರುವ ಕಲ್ಲು ಗಣಿಗಾರಿಕೆಯ ಪರವಾನಿಗೆ ರದ್ದುಪಡಿಸಬೇಕು. ಒಂದು ವೇಳೆ ಯಾವುದೇ ಒತ್ತಡ–ಕ್ಕೆ ಒಳಗಾಗಿ ಗಣಿಗಾರಿಕೆಗೆ ಅನುಮತಿ ನೀಡಿದಲ್ಲಿ ಗ್ರಾಮಸ್ಥರೊಟ್ಟಿಗೆ ಪ್ರತಿಭಟಿಸ ಬೇಕಾಗುತ್ತದೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಬಿಎಸ್ಪಿ ಲೋಕಸಭಾ ಕ್ಷೇತ್ರದ ಸಂಯೋಜಕ ಕೆ.ಆರ್.ಗಂಗಾಧರ್, ಗ್ರಾಮಸ್ಥರಾದ ನಾರಾಯಣ್, ಪುಟ್ಟೇಗೌಡ, ಜಯರಾಮೇಗೌಡ, ವಸಂತ್ ಕುಮಾರ್, ಸುರೇಶ್ ಮತ್ತಿತರರಿದ್ದರು.

## ಸಾರಿಗೆ ಬಸ್–ಕಾರು ನಡುವೆ ಅಪಘಾತ:

# ಅಪಾಯದಿಂದ ಪಾರು



**ಮೂಡಿಗೆರೆ:** ಚಿಕ್ಕಮಗಳೂರು ಜಿಲ್ಲೆಯಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಯ ನಡುವೆ ಕೆಎಸ್‌ಆರ್‌ಟಿಸಿ ಬಸ್ ಹಾಗೂ ಕಾರ್ ನಡುವೆ ಅಪಘಾತ ಸಂಭವಿಸಿರುವ ಘಟನೆ ಜಿಲ್ಲೆಯ ಮೂಡಿಗೆರೆ ತಾಲೂಕಿನ ಬಡವನದಿಣ್ಣೆ ಗ್ರಾಮದ ಬಳಿ ನಡೆದಿದೆ.

ಅಪಘಾತದ ರಭಸಕ್ಕೆ ಕಾರಿನ ಮುಂಭಾಗ ಸಂಪೂರ್ಣ ನಜ್ಜುಗುಜ್ಜಾಗಿದೆ. ಕಾರಿನಲ್ಲಿದ್ದವರು ಸಣ್ಣಪುಟ್ಟ ಗಾಯಗಳಿಂದ ಪಾರಾಗಿದ್ದಾರೆ. ಅಪಘಾತದ ಬಳಿಕ ಕೆಎಸ್‌ಆರ್‌ಟಿಸಿ ಬಸ್ ರಸ್ತೆ ಪಕ್ಕದ ಗದ್ದೆಗೆ ನುಗ್ಗಿದೆ.

ಬಸ್ಸಿನಲ್ಲಿದ್ದವರು ಅನಾಹುತದಿಂದ ಪಾರಾಗಿದ್ದಾರೆ. ಈ ಮಾರ್ಗವು ಚಿಕ್ಕಮಗಳೂರಿನಿಂದ ದಕ್ಷಿಣ ಕನ್ನಡಕ್ಕೆ ಸಂಪರ್ಕ ನೀಡುವ ರಸ್ತೆಯಾಗಿದೆ ಕಳೆದ ಎರಡು ದಿನಗಳಿಂದ ನಿರಂತರವಾಗಿ ಧಾರಾಕಾರ ಮಳೆಯಾಗುತ್ತಿದ್ದು ಚಾರ್ಮಾಡಿ ಘಾಟ್ ನಲ್ಲಿ ವಾಹನ ಸವಾರರು ಪರದಾಡುವಂತಾಗಿದೆ.

# ಅಮೆರಿಕದಲ್ಲಿ ಬಿರುಗಾಳಿ–ಸುಂಟರಗಾಳಿ: ಮನೆ ಕುಸಿತ, ನೆಲಕ್ಕುರುಳಿದ ಮರಗಳು, 27 ಮಂದಿ ಮೃತ



**ವಾಷಿಂಗ್ಟನ್ ಡಿಸಿ:** ಕುಸಿದ ಮನೆ, ಗಾಳಿಗೆ ಹಾರಡುತ್ತಿರುವ ತಾರಸಿಗಳು, ನಜ್ಜುಗುಜ್ಜಾದ ವಾಹನಗಳು ಜನರ ಸಂರಕ್ಷಣೆಗೆ ಜನರ ಓಡಾಟ ಇದೆಲ್ಲ ಕಂಡುಬಂದಿದ್ದು, ಅಮೆರಿಕದ ಮಧ್ಯ ಪಶ್ಚಿಮದಲ್ಲಿ. ಅಮೆರಿಕದಾದ್ಯಂತ ಬೀಸಿದ ರಣಭೀಕರ ಬಿರುಗಾಳಿ ಯಿಂದಾಗಿ ಕನಿಷ್ಠ 27 ಜನರು ಸಾವನ್ನಪ್ಪಿದ್ದಾರೆ. ಇದರಲ್ಲಿ ಆಗ್ನೇಯ ಕೆಂಟುಕಿಯಲ್ಲಿ ಸುಂಟರಗಾಳಿಯಲ್ಲಿ ಸಾವನ್ನಪ್ಪಿದ ಒಂಬತ್ತು ಜನರು ಸೇರಿದ್ದಾರೆ. ಕೆಂಟುಕಿಯಲ್ಲಿ ಸಂಭವಿಸಿದ ವಿನಾಶಕಾರಿ ಸುಂಟರಗಾಳಿಯು ಮನೆಗಳನ್ನು ಹಾನಿಗೊಳಿಸಿತು. ಮಿಸೌರಿ, ಕೆಂಟಕಿ ಮತ್ತು ವರ್ಜಿನಿಯಾದಲ್ಲಿ ಸಾವು ನೋವು ಸಂಭವಿಸಿದೆ.

ಹವಾಮಾನ ಇಲಾಖೆ ಮುನ್ಸೂಚನೆ ಪ್ರಕಾರ, ಟೆಕ್ಸಾಸ್, ಓಕ್ಲಹೋಮ ಮತ್ತು ಬಯಲು ಪ್ರದೇಶಗಳಲ್ಲಿ ಇನ್ನಷ್ಟು ಬಿರುಗಾಳಿ ಬೀಸುವ ಸಾಧ್ಯತೆ ಇದೆ.

ಕೆಂಟುಕಿಯಲ್ಲಿ 18 ಜನರು ಸಾವನ್ನಪ್ಪಿದ್ದಾರೆ. ಲಾರೆಲ್ ಕೌಂಟಿಯಲ್ಲಿ 17 ಸಾವುಗಳು ಸಂಭವಿಸಿವೆ. ಪುಲಾಸ್ಕಿ ಕೌಂಟಿಯಲ್ಲಿ ಒಬ್ಬರು ಮೃತಪಟ್ಟಿದ್ದಾರೆ. ಪುಲಾಸ್ಕಿಯ ಅಗ್ನಿಶಾಮಕ ದಳದ ಅನುಭವಿ ಮೇಜರ್ ರೋಜರ್ ಲೆಸ್ಲಿ ಲೀಥರ್ಮನ್ ಬಿರುಗಾಳಿಯ ಸಂದರ್ಭದಲ್ಲಿ ತುರ್ತು ಕರೆಗಳಿಗೆ ಸ್ಪಂದಿಸುವಾಗ ಮೃತಪಟ್ಟಿದ್ದಾರೆ. 72 ಗಂಟೆಗಳ ಅವಧಿಯಲ್ಲಿ ಇನ್ನಷ್ಟು ಸಾವು ನೋವು ಸಂಭವಿಸಬಹುದು ಎಂದು ಹವಾಮಾನ ಇಲಾಖೆ ಹೇಳಿದೆ.

ಹವಾಮಾನ ವೈಪರೀತ್ಯವದಲ್ಲಿ ಸಿಬ್ಬಂದಿ ಕೊರತೆಯಿದೆ. ಹೀಗಾಗಿ ಮಳೆ ಬಿರುಗಾಳಿ ಬಗ್ಗೆ ಸೂಚನೆ ನೀಡುವವರು ಇಲ್ಲ. ಹೀಗಾಗಿ ಇಷ್ಟು ಅವಘಡ ಸಂಭವಿಸಲು ಕಾರಣವಾಗಿದೆ ಎಂದು ಕೆಲವರು ಹೇಳಿದ್ದಾರೆ. ಟ್ರಂಪ್ ಆಡಳಿತದ ಆದೇಶದ ನಂತರ ಸುಮಾರು 600 ಜನರು ಕೆಲಸ ತೊರೆದಿದ್ದಾರೆ.

## ಭತ್ತ ಕಟಾವು ಯಂತ್ರಕ್ಕೆ, ಬಾಡಿಗೆ ದರ ನಿಗದಿ

**ದಾವಣಗೆರೆ** : ಜಿಲ್ಲೆಯಲ್ಲಿ ಬೇಸಿಗೆ ಹಂಗಾಮಿನಲ್ಲಿ ಬೆಳೆಯಲಾದ ಭತ್ತ ಕಟಾವು ಯಂತ್ರದ ಬಾಡಿಗೆ ದರವನ್ನು ಮಳೆ ಪ್ರಾರಂಭವಾಗಿರುವ ಹಿನ್ನೆಲೆಯಲ್ಲಿ ಬೆಲ್ಟ್, ಚೈನ್ ಟೈಪ್ ಭತ್ತ ಕಟಾವು ಯಂತ್ರಕ್ಕೆ ಪ್ರತಿ ಗಂಟೆಗೆ ರೂ. 2,250/- ಹಾಗೂ ಟೈರ್ ಟೈಪ್ ಭತ್ತ ಕಟಾವು ಯಂತ್ರಕ್ಕೆ ಪ್ರತಿ ಗಂಟೆಗೆ ರೂ. 1,800/- ಮೀರದಂತೆ ಬಾಡಿಗೆಯನ್ನು ನಿಗದಿಪಡಿಸಲಾಗಿದೆ.

ಭತ್ತದ ಬೆಳೆಯು ಕಟಾವಿನ ಹಂತ ತಲುಪಿರುತ್ತದೆ. ಹಾಗೂ ಜಿಲ್ಲೆಯಲ್ಲಿ ಭತ್ತದ ಕಟಾವು ಪ್ರಾರಂಭವಾಗಿದೆ. ಜಿಲ್ಲೆಯ ಬಹುತೇಕ ರೈತರು ಭತ್ತದ ಬೆಳೆಯನ್ನು ಕಟಾವು ಯಂತ್ರಗಳ ಮೂಲಕ ಕಟಾವು ಮಾಡುತ್ತಿದ್ದು, ಖಾಸಗಿ ಭತ್ತ ಕಟಾವು ಯಂತ್ರಗಳ ಮಾಲೀಕರು ರೈತರಿಂದ ಅತಿಹೆಚ್ಚು ಬಾಡಿಗೆ ಹಣ ನಿಗದಿಪಡಿಸಲಾಗಿದೆ.

ಖಾಸಗಿ ಭತ್ತ ಕಟಾವು ಯಂತ್ರಗಳ ಮಾಲೀಕರು ರೈತರಿಂದ ಹೆಚ್ಚಿನ ದರ ಪಡೆದರೆ ಭತ್ತ ಕಟಾವು ಯಂತ್ರದ ಮಾಲೀಕರ ವಿರುದ್ಧ ವಿಪತ್ತು ನಿರ್ವಹಣೆ ಕಾಯ್ದೆ 2005ರ ಪ್ರಕಾರ ಕಾನೂನು ಕ್ರಮ ಕೈಗೊಳ್ಳಲಾಗುವುದು. ಭತ್ತ ಕಟಾವು ಯಂತ್ರದ ಮಾಲೀಕರು ಹೆಚ್ಚಿನ ದರ ನಿಗದಿಪಡಿಸಿದಲ್ಲಿ ರೈತರು ಕಂದಾಯ, ಕೃಷಿ ಇಲಾಖೆಯ ಅಧಿಕಾರಿಗಳನ್ನು ಸಂಪರ್ಕಿಸಲು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದ್ದಾರೆ.

## ಬೀಳ್ಕೊಡುಗೆ ಸಮಾರಂಭ

**ದಾವಣಗೆರೆ :** ಜಿಲ್ಲಾ ವಕೀಲರ ಸಂಘ ದಾವಣಗೆರೆ ವತಿಯಿಂದ ಮೇ.21 ರಂದು ನಗರದ ವಕೀಲರ ಸಾಂಸ್ಕೃತಿಕ ಸಮುದಾಯ ಭವನದಲ್ಲಿ ಬೀಳ್ಕೊಡುಗೆ ಸಮಾರಂಭವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಲ್.ಹೆಚ್ ಅರುಣಕುಮಾರ್ ವಹಿಸುವರು.

ಬೀಳ್ಕೋಡುಗೆ: ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಮುಖ್ಯ ನ್ಯಾಯಿಕ ದಂಡಾಧಿಕಾರಿ ನಿವೇದಿತಾ.ಟಿ.ಎಂ, 1ನೇ ಹೆಚ್ಚುವರಿ ನ್ಯಾಯಾಧೀಶರಾದ ಪ್ರಶಾಂತ್.ಜಿ.ಸಿ, 2ನೇ ಸಿವಿಲ್ ನ್ಯಾಯಾಧೀಶರಾದ ಮಲ್ಲಿಕಾರ್ಜುನ್, 3ನೇ ಸಿವಿಲ್ ನ್ಯಾಯಾಧೀಶರಾದ ಸಿದ್ದರಾಜು.ಎನ್.ಕೆ, 4ನೇ ಹೆಚ್ಚುವರಿ ಸಿವಿಲ್ ನ್ಯಾಯಧೀಶರಾದ ನಾಜಿಯಾ ಕೌಸರ್

ಮುಖ್ಯ ಅತಿಥಿಗಳಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ವೇಲಾ.ಡಿ.ಕೆ, ಎರಡನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಪ್ರವೀಣಕುಮಾರ್.ಆರ್.ಎಲ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ.ಮ.ಕರೆಣ್ಣವರ, 2ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಅಮರ್.ವಿ.ಎಲ್ ಭಾಗವಹಿಸುವರು.

## ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆ

**ದಾವಣಗೆರೆ** : ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮೇ.22 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆಯನ್ನು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

## ಕೋಳಿ ಸಾಕಾಣಿಕೆ ತರಬೇತಿ

**ದಾವಣಗೆರೆ** : ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಮೇ.22 ಮತ್ತು 23 ರಂದು ಕೋಳಿ ಸಾಕಾಣಿಕೆ ತರಬೇತಿಯನ್ನು ಆಯೋಜಿಸಲಾಗಿದೆ.

ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ತರಬೇತಿಯು ದಾವಣಗೆರೆ ಜಿಲ್ಲೆಯ ರೈತರಿಗೆ ಮಾತ್ರ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192-233787 ಸಂಪರ್ಕಿಸಿ ಮಾಹಿತಿ ಪ

## ರೈತರು ಡಿ.ಎ.ಪಿ. ರಸಗೊಬ್ಬರಕ್ಕೆ ಪರ್ಯಾಯವಾಗಿ ಸಂಯುಕ್ತ ರಸಗೊಬ್ಬರಗಳನ್ನು ಬಳಸಲು ಮನವಿ

**ಶಿವಮೊಗ್ಗ;** ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಗೆ ಹದಿನೇಳು ಪೋಷಕಾಂಶಗಳ ಆಗತ್ಯವಿರುತ್ತದೆ. ಇವುಗಳಲ್ಲಿ ಇಂಗಾಲ, ಜಲಜನಕ ಮತ್ತು ಆಮ್ಲಜನಕವು ಸ್ವಾಭಾವಿಕವಾಗಿ ದೊರೆಯಲಿದ್ದು, ಗಾಳಿ ಮತ್ತು ನೀರಿನ ಮೂಲಕ ಸಸ್ಯಗಳಿಗೆ ಲಭ್ಯವಾಗುತ್ತದೆ. ಉಳಿದ ಹದಿನಾಲ್ಕು ಪೋಷಕಾಂಶಗಳಲ್ಲಿ ಸಾರಜನಕ, ರಂಜಕ, ಪೊಟ್ಯಾಷ್ ಹೆಚ್ಚಿನ ಪ್ರಮಾಣದಲ್ಲಿ ಬೇಕಿದ್ದು, ಇವುಗಳನ್ನು ಪ್ರಧಾನ ಪೋಷಕಾಂಶಗಳೆಂದು ಕ್ಯಾಲ್ಸಿಯಂ, ಮೆಗ್ನೆಷಿಯಂ, ಗಂಧಕ, ಕಬ್ಬಿಣ, ಜಿಂಕ್, ಬೋರಾನ್, ತಾಮ್ರ, ಮ್ಯಾಂಗನೀಸ್, ಮಾಲಬ್ಡಿನಂ, ಕ್ಲೋರಿನ್ ಮತ್ತು ನಿಕಲ್ ಕಡಿಮೆ ಪ್ರಮಾಣದಲ್ಲಿ ಬೇಕಿದ್ದು, ಇವುಗಳನ್ನು ಲಘು ಪೋಷಕಾಂಶದ ಕೊರತೆಯಾದರು ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಯ ಮೇಲೆ ಪರಿಣಾಮ ಬೀರಿ ಇಳುವರಿ ಕುಂಠಿತವಾಗುತ್ತದೆ.

ಪ್ರಧಾನ ಪೋಷಕಾಂಶಗಳು ಮತ್ತು ಲಘು ಪೋಷಕಾಂಶಗಳಿಗೆ ಭೂಮಿಯೇ ಮುಖ್ಯ ಆಧಾರ, ಮಣ್ಣಿನಿಂದಲೇ ಎಲ್ಲಾ ಪೋಷಕಾಂಶಗಳು ಬೆಳೆಗಳಿಗೆ ಬೇಕಾದ ಪ್ರಮಾಣದಲ್ಲಿ ದೊರೆಯುದಿಲ್ಲವಾದ್ದರಿಂದ ಬಾಹ್ಯವಾಗಿ ನೀಡುವುದು ಆನಿವಾರ್ಯ. ಬೆಳೆಗಳಿಗೆ ಬೇಕಾಗುವ ಈ ಬಾಹ್ಯ ಪೋಷಕಾಂಶಗಳನ್ನು ಸಾವಯುವ (ಕೊಟ್ಟಿಗೆ ಗೊಬ್ಬರ, ಹಸಿರೆಲೆ ಗೊಬ್ಬರ, ಹಿಂಡಿ ಇತ್ಯಾದಿ) ಮತ್ತು ರಸಗೊಬ್ಬರಗಳಿಂದ ಒದಗಿಸಬೇಕಾಗಿದ್ದು, ರಸಗೊಬ್ಬರಗಳಲ್ಲಿ ಪೋಷಕಾಂಶಗಳು ಹೆಚ್ಚಿನ ಪ್ರಮಾಣದಲ್ಲಿ ಮತ್ತು ನೇರವಾಗಿ ದೊರೆಯುವ ರೂಪದಲ್ಲಿದ್ದು ಅವುಗಳ ಬಳಕೆ ಅತ್ಯಗತ್ಯವಾಗಿರುತ್ತದೆ.

ರೈತರು ಕೇವಲ ಒಂದು ಅಥವಾ ಎರಡು ಪೋಷಕಾಂಶ ಒದಗಿಸುವ ಯೂರಿಯಾ ಹಾಗೂ ಡಿ.ಎ.ಪಿ. ಯನ್ನು ರೂಢಿಗತವಾಗಿ ಬಳಸುತ್ತಿದ್ದು, ಇವುಗಳಲ್ಲಿ ಸಾರಜನಕ ಮತ್ತು ರಂಜಕದ ಆಂಶ ಮಾತ್ರವಿರುತ್ತದೆ. ಆದರೆ ಬೆಳೆಗಳಿಗೆ ರೋಗ ನಿರೋಧಕ ಶಕ್ತಿ ನೀಡಿ ಕಾಳಿನ ತೂಕ ಹೆಚ್ಚಿಸಲು ಅತ್ಯಂತ ಅವಶ್ಯಕವಾಗಿರುವ ಪೊಟ್ಯಾಷ್ ಲಭ್ಯವಿರುವುದಿಲ್ಲ. ಮಾರುಕಟ್ಟೆಯಲ್ಲಿ ವಿವಿಧ ಶ್ರೇಣಿಯ (ಗ್ರೇಡ್) ಸಾರಜನಕ, ರಂಜಕ ಮತ್ತು ಪೊಟ್ಯಾಷ್ ಯುಕ್ತ ಬಹಳಷ್ಟು ರಸಗೊಬ್ಬರಗಳು ಲಭ್ಯವಿದ್ದು, ಶಿಫಾರಸ್ಸಿನಂತೆ ವಿವಿಧ ರಸಗೊಬ್ಬರಗಳ ಲಭ್ಯವಿದ್ದು, ಶಿಫಾರಸ್ಸಿನಂತೆ ವಿವಿಧ ರಸಗೊಬ್ಬರಗಳ ಸಂಯೋಜನೆಯೊಂದಿಗೆ ಬಳಸಬಹುದಾಗಿದೆ.

ಶಿಫಾರಸ್ಸಿನಂತೆ ಬೆಳೆಗಳಿಗೆ ಸಾರಜನಕ, ರಂಜಕ, ಪೊಟ್ಯಾಷ್ ರಸಗೊಬ್ಬರಗಳನ್ನು 4:2:1 ರ ಅನುಪಾತದಲ್ಲಿ ಬಳಸಬೇಕಾಗಿರುತ್ತದೆ. ಆದರೆ ಪ್ರಸ್ತುತ ರೈತರು ಯಥೇಚ್ಛವಾಗಿ ಬಳಸುತ್ತಿರುವ ಈ ರಸಗೊಬ್ಬರಗಳ ಅನುಪಾತವು 5.08:2.89:1 ಆಗಿರುತ್ತದೆ. ಇದನ್ನು ಸಮತೋಲನಾತ್ಮಕ ರಸಗೊಬ್ಬರಗಳ ಬಳಕೆಯನ್ನು ಉತ್ತೇಜಿಸಿ, ಸಂಯುಕ್ತ ರಸಗೊಬ್ಬರಗಳನ್ನು ಬಳಸುವುದರಿಂದ ಸರಿದೂಗಿಸಬಹುದಾಗಿರುತ್ತದೆ.

ಅಲ್ಲದೇ, ರೈತರು ರಸಗೊಬ್ಬರವನ್ನು ಕೇವಲ ಒಂದೇ ಸಂಸ್ಥೆಯ ಆಥವಾ ಒಂದೇ ರಸಗೊಬ್ಬರಕ್ಕೆ ಆದ್ಯತೆ ನೀಡದೆ ಡಿ.ಎ.ಪಿ. ರಸಗೊಬ್ಬರಕ್ಕೆ ಪರ್ಯಾಯವಾಗಿ ಗಂಧಕ ಒದಗಿಸುವ 20:20:0:13 ಹಾಗೂ ಇತರೆ ಸಂಯುಕ್ತ ರಸಗೊಬ್ಬರಗಳಾದ 15:15:15, 10:26:26. 22:32:16, 14:35:14, 17:17:17, 14:28:14, 19:19:19, 20:10:10 ಇತ್ಯಾದಿ ಬಳಸಬಹುದಾಗಿದೆ. ರೈತರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಜಂಟಿ ಕೃಷಿ ನಿರ್ದೇಶಕರು ಸಲಹೆ ನೀಡಿದೆ.

# ನಂಬಿಕೆ ಜೀವಂತ; ಈಶ್ವರಾನಂದ ಪುರಿ ಶ್ರೀ



**ಮಾಯಕೊಂಡ**'ತಳ ಸಮುದಾಯಗಳು, ಮೂಢನಂಬಿಕೆ ಬಿಟ್ಟು ಶಿಕ್ಷಣ ಪಡೆದು ಅಭಿವೃದ್ಧಿಯಾಗಬೇಕು, ಎಂದು ಹೊಸದುರ್ಗ ಶಾಖಾಮಠದ ಈಶ್ವರಾನಂದ ಪುರಿ ಮಹಾಸ್ವಾಮಿ ಕರೆನೀಡಿದರು.

ಇಲ್ಲಿನ ಆಂಜನೇಯ ಸ್ವಾಮಿ ದೇವಾಲಯದ ಕಳಶಾರೋಹಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅವಿವೇಕಿಗಳು ಇರುವವರೆಗೆ ಸಮಾಜದಲ್ಲಿ ಮೂಢನಂಬಿಕೆ ಉಳಿದಿರುತ್ತೆ. ತಳ ಸಮುದಾಯಗಳಿಗೆ ಶಿಕ್ಷಣ ಅತ್ಯಗತ್ಯ. ಶಿಕ್ಷಣ ಪಡೆಯದಿದ್ದರೆ ಸಮುದಾಯ ಅಭಿವೃದ್ಧಿಯಾಗುವುದಿಲ್ಲ. ತಪ್ಪುಗಳನ್ನು ಭಗವಂತನ ಸನ್ನಿಧಿಯಲ್ಲಿ ನಿವೇದಿಸಿಕೊಂಡರೆ ರಕ್ಷಣೆಯಾಗುತ್ತದೆ. ಹನುಮನ ದೇವಾಲಯ ಇಲ್ಲದ ಊರುಗಳೇ ಇಲ್ಲ. ಹನುಮಂತ ಭಕ್ತಿಯ ಪ್ರತೀಕ. ಜೀವನದುದ್ದಕ್ಕೂ ರಾಮನ ಸೇವೆ ಮಾಡಿ, ಸಾರ್ಥಕತೆ ಕಂಡವನು ಎಂದು ಬಣ್ಣಿಸಿದರು.

ಮಾಯಕೊಂಡ ತಾಲ್ಲೂಕು ಮಾಡಲು ಹೋರಾಟ ಅತ್ಯಗತ್ಯ. ಎಲ್ಲರೊಂದಿಗೆ ಮುಖ್ಯಮಂತ್ರಿಗಳನ್ನು ಭೇಟಿಮಾಡಿ ಚರ್ಚಿಸೋಣ, ಎಂದರು.

ನಿಜ ಶರಣ ಅಂಬಿಗರ ಚೌಡಯ್ಯ ಪೀಠದ ಶಾಂತಭೀಷ್ಮ ಮಹಾಸ್ವಾಮಿ,

ಹನುಮಂತ ಎಂದರೆ ಆರೋಗ್ಯದ ಸಂಕೇತ.

ಅಂದು ಗರಡಿ ಮನೆಗಳು ಇದ್ದು, ಜನ ಆರೋಗ್ಯದಿಂದ ಇದ್ದರು. ಶ್ರಮರಹಿತ ಜೀವನದಿಂದ ಇಂದು ಅನಾರೋಗ್ಯ ಹೆಚ್ಚಿದೆ. ಭಗವಂತನಲ್ಲಿಡುವ ನಂಬಿಕೆಯಲ್ಲಿ ಅದ್ಭುತ ಶಕ್ತಿಯಿದೆ, ಎಂದರು.

ಭಗೀರಥ ಪೀಠದ ಪುರುಷೋತ್ತಮಾನಂದ ಸ್ವಾಮೀಜಿ, ಧರ್ಮ ರಕ್ಷಿಸುವವರನ್ನು ಧರ್ಮ ರಕ್ಷಿಸುತ್ತದೆ ಎಂಬುದನ್ನು ಹಿರಿಯರು ನಂಬಿದ್ದರು. ಬಿದ್ದವರನ್ನು ಮೇಲೆತ್ತುವುದೇ ಧರ್ಮ. ಜೀವನದಲ್ಲಿ ಧರ್ಮ ಕಾರ್ಯಗಳು ನೆಮ್ಮದಿ ನೀಡುತ್ತವೆ. ತಂದೆ-ತಾಯಿ, ಗುರು, ದೇವ ಋಣಗಳನ್ನು ತೀರಿಸಿದರೆ ಬದುಕು ಸಾರ್ಥಕ ವಾಗುತ್ತದೆ ಎಂದರು.

ಶಾಸಕ ಬಸವಂತಪ್ಪ, ಮಾಯಕೊಂಡದ ಅಭಿವೃದ್ಧಿಗೆ ಬುಳ್ಳಾಪುರ ಗುಡ್ಡದ ಕೆರೆ, ಕೆಂಚಾಲಪ್ಪನ ಕೆರೆ ರಸ್ತೆ ಅಭಿವೃದ್ಧಿಗೆ ಅನುದಾನ ಮಂಜೂರಾಗಲಿದೆ, ಮಾಯಕೊಂಡಕ್ಕೆ ಶೀಘ್ರ ವಿಶೇಷ ತಹಶಿಲ್ದಾರ್ ನೇಮಕ ಮಾಡಲಾಗುವುದು ಎಂದು ಭರವಸೆ ನೀಡಿದರು.

ಮಾಜಿ ಶಾಸಕ ಬಸವರಾಜ ನಾಯಕ ಮಾತನಾಡಿ ಭಾರತ ಪಾಕಿಸ್ತಾನದಲ್ಲಿ ಹನುಮಂತ ಭಾರತಕ್ಕೆ ಬಲತುಂಬಲಿ. ನಾನು ಶಾಸಕನಾಗಿದ್ದಾಗ ಸುವರ್ಣ ಗ್ರಾಮ ಯೋಜನೆಯಲ್ಲಿ ಈ ಊರಿಗೆ ಎರಡು ಕೋಟಿ ವೆಚ್ಚದಲ್ಲಿ ಸಿಸಿ ರಸ್ತೆ ನಿರ್ಮಾಣ ಮಾಡಿಸಿದ್ದೆ, ಎಂದು ಸ್ಮರಿಸಿದರು.

ಹೆಬ್ಬಾಳು ವಿರಕ್ತ ಮಠದ ಮಹಾಂತ ರುದ್ರಸ್ವಾಮೀಜಿ, ಒಂಟಿಕಂಬ ಮಠದ ತಿಪ್ಪೇಸ್ವಾಮಿ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು . ಮ

ಮಾಜಿ ಸಚಿವ ಎಸ್.ಎ.ರವೀಂದ್ರನಾಥ್ ಮಾತನಾಡಿದರು.

ಗಗನ ಸಂಗಡಿಗಳು ಪ್ರಾರ್ಥಿಸಿದರು ಚಿನ್ನ ಸಮುದ್ರ ಉಮೇಶ್ ನಾಯ್ಕ ಭಕ್ತಿ ಹೀತೆ ಹಾಡಿದರು. ಬಿ.ಟಿ ಹನುಮಂತಪ್ಪ ಸ್ವಾಗತಿಸಿದರು. ಹೆಚ್. ಉಮಾಪತಿ ಪ್ರಾಸ್ತಾವಿಕ ಮಾತನಾಡಿದರು. ಬಿ ಆರ್ ತಿಪ್ಪೇಸ್ವಾಮಿ, ಎಲ್ ಜೆ ಉಮಾಶಂಕರ್ ನಿರೂಪಿಸಿದರು. ಎಸ್. ವೆಂಕಟೇಶ್ ವಂದಿಸಿದರು.

ಆಂಜನೇಯ ಸ್ವಾಮಿ ಸೇವಾ ಸಮಿತಿ ಅಧ್ಯಕ್ಷ ಕೆ.ಪಿ.ಮರಿಯಾಚಾರ್, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಲತಾ ಮಲ್ಲಿಕಾರ್ಜುನ, ಉಪಾಧ್ಯಕ್ಷೆ ಶಿವಮ್ಮ ಮತ್ತು ಸದಸ್ಯರು, ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಜಿ ಬಿ ಮಲ್ಲೇಶ್ ಮತ್ತು ನಿರ್ದೇಶಕರು, ಮುಖಂಡರಾದ ಗೋಪಾಲ್, ಎಂ. ಜಿ ಗುರುನಾಥ್, ನೀರುಗಂಟೆ ಶ್ರೀನಿವಾಸ್, ರುದ್ರೇಶ್, ಪುಟ್ಟರಂಗಸ್ವಾಮಿ, ಕೆ.ಎಲ್. ಸುನಿಲ್, ಪೂಜಾರ್ ಅಶೋಕ್ ಮತ್ತಿತರರು ಇದ್ದರು.

### ಸಂಭ್ರಮ ತಂದ ಆಂಜನೇಯ ದೇಗುಲ ಉದ್ಘಾಟನೆ, ಕಳಸಾರೋಹಣ

ಇಲ್ಲಿನ ಆಂಜನೇಯ ಸ್ವಾಮಿ ದೇವಸ್ಥಾನದ ಮತ್ತು ದೇವಾಲಯ ಉದ್ಘಾಟನೆ ಕಾರ್ಯಕ್ರಮಕ್ಕೆ ಮಾಯಕೊಂಡ ಸಂಭ್ರಮದಿಂದ ನೆರವೇರಿತು.

ಗುರುವಾರ ಆಂಜನೇಯ ಸ್ವಾಮಿ ಮತ್ತು ದುರ್ಗಮ್ಮ ದೇವಿಯ ಹೊಳೆಪೂಜೆ ನೆರವೇರಿಸಲಾಯಿತು.

ಶುಕ್ರವಾರ ಗ್ರಾಮದ ದೇವತೆಗಳಾದ ದುರುಗಮ್ಮ, ಕಾಳಮ್ಮ, ಬೀರೇಶ್ವರ, ಗುಳ್ಳಮ್ಮ, ದೊಡ್ಡ ಮಾಗಡಿ ನೀರಭತ್ತೇಶ್ವರ, ದಿಂಡದಹಳ್ಳಿಯ ಆಂಜನೇಯಸ್ವಾಮಿಗಳ ಆಶ್ವತೇಜ ಮೂರ್ತಿಗಳನ್ನು ಗ್ರಾಮ ಪ್ರದಕ್ಷಿಣೆ ಮಾಡಿಸಲಾಯಿತು. ನೂತನ ಕಳಸವನ್ನು ಗಂಗಾ ಪೂಜೆಯೊಂದಿಗೆ ಮೆರವಣಿಗೆ ಮಾಡಲಾಯಿತು. ಪೂರ್ಣಕುಂಭ ಹೊತ್ತ ನೂರಾರು ಮಹಿಳೆಯರು ಮೆರವಣಿಗೆಯಲ್ಲಿ ಸಾಗಿ ಬಂದರು. ನಾಸಿಕ್ ಡೋಲು, ಡೊಳ್ಳು, ತಮಟೆ ವಾದ್ಯಗಳು ಮೆರವಣಿಗೆಗೆ ರಂಗುತಂದವು. ಗ್ರಾಮಸ್ಥರು ಭಕ್ತಿ ಭಾವದಿಂದ ಮೆರವಣಿಗೆಯಲ್ಲಿ ಪಾಲ್ಗೊಂಡರು

ಚೆನ್ನಗಿರಿ ತಾಲೂಕು ಶೆಟ್ಟಿಹಳ್ಳಿಯ ಪಂಡಿತ ನೀಲಕಂಠ ಶಾಸ್ತ್ರಿ ಮತ್ತು ತಂಡದವರು ಪೂರ್ಣಾಹುತಿ ಯಜ್ಞ, ಹೋಮ ಹವನ ನೆರವೇರಿಸಿದರು. ಚಿತ್ರದುರ್ಗದ ಭಕ್ತರು ದೇವಾಲಯಕ್ಕೆ ಹೂವಿನ ಅಲಂಕಾರ ಮಾಡಿ ಭಕ್ತಿ ಸಮರ್ಪಿಸಿದರು.

ಗ್ರಾಮದ ಬೀದಿಗಳನ್ನು ವಿದ್ಯುತ್ ದೀಪ, ಬಾಳೆ ಕಂಬ, ಬಂಟಿಂಗ್ ಬ್ಯಾನರ್ ಗಳಿಂದ ಅಲಂಕರಿಸಲಾಗಿತ್ತು.

# ಹೊಸ ರಸ್ತೆಗಳನ್ನು ಮತ್ತೆ ಮತ್ತೆ ಕತ್ತರಿಸಿ ಸಾರ್ವಜನಿಕ ಹಣ ವ್ಯರ್ಥ ಮಾಡುತ್ತಿದ್ದೇವೆ

**ಚಿತ್ರದುರ್ಗ:** ಮಾಡಿದ ಹೊಸ ಕಾಂಕ್ರೀಟ್ ರಸ್ತೆಯನ್ನು ಮತ್ತೆ ಮತ್ತೆ ಕತ್ತರಿಸಿ, ಸಾರ್ವಜನಿಕ ಹಣವನ್ನು ವ್ಯರ್ಥ ಮಾಡುತ್ತಿದ್ದೇವೆ. ಟೀಚರ್ಸ್ ಕಾಲೋನಿಯ ಬಳಿ ಗ್ಯಾಸ್ ಕನೆಕ್ಷನ್ ಗಾಗಿ ಕಾಂಕ್ರೀಟ್ ರಸ್ತೆಗಳನ್ನು ಕತ್ತರಿಸುತ್ತಿರುವ ಕಾರ್ಮಿಕರ ಕಷ್ಟಗಳ ಬಗ್ಗೆಯೂ ಸಹ ಯಾರಿಗೂ ಕಾಣುತ್ತಿಲ್ಲ. ಅಗಾಧವಾದ ಯಂತ್ರವನ್ನು ಕೈಯಲ್ಲಿ ಹಿಡಿದುಕೊಂಡು, ರಸ್ತೆಯನ್ನು ಕತ್ತರಿಸಿ, ಅದರಿಂದ ಬರುವ ಶಬ್ದ, ಧೂಳನ್ನ ಕುಡಿಯುತ್ತಾ, ತಮ್ಮ ಆರೋಗ್ಯದ ಮೇಲೂ ದುಷ್ಪರಿಣಾಮ ಬೀರುವ ಕೆಲಸವನ್ನು ಕೂಲಿ ಕಾರ್ಮಿಕರು ಶ್ರದ್ಧೆಯಿಂದ ಮಾಡುತ್ತಿರುವುದನ್ನು ನೋಡಿದರೆ ಯಾರಿಗಾದರೂ ಅಯ್ಯೋ ಎನಿಸುತ್ತದೆ. ಕಾರ್ಮಿಕರಿಗೆ ತಟ್ಟುವ ಶಬ್ದ ಮಾಲಿನ್ಯ ತಡೆಯಲು ಅವರಿಗೆ ಕಿವಿಗಳಿಗೆ ಯಾವುದಾದರೂ ಕವಚವನ್ನು ನೀಡಿ, ಗುತ್ತಿಗೆದಾರರು ಅವರ ಆರೋಗ್ಯದ ಬಗ್ಗೆ ಸಹ ಗಮನ ಹರಿಸಬೇಕೆಂದು ಕರ್ನಾಟಕ ಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿ ಅವರು ವಿನಂತಿಸಿಕೊಂಡಿದ್ದಾರೆ.



ಮೊನ್ನೆ ತಾನೆ ಹೊಸದಾಗಿ ಕಾಂಕ್ರೀಟ್ ಹಾಕಿದ ರಸ್ತೆಗಳನ್ನು ಮತ್ತೆ ಎಡ ಭಾಗದಲ್ಲಿ ಅಥವಾ ಬಲಭಾಗದಲ್ಲಿ ಕತ್ತರಿಸುವುದನ್ನು ನೋಡಿದರೆ ಯಾರಿಗಾದರೂ ಸಹ ಹಣ ವ್ಯರ್ಥವಾಗುವುದು ಎದ್ದು ಕಾಣುತ್ತದೆ.

ಬಡದೇಶ ಭಾರತದಲ್ಲಿ ಈ ರೀತಿ ರಸ್ತೆ ನಿರ್ಮಾಣ ಮಾಡುವುದು ಮತ್ತು ಕತ್ತರಿಸುವುದು ಮತ್ತೆ ಅದನ್ನು ಕೂಡಿಸುವುದು ಮಾಡುತ್ತಾ ಹೋದರೆ ಸಾರ್ವಜನಿಕರ ಹಣಕ್ಕೆ ಬೆಲೆ ಎಲ್ಲಿದೆ ಎಂದರು.

ರಸ್ತೆ ಕತ್ತರಿಸುವ ಕೆಲಸ ಮಾಡುವ ಕಾರ್ಮಿಕರ ಕಷ್ಟ ಯಾರಿಗೂ ಕಾಣುವುದಿಲ್ಲ, ಮುಂದಾದರೂ ಇಂಜಿನಿಯರ್ಗಳು ಸ್ವಲ್ಪ ಜಾಣತನದಿಂದ

ಕೆಲಸ ಮಾಡಬೇಕು, ಇಲ್ಲದಿದ್ದರೆ ಕೆಲಸದ ಮೇಲೆ ಕೆಲಸ, ಹಣ ವೆಚ್ಚ, ಕೆಲಸಗಾರರಿಗೆ ಒತ್ತಡ ಆಗುತ್ತದೆ, ರಸ್ತೆಯನ್ನು ಬಗೆದು ಮತ್ತೆ ಮತ್ತೆ ಹಣ ವೆಚ್ಚ ಮಾಡುವುದಕ್ಕಿಂತ ಮೊದಲೇ ಎಲ್ಲ ಸಿದ್ಧತೆ ಮಾಡಿ, ರಸ್ತೆ ನಿರ್ಮಾಣ ಮಾಡಬೇಕಾಗಿದ್ದು ನಮ್ಮ ಕರ್ತವ್ಯವಾಗಿದೆ ಎಂದರು.

ಒಂದು ರಸ್ತೆ ಕತ್ತರಿಸಲು 30,000ದಷ್ಟು ವೆಚ್ಚವಾಗುತ್ತದೆ, ಕೆಲಸ ಮಾಡುವ ಆಳಿಗೆ ಅಡಿಗೆ ಐವತ್ತು ರೂಪಾಯಿ ಖರ್ಚಾಗುತ್ತದೆ, ಮತ್ತೆ ಗ್ಯಾಸು ಮತ್ತು ನೀರಿನ ರೀಪೇರಿಗೆ ಬಂದಾಗ ಮತ್ತೆ ರಸ್ತೆ ಬಗಿಯ ಬೇಕಾದೀತು. ಇದರಿಂದ ಕಾರ್ಮಿಕರು ಮತ್ತು ಸಾರ್ವಜನಿಕರು ಶಬ್ದ ಮಾಲಿನ್ಯದಿಂದ ಕಿವುಡರಾಗುತ್ತಾರೆ. ಗುತ್ತಿಗೆದಾರರು ಕಾರ್ಮಿಕರಿಗೆ, ಅವರ ಕಿವಿಗೆ ಯಾವುದಾದರೂ ರಕ್ಷಣಾ ವ್ಯವಸ್ಥೆಯನ್ನು ಕಲ್ಪಿಸಿಕೊಳ್ಳಬೇಕು. ಸುತ್ತಮುತ್ತ ಮನೆಯವರಿಗೂ ಸಹ ಶಬ್ದ ಮಾಲಿನ್ಯಾಗುತ್ತಿದೆ. ದಿನಗಟ್ಟಲೆ, ವಾರಗಟ್ಟಲೆ ಶಬ್ದ ಮಾಲಿನ್ಯದಿಂದ ಜನರಿಗೆ ತಲೆ ಚಿಟ್ಟು ಹಿಡಿಯುವಂತಾಗಿದೆ ಎಂದರು.

ಮತ್ತೆ ಗ್ಯಾಸ್ ರಿಪೇರಿಗೆ ಬಂದಾಗ ಮತ್ತೆ ರಸ್ತೆ ಕತ್ತರಿಸುವುದು ನಡೆದಿರುತ್ತದೆ. ಆದ್ದರಿಂದ ರಸ್ತೆ ಪಕ್ಕದಲ್ಲಿ ಒಂದಿಷ್ಟು ಜಾಗವನ್ನು ಗ್ಯಾಸ್ ಗೆ, ಕರೆಂಟಿಗೆ, ನೀರಿಗೆ ಬಿಟ್ಟು ರಸ್ತೆ ನಿರ್ಮಾಣ ಮಾಡಬೇಕು. ಮತ್ತೆ ಮತ್ತೆ ರಸ್ತೆ ಕತ್ತರಿಸಿ ಸಾರ್ವಜನಿಕ ಹಣ ವೆಚ್ಚ ಮಾಡುವುದಕ್ಕಿಂತ ಮೊದಲೇ ಎಲ್ಲದಕ್ಕೂ ಸಿದ್ಧತೆ ಮಾಡಿಕೊಂಡು ಹಣ ಉಳಿತಾಯ ಮತ್ತು ಮಾಲಿನ್ಯ ತಡೆಯುವುದರ ಬಗ್ಗೆ ಪ್ರಯತ್ನ ಮಾಡಬೇಕು ಎಂದು ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

# ಖರ್ಗೆ ಹೇಳಿಕೆಗೆ ರಾಷ್ಟ್ರೀಯ ಬೇಡಜಂಗಮ ಸಂಸ್ಥೆ ವಿರೋಧ

ನಿನ್ನೆ ವಿಜಯನಗರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾನ್ಯ ಮಲ್ಲಿಕಾರ್ಜುನ ಖರ್ಗೆಯವರು ವೀರಶೈವ ಲಿಂಗಾಯತ ಪಂಥದಲ್ಲಿ ಬರುವ ಜಂಗಮರು ಬೇಡ ಜಂಗಮರುರಲ್ಲ ಎಂದು ಸುಳ್ಳು ಹೇಳಿ ದಲಿತರ ಹಕ್ಕನ್ನು ಕಸಿದುಕೊಳ್ಳುತ್ತಿದ್ದಾರೆ ಈ ವಿಷಯದ ಕುರಿತು ಸರ್ಕಾರ ಗಂಭೀರ ಚಿಂತನೆ ಮಾಡಬೇಕೆಂದು ಎಂದು ಆಕ್ರೋಶ ವ್ಯಕ್ತಪಡಿಸಿದರುವದನ್ನು ಖಂಡಿಸಿ ಈ ಪತ್ರಿಕಾ ಹೇಳಿಕೆಯನ್ನು ನೀಡಲಾಗಿದೆ.

ಈ ಸಂಧರ್ಭದಲ್ಲಿ ಪತ್ರಿಕೆಗೆ ಸವಿಸ್ತಾರವಾಗಿ ವೀರಶೈವ ಲಿಂಗಾಯತ ಪಂಥದಲ್ಲಿ ಬರುವ ಜಂಗಮರು ಬೇಡ ಜಂಗಮರು ಎನ್ನುವುದನ್ನು ನಾವು ಹೇಳಿಕೆ ನೀಡುತ್ತೇವೆ.

ಆದರೆ ಕೇಂದ್ರ ಸರಕಾರದ ರಾಜ್ಯಸಭೆಯ ಪ್ರತಿ ಪಕ್ಷದ ನಾಯಕರಾಗಿ ಮಾನ್ಯ ಮಲ್ಲಿಕಾರ್ಜುನ ಖರ್ಗೆಯವರು ವೀರಶೈವ ಲಿಂಗಾಯತ ಪಂಥದಲ್ಲಿ ಬರುವ ಜಂಗಮರು ಬೇಡ ಜಂಗಮರು ಎಂದು ಸುಳ್ಳು ಹೇಳಿ ದಲಿತರ ಹಕ್ಕನ್ನು ಕಸಿದುಕೊಳ್ಳುತ್ತಿದ್ದಾರೆ ಎಂದು ಜನರಲ್ಲಿ ಸುಳ್ಳು ಮಾಹಿತಿಯನ್ನು ನೀಡಿ ಒಂದು ಜನಾಂಗಕ್ಕೆ ನೋವುಂಟು ಮಾಡಿರುವುದು ಖಂಡನೀಯ.

ಒಳ ಮೀಸಲಾತಿ ಸಮೀಕ್ಷೆಯಲ್ಲಿ ಪರಿಶಿಷ್ಟ ಜಾತಿಯಲ್ಲಿ 101ಜಾತಿಗಳಿಗೂ ಅವಕಾಶವಿದೆ, ಅದರಲ್ಲಿ ಬೇಡಜಂಗಮವು ಒಂದು, ವೀರಶೈವ ಲಿಂಗಾಯತ ಪಂಥದಲ್ಲಿ ಬರುವ ಜಂಗಮರು, ಬೇಡ ಜಂಗಮರು ರೆಂದು ಸಮೀಕ್ಷೆಯಲ್ಲಿ ಬರೆಸುವದನ್ನು ತಡೆಯಬೇಕು ಎಂದು ಕಾನೂನು ಬದ್ಧ /ಸಂವಿಧಾನಿಕ ಹಕ್ಕನ್ನು ವಿರೋಧಿಸುವದು ಸರಿಯಾದುದಲ್ಲ.

ಬೇಡಜಂಗಮರು ಎಂದರೆ ಯಾರು? ಅವರ ಗುಣಲಕ್ಷಣಗಳೇನು? ಮತ್ತು ಅವರು ಎಲ್ಲಿ ಎಲ್ಲಿ ವಾಸವಾಗಿದ್ದರೆ ಎಂಬುದರ ಬಗ್ಗೆ ಸರ್ಕಾರದಿಂದ ಸಮೀಕ್ಷೆಗಳು ನಡೆದು ವರದಿ ಮಾಡಿದ್ದು ಸದರಿ ವರದಿಗಳ ಆಧಾರದ ಮೇಲೆ ಬೇಡಜಂಗಮರು ಗುರುತಿಸಿರುವುದನ್ನು ತಮ್ಮ ಗಮನಕ್ಕೆ ತರಬಯಸುವುದೇನೆಂದರೆ, ಬೀದರ, ಗುಲಬರ್ಗಾ ಮತ್ತು ರಾಯಚೂರು ಜಿಲ್ಲೆಗಳು ಅಂದಿನ ಹೈದ್ರಾಬಾದ ರಾಜ್ಯದಲ್ಲಿದ್ದವು ಹೈದ್ರಾಬಾದ ರಾಜ್ಯದಲ್ಲಿ ಅಜಟಿಣಾ ಔಜಿ ಖಟಜುಚಿ 1901 ಗಿಂಟಣಾಟಜ ಫಿಫಿಖಖ-೦ ಊಧಿಜಜಡಿಚಿಛಚಿಜ ಕಚಿಡಿಣ-ಖಖ ದಾಖಲೆಯ ಪ್ರಕಾರ ಅಂದೇ ಇಡೀ ಜಂಗಮರು ಕೆಳದರ್ಜೆ ಧಾರ್ಮಿಕ ಬಿಕ್ಷುಕರ(Inferior religious mendicants ) ಪಟ್ಟಿಯಲ್ಲಿದ್ದು ಸರಕಾರದ ಸವಲತ್ತು ಅನುವು ಮಾಡಿಕೊಟ್ಟಿತ್ತು.

ಅಜಟಿಣಾ ಔಜಿ ಖಟಜುಚಿ 1921 ಊಧಿಜಜಡಿಚಿಛಚಿಜ ಖಣಚಿಣಜ ದಾಖಲೆಯ ಪ್ರಕಾರವಾಗಿ ನಿಜಾಮರ ಆಳ್ವಿಕೆ ಕಾಲದಲ್ಲಿ ಹೈದ್ರಾಬಾದ ರಾಜ್ಯದಲ್ಲಿ ಇಡೀ ಜಂಗಮರನ್ನು ಅಂದು ಜಾರಿಯಲ್ಲಿದ್ದ 'ಡಿಪ್ರೆಸ್ಟ್ ಕ್ಲಾಸ' (Depressed Class) ಪಟ್ಟಿಯಲ್ಲಿ ಇನ್ನಿತರ ಕೆಳದರ್ಜೆ ಜಾತಿಗಳೊಡನೆ ಸೇರಿಸಿ ಸರಕಾರದ ಸವಲತ್ತು ಸೌಲಭ್ಯ ನೀಡಲಾಗಿತ್ತು.

1935 ರಲ್ಲಿ ಬ್ರಿಟಿಷರ ಆಳ್ವಿಕೆಯ ಕಾಲದಲ್ಲಿ The



Government of India ACT 1935ನ್ನು ಹೊರಡಿಸಿ ಪರಿಶಿಷ್ಟ ಜಾತಿಯ ವಿವರಣೆಯನ್ನು (Definition) ದಾಖಲೆಯಲ್ಲಿ ನೀಡಲಾಗಿದೆ.

ಮುಂದೆ ಹೈದ್ರಾಬಾದ ಹರಿಜನ ಟೆಂಪಲ ಎಂಟ್ರಿ ರೆಗ್ಯೂಲೇಷನ್ 1358 Fasli (ಐ.ಇ1949)ರ ದಾಖಲೆಯ ಶೆಡ್ಯೂಲ್ನಲ್ಲಿ ಇತರ ಜಾತಿಗಳೊಡನೆ ಜಂಗಮ ಜಾತಿಯನ್ನು ಸೇರಿಸಿದ್ದಾರೆ.

1950 ರಲ್ಲಿ ರಚಿಸಲಾದ ಭಾರತ ಸಂವಿಧಾನ ಅಧಿನಿಯಮ 341 ರ ಪ್ರಕಾರ ಗೌರವಾನ್ವಿತ ರಾಷ್ಟ್ರಪತಿಯವರು ರಾಜ್ಯಪಾಲ/ ರಾಜ್ಯ ಪ್ರಮುಖರುಗಳೊಡನೆ ಚರ್ಚಿಸಿ The Government of India ACT 1935ರಲ್ಲಿ ತಿಳಿಸಲಾಗಿರುವ ಪರಿಶಿಷ್ಟ ಜಾತಿ ವಿವರಣೆಯಲ್ಲಿನ ನಿಯಮಕ್ಕೆ ಬದ್ಧವಾಗಿ 1921 ರಲ್ಲಿ ಜಾರಿಯಲ್ಲಿದ್ದ 'ಡಿಪ್ರೆಸ್ಟ್ ಕ್ಲಾಸ' (Depressed Class) ಪಟ್ಟಿಯಲ್ಲಿದ್ದ ಇಡೀ ಜಂಗಮ ಸಮುದಾಯದ ಬದಲಾಗಿ ಜಂಗಮ ಸಮುದಾಯದ ವಂಶಪಾರಂಪರವಾಗಿ ಬಂದ ಧಾರ್ಮಿಕ ಬಿಕ್ಷಾವೃತ್ತಿಯಾದ ಕುಲಕಸುಬಿನ ಆಧಾರದ ಅಡಿಯಲ್ಲಿ ಗುರುತಿಸಲ್ಪಡುವ ಬೇಡಜಂಗಮರನ್ನು ಅಂದಿನ ಹೈದ್ರಾಬಾದ ರಾಜ್ಯದ ಪಟ್ಟಿಯನ್ನು ಪರಿಗಣಿಸಿ The Constitution (Schedule Castes) ಂಡಿಜಜಡಿ 1950ನ್ನು ಹೊರಡಿಸಿರುತ್ತಾರೆ.

ಭಾಷಾವಾರು ರಾಜ್ಯಗಳನ್ನು ಪುನರ ವಿಂಗಡಿಸಿದಾಗ ಈ ಹಿಂದೆ ಹೈದ್ರಾಬಾದ ರಾಜ್ಯದಲ್ಲಿನ ಬೀದರ, ಗುಲಬರ್ಗಾ, ರಾಯಚೂರ ಜಿಲ್ಲೆಗಳನ್ನು ಅಂದಿನ ಮೈಸೂರು ರಾಜ್ಯಕ್ಕೆ ವರ್ಗಾಯಿಸಿ ಈ ಮೂರು ಜಿಲ್ಲೆಗಳಲ್ಲಿ ವಾಸಿಸುತ್ತಿರುವ ಜಂಗಮರು ಎಂದು ಕರೆಯುವ ಬೇಡ ಜಂಗಮರುಗಳಿಗೆ ಖhe Schedule Castes and Schedule Tribes list (modification) Order 1956 ಹೊರಡಿಸಲಾಗಿದೆ.

ಮುಂದುವರೆದು ಅensus of India 1971 series-1 India, The Schedule Castes and Schedule Tribes order ಪಟ್ಟಿಯಲ್ಲಿ ಬೀದರ, ಗುಲಬರ್ಗಾ ಮತ್ತು ರಾಯಚೂರ ಜಿಲ್ಲೆಗಳಲ್ಲಿ ಒಟ್ಟು ಜನಸಂಖ್ಯೆ 13676 ಬೇಡ (ಬುಡಗ) ಜಂಗಮ ಸಮುದಾಯದವರು ವಾಸಿಸುತ್ತಿರುವ ಬಗ್ಗೆ ದಾಖಲೆ ಇದೆ.

Karnataka Backward Classes Commission Report Volume-II-1975 6 ವರದಿಯಲ್ಲಿ 1972 ರಲ್ಲಿ ಬೀದರ, ಗುಲಬರ್ಗಾ ಮತ್ತು ರಾಯಚೂರು ಜಿಲ್ಲೆಗಳಲ್ಲಿ ವಾಸಿಸಿರುವ ಬೇಡ (ಬುಡುಗ) ಜಂಗಮ ಪರಿಶಿಷ್ಟ ಜಾತಿಯ ಒಟ್ಟು ಜನ ಸಂಖ್ಯೆ 6667 ವಿದ್ದುದರ ಹೇಳುತ್ತದೆ.

ಬೀದರ, ಗುಲಬರ್ಗಾ ಮತ್ತು ರಾಯಚೂರ ಈ ಮೂರು ಜಿಲ್ಲೆಗಳಿಗೆ ಮಾತ್ರ ಅನ್ವಯವಾಗುವಂತೆ ವಿಧಿಸಲಾಗಿದ್ದ ಜಿಲ್ಲಾ The Schedule Castes and Schedule Tribes orders (Amendment) ಂಛಿಣ 1976 1976 ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ವಿಸ್ತರಿಸಿದರ ಖಿಜ ಉಚಿದಜಣಣಜಜ ಔಜಿ ಖಟಜುಚಿ ಕಚಿಡಿಣ-ಖಖ ಭಾಗ- ಗಿಖಖ ರ ಕರ್ನಾಟಕ ರಾಜ್ಯದ ಪಟ್ಟಿಯಲ್ಲಿ ಬೇಡ ಜಂಗಮ, ಬುಡಗ ಜಂಗಮ ಕ್ರಮ ಸಂಖ್ಯೆ 19 ರಲ್ಲಿ ಇರುತ್ತದೆ.

ಕರ್ನಾಟಕ ರಾಜ್ಯ ಸರಕಾರ ಸಮಾಜ ಕಲ್ಯಾಣ ಇಲಾಖೆಯ ನಿರ್ದೇಶನಾಲಯದ ಮೂಲಕ ಮುಖ್ಯ ಸಂಪಾದಕರು ಕರ್ನಾಟಕ ಗೆಜೆಟಿಯರ ರವರನ್ನು ಬೀದರ, ಗುಲಬರ್ಗಾ ಮತ್ತು ರಾಯಚೂರ ಜಿಲ್ಲೆಗಳಲ್ಲಿ ಬೇಡ ಜಂಗಮ, ಬುಡುಗೆ ಜಂಗಮ ಜಾತಿಯ ಸಮೀಕ್ಷೆ ನಡೆಸಿ ವಿವರವಾದ ಮಾಹಿತಿಯನ್ನು 1988 ರಲ್ಲಿ ಕೋರಿದ್ದರ ಪ್ರಕಾರ ರಾಜ್ಯ ಸರಕಾರದ ಅಂಗ ಸಂಸ್ಥೆಯಾದ ಕರ್ನಾಟಕ ಗೆಜೆಟಿಯರ ರವರ ಅಧಿಕಾರಿಗಳರವರಿಂದ ಬೇಡ ಜಂಗಮ ಜಾತಿಯ ಅಧ್ಯಯನ ವರದಿಯನ್ನು ದಿನಾಂಕ:28-08-1989 ರಂದು ಸರಕಾರಕ್ಕೆ ಸಲ್ಲಿಸಿರುತ್ತಾರೆ. ಸದರಿ ವರದಿಯಲ್ಲಿ ಊರಿನಲ್ಲಿ ಜಂಗಮ, ಅಯ್ಯನವರು, ಸ್ವಾಮಿಯವರು, ಎಂದು ಕರೆಯಲ್ಪಡುವವರನ್ನು ಬೇಡಜಂಗಮರೆಂದು ಗುರುತಿಸುವವುದಲ್ಲದೆ ಅವರ ಗುಣಲಕ್ಷಣಗಳ ಬಗ್ಗೆ ಸವಿಸ್ತಾರವಾಗಿ ತಿಳಿಸಿದ್ದು ಸದರಿ ವರದಿಯನ್ನು ಸಮಾಜ ಕಲ್ಯಾಣ ಇಲಾಖೆ ನಿರ್ದೇಶನಾಲಯವು ಸಂಬಂಧಪಟ್ಟ ಅಧಿಕಾರಿಗಳಿಗೆ ಕಳುಹಿಸಿಕೊಟ್ಟಿದ್ದು, ಸದರಿ ವರದಿಯಲ್ಲಿ ಬೇಡ ಜಂಗಮರ ಬಗ್ಗೆ ಒದಗಿಸಲಾಗಿರುವ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಆದೇಶಿಸಿದ್ದಾರೆ.

ಅಲ್ಲದೆ ಈ ಮೇಲಿನ ಎಲ್ಲಾ ದಾಖಲಗಳನ್ನು ಅನುಸರಿಸಿ ಸಮಾಜ ಕಲ್ಯಾಣ ಇಲಾಖೆಯು ಈ ಕೆಳಗಿನ ಸುತ್ತೋಲೆಗಳನ್ನು ಹೊರಡಿಸಿದ್ದು ಇದೆ.

1. ಸಮಾಜ ಕಲ್ಯಾಣ ಇಲಾಖೆ ಸುತ್ತೋಲೆ ಸಂಖ್ಯೆ:ಸ.ಕ.ನಿ.ಉ ಮತ್ತು ತ-2 ಸಿ.ಆರ್. 107/93-94 ದಿನಾಂಕ:29-11-1993.
2. ಸಮಾಜ ಕಲ್ಯಾಣ ಇಲಾಖೆ ಸುತ್ತೋಲೆ ಸಂಖ್ಯೆ: ಖಫಾಖ 328 ಖಂಆ 95 ದಿನಾಂಕ 05.10.1995.
3. ಸಮಾಜ ಕಲ್ಯಾಣ ಇಲಾಖೆ ಸುತ್ತೋಲೆ ಸಂಖ್ಯೆ:ಸ.ಕ.ನಿ.ಉ ಮತ್ತು ತ-2 ಸಿ.ಆರ್. 153/2001-02 ದಿನಾಂಕ:27-03-2002.
4. ಸಮಾಜ ಕಲ್ಯಾಣ ಆಯುಕ್ತರ ಕಛೇರಿ ಪತ್ರ ಸಂಖ್ಯೆ:ಸಕನಿ.ಉ ಮತ್ತು ಸಿಆರ್ 12/05-06 ದಿನಾಂಕ:20-03-2007.
5. ಸಮಾಜ ಕಲ್ಯಾಣ ಇಲಾಖೆ ಸುತ್ತೋಲೆ ಸಂಖ್ಯೆ:ಸ.ಕ.ನಿ.ಉ ಮತ್ತು ತ-2 ಸಿ.ಆರ್. 39/2007-08 ದಿನಾಂಕ:08-03-2010.
6. ಸಮಾಜ ಕಲ್ಯಾಣ ಇಲಾಖೆ ಸುತ್ತೋಲೆ ಸಂಖ್ಯೆ:ಸ.ಕ.ನಿ.ಉ ಮತ್ತು ತ-2 ಸಿ.ಆರ್. 39/2007-08 ದಿನಾಂಕ:22-02-2011.
7. ಸರ್ಕಾರದ ಕಾರ್ಯದರ್ಶಿಗಳು ಸಮಾಜ ಕಲ್ಯಾಣ ಇಲಾಖೆ ಸುತ್ತೋಲೆ ಸಂಖ್ಯೆ:ಸ.ಕ.ಇ247ಎಡಿ 2016 ದಿನಾಂಕ:30-11-2016.
8. ಸರ್ಕಾರದ ಕಾರ್ಯದರ್ಶಿಗಳು ಸಮಾಜ ಕಲ್ಯಾಣ ಇಲಾಖೆ ಸುತ್ತೋಲೆ ಸಂಖ್ಯೆ:ಸ.ಕ.ಇ247ಎಡಿ 2016 ದಿನಾಂಕ:21-12-2016.
9. ಸಮಾಜ ಕಲ್ಯಾಣ ಇಲಾಖೆ ಸುತ್ತೋಲೆ ಸಂಖ್ಯೆ:ಸಕಇ 40ಎಡಿ 2010 ದಿ.21.03.2018.
10. ಸಮಾಜ ಕಲ್ಯಾಣ ಇಲಾಖೆ ಸುತ್ತೋಲೆ ಸಂಖ್ಯೆ:ಸಕಇ 41ಎಡಿ 2022 ದಿ.02.07.2022.

ಸದರಿ ಸುತ್ತೋಲೆಗಳ ನಿರ್ದೇಶನದಂತೆ ಮತ್ತು ದಾಖಲುಗಳಂತೆ ಹಾಗೂ ಮಾನ್ಯ ಕರ್ನಾಟಕ ಸರ್ವೋಚ್ಚ ನ್ಯಾಯಾಲಯದ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶದಂತೆ ಕಟ್ಟು ನಿಟ್ಟಾಗಿ ಕ್ರಮಜರುಗಿಸಲು ಮಾನ್ಯ ಜಿಲ್ಲಾಧಿಕಾರಿಗಳಿಗೆ ಮತ್ತು ಮಾನ್ಯ ಸಹಾಯಕ ಆಯುಕ್ತರಿಗೆ ಹಾಗೂ ಮಾನ್ಯ ತಹಶೀಲ್ದಾರರವರುಗಳಿಗೆ ಜಾತಿ ಪ್ರಮಾಣ ಪತ್ರ ಮತ್ತು ಸಿಂಧುತ್ವ ಪ್ರಮಾಣ ಪತ್ರ ನೀಡುವಲ್ಲಿ ನಿಯಮಗಳ ಅನುಸಾರ ಕ್ರಮ ಜರುಗಿಸಲು ಆದೇಶಗಳನ್ನು ಮಾಡಿದ್ದಿರುತ್ತದೆ.

ಇವೆಲ್ಲ ಸರಕಾರದ ದಾಖಲೆಗಳಿದ್ದರೂ ವೀರಶೈವ ಲಿಂಗಾಯತ ಪಂತದಲ್ಲಿ ಬರುವ ಜಂಗಮರು ಬೇಡ ಜಂಗಮರು ಎಂದು ಸುಳ್ಳು ಹೇಳಿ ದಲಿತರ ಹಕ್ಕನ್ನು ಕಸಿದುಕೊಳ್ಳುತ್ತಿದ್ದಾರೆ, ಸುಳ್ಳ ಜಾತಿ ಪ್ರಮಾಣ ಪತ್ರ ನೀಡಿದ ಅಧಿಕಾಅರಿಗಳ ವಿರುದ್ಧ ಸರ್ಕಾರವು ಕಠಿಣ ಕ್ರಮ ಜರುಗಿಸಬೇಕು, ಹಾಗೂ ಸುರ್ಳಲ ಜಾತಿ ಪ್ರಮಾಣ ಪತ್ರ ಪಡೆದವರ ಮೇಲೆ ಕ್ರಮ ಜರುಗಿಸಬೇಕು ಎಂದು ಮೊದಲಿನಿಂದಲೂ ಸುಳ್ಳು ಪ್ರತಿಪಾದಿಸುತ್ತಾ ಸಂವಿಧಾನ ಬದ್ಧ ಹಕ್ಕನ್ನು ಪಡೆಯುವಲ್ಲಿ ಕಳೆದ 70ವರ್ಷಗಳಿಂದ ಹೇಳಿಕೆಯನ್ನು ನೀಡುತ್ತಾ ಬೇಡಜಂಗಮರಿಗೆ ಜಾತಿ ಪ್ರಮಾಣ ಪತ್ರ ಸಿಗದಂತೆ ಮತ್ತು ಅಧಿಕಾರಿ ವರ್ಗದವರು ಕೊಡದಂತೆ ಮಾಡಿರುವುದನ್ನು ಬೇಡಜಂಗಮ ಸಮಾಜ ಎಂದು ಸಹಿಸುವುದಿಲ್ಲ ಈ ರೀತಿಯ ನೀಲುವನ್ನು ಸರ್ಕಾರ ಕೈಗೊಂಡಲ್ಲಿ ನಮ್ಮ ಸತ್ಯ ಪ್ರತಿಪಾದನೆಯ ಹಾದಿಯಲ್ಲಿ ನಮ್ಮ ಹಕ್ಕು ಪಡೆಯುವಲ್ಲಿ ಹೋರಾಟ ಕ್ಕಿಳಿಯಬೇಕಾಗುತ್ತದೆ ಸರ್ಕಾರಕ್ಕೆ ಎಚ್ಚರಿಕೆ ನೀಡುತ್ತೇವೆ.

**ಅಧ್ಯಕ್ಷರು**
**ವೀರಣ್ಣ ಹಿರೇಮಠ**
**ಫೋನ್. ನಂ. 9986246772**

# ವಾಹನ ಸಂಚಾರಿಸುವ ವೇಳೆ ಬಾಯ್ತೆರೆದ ರಸ್ತೆ; ಗುಂಡಿಗೆ ಕಾರು ಪಲ್ಟಿ, ಐವರು ಬಚಾವ್




**ಚೆನ್ನೈ:** ಭಾರಿ ಮಳೆಯಿಂದಾಗಿ ನಗರದ ಟೈಡಲ್ ಪಾರ್ಕ್ ಬಳಿ ರಸ್ತೆ ಕುಸಿದು ಬೃಹತ್ ಗುಂಡಿಯಾಗಿದ್ದ ಕಾರಣ, ಪ್ರಯಾಣಿಕರನ್ನು ಕರೆದೊಯ್ಯುತ್ತಿದ್ದ ಕ್ಯಾಬ್ ಗುಂಡಿಗೆ ಉರುಳಿ ಭಾರಿ ಅವಘಡ ಸಂಭವಿಸಿದ ಘಟನೆ ನಡೆದಿದೆ.

ಶನಿವಾರ(ಮೇ.18) ಸಂಜೆ 6.30ಕ್ಕೆ ಒಳಚರಂಡಿ ಕೊಳವೆಯಲ್ಲಿ ಸೋರಿಕೆಯಾದ ಕಾರಣ ರಸ್ತೆ ಕುಸಿದು ಕಾರು ಗುಂಡಿಯೊಳಗೆ ಉರುಳಿದೆ ಎಂದು ಚೆನ್ನೈ ಮೆಟ್ರೋ ರೈಲು ತಿಳಿಸಿದೆ. ಅದೃಷ್ಟವಶಾತ್ ಯಾರಿಗೂ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಪೊಲೀಸರು ಮತ್ತು ಮೆಟ್ರೋ ರೈಲು ಸಿಬ್ಬಂದಿ ರಕ್ಷಣಾ ಕಾರ್ಯದಲ್ಲಿ ತೊಡಗಿಸಿಕೊಂಡರು. ರಸ್ತೆ ಕುಸಿತದಿಂದಾಗಿ ರಾಜೀವ್ ಗಾಂಧಿ ಸಲೈ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಟ್ರಾಫಿಕ್ ಜಾಮ್ ಉಂಟಾಯಿತು.

ಚೆನ್ನೈನ ಟೈಡಲ್ ಪಾರ್ಕ್ ಸಿಗ್ನಲ್ ಬಳಿ ರಸ್ತೆಯೊಂದು ಕುಸಿದು ಆಳವಾದ ಹೊಂಡ ಉಂಟಾಯಿತು. ಅದರಲ್ಲಿ ಐವರು ಪ್ರಯಾಣಿಕರಿದ್ದ ಟ್ಯಾಕ್ಸಿಯೊಂದು ಬಿದ್ದಿದೆ. ಟ್ಯಾಕ್ಸಿ ಚಾಲಕ ವಿಘ್ನೇಶ್ (40) ಶೋಲಿಂಗನಲ್ಲೂರಿನಿಂದ ಸಾಫ್ಟ್‌ವೇರ್ ಕಂಪನಿಯ ಉದ್ಯೋಗಿ ವಿಘ್ನೇಶ್, ಅವರ ಪತ್ನಿ ಮತ್ತು ಇಬ್ಬರು ಮಕ್ಕಳನ್ನು ಕರೆದುಕೊಂಡು ಸೆಂಟ್ರಲ್ ರೈಲ್ವೆ ನಿಲ್ದಾಣದ ಕಡೆಗೆ ಹೋಗುತ್ತಿದ್ದರು. ಸಿಗ್ನಲ್ ಬಳಿ ಹೋಗುವಾಗ ರಸ್ತೆ ಇದ್ದಕ್ಕಿದ್ದಂತೆ ಕುಸಿದು ಟ್ಯಾಕ್ಸಿ ಹೊಂಡಕ್ಕೆ ಬಿದ್ದಿದೆ.

ಅಲ್ಲಿ ಕರ್ತವ್ಯದಲ್ಲಿದ್ದ ಟ್ರಾಫಿಕ್ ಪೊಲೀಸರು ಮತ್ತು ಇತರ ವಾಹನ ಸವಾರರು ತಕ್ಷಣವೇ ರಕ್ಷಣೆಗೆ ಧಾವಿಸಿದರು. ಚೆನ್ನೈ ಮೆಟ್ರೋ ರೈಲು ಲಿಮಿಟೆಡ್ ಗುತ್ತಿಗೆದಾರರ ಸಹಾಯದಿಂದ ಪ್ರಯಾಣಿಕರನ್ನು ಸುರಕ್ಷಿತವಾಗಿ ಹೊರತೆಗೆದರು. ಯಾರಿಗೂ ಗಂಭೀರ ಗಾಯಗಳಾಗಿಲ್ಲ. ತಕ್ಷಣವೇ ಪೊಲೀಸರು ರಸ್ತೆಯನ್ನು ಬಂದ್ ಮಾಡಿ ಟ್ರಾಫಿಕ್ ಅನ್ನು ಬೇರೆಡೆಗೆ ತಿರುಗಿಸಿದರು. ಇದರಿಂದ ರಾಜೀವ್ ಗಾಂಧಿ ಸಲೈ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಾಹನ ಸಂಚಾರಕ್ಕೆ ತೊಂದರೆಯಾಯಿತು.

**ಬಲವಂತವಾಗಿ ವೇಶ್ಯಾವಾಟಿಕೆಗೆ ತಳ್ಳಲ್ಪಟ್ಟಿದ್ದ 4 ಮಹಿಳೆಯರ ರಕ್ಷಣೆ**

**ಬೆಂಗಳೂರು:** ಬಲವಂತವಾಗಿ ವೇಶ್ಯಾವಾಟಿಕೆಗೆ ತಳ್ಳಲ್ಪಟ್ಟಿದ್ದ ನಾಲ್ವರು ಮಹಿಳೆಯರನ್ನು ಬೆಂಗಳೂರು ಪೊಲೀಸರ ಕೇಂದ್ರ ಅಪರಾಧ ವಿಭಾಗ (ಸಿಸಿಬಿ) ಶನಿವಾರ ರಕ್ಷಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮೇ 14 ರಂದು, ಬಸವೇಶ್ವರ ನಗರದ ಮನೆಯೊಂದರಲ್ಲಿ ಮಹಿಳೆಯರನ್ನು ವೇಶ್ಯಾವಾಟಿಕೆಗೆ ಒತ್ತಾಯ ಮಾಡಲಾಗುತ್ತಿದೆ ಎಂಬ ಮಾಹಿತಿ ಅಪರಾಧ ವಿಭಾಗದ ಮಹಿಳಾ ರಕ್ಷಣಾ ವಿಭಾಗಕ್ಕೆ ಸಿಕ್ಕಿತ್ತು. ಅಧಿಕಾರಿಗಳ ತಂಡ ತಕ್ಷಣ ದಾಳಿ ನಡೆಸಿತು.

ಮಾಹಿತಿ ನಿಖರವಾಗಿತ್ತು. ನಾಲ್ವರು ಮಹಿಳೆಯರನ್ನು ರಕ್ಷಿಸಲಾಯಿತು ಮತ್ತು ಇಬ್ಬರು ಶಂಕಿತರನ್ನು ಬಂಧಿಸಲಾಯಿತು. ಬಸವೇಶ್ವರ ನಗರ ಪೊಲೀಸ್

# ವೈದ್ಯಕೀಯ, ದಂತ ವೈದ್ಯಕೀಯ ಕೋರ್ಸ್‌ಗಳ ಶುಲ್ಕ ಹೆಚ್ಚಳ ಇಲ್ಲ

**ಬೆಂಗಳೂರು:** ಖಾಸಗಿ ವೈದ್ಯಕೀಯ ಕಾಲೇಜುಗಳ ಒತ್ತಡದ ಹೊರತಾಗಿಯೂ, ಮುಂಬರುವ ಶೈಕ್ಷಣಿಕ ವರ್ಷದಲ್ಲಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸ್‌ಗಳ ಶುಲ್ಕದಲ್ಲಿ ಯಾವುದೇ ಹೆಚ್ಚಳವಿಲ್ಲ ಎಂದು ವೈದ್ಯಕೀಯ ಶಿಕ್ಷಣ ಸಚಿವ ಶರಣ್ ಪ್ರಕಾಶ್ ಪಾಟೀಲ್ ಶನಿವಾರ ತಿಳಿಸಿದ್ದಾರೆ.

ಖಾಸಗಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕಾಲೇಜುಗಳ ಆಡಳಿತ ಮಂಡಳಿಗಳ ಪದಾಧಿಕಾರಿಗಳೊಂದಿಗಿನ ಸಭೆಯಲ್ಲಿ ಸಚಿವರು ಈ ವಿಚಾರ



ಸ್ಪಷ್ಟಪಡಿಸಿದ್ದಾರೆ ಎಂದು ಅವರ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

ಖಾಸಗಿ ಕಾಲೇಜುಗಳು ಶೇ. 10 ರಿಂದ 15 ರಷ್ಟು ಶುಲ್ಕ ಹೆಚ್ಚಳಕ್ಕೆ ಮನವಿ ಮಾಡಿದ್ದವು. ಆದರೆ ಕಳೆದ ವರ್ಷ ಶೇ. 10 ರಷ್ಟು ಹೆಚ್ಚಳಕ್ಕೆ ಸರ್ಕಾರ ಅವಕಾಶ ನೀಡಿತ್ತು. ಈ ವರ್ಷ ಯಾವುದೇ ಶುಲ್ಕ ಹೆಚ್ಚಳಕ್ಕೆ ಅವಕಾಶ ನೀಡಲಾಗುವುದಿಲ್ಲ ಎಂದು ಸಚಿವರು ಹೇಳಿದ್ದಾರೆ.

ಕಳೆದ ವರ್ಷದ ಶೇ. 10 ರಷ್ಟು ಹೆಚ್ಚಳ ಮಾಡಿರುವುದನ್ನು ಗಮನಿಸಿದ ಸಚಿವರು, ಈ ವರ್ಷ ಯಾವುದೇ ಶುಲ್ಕ ಹೆಚ್ಚಳ ಇರುವುದಿಲ್ಲ ಎಂದು ಒತ್ತಿ ಹೇಳಿದರು ಮತ್ತು ಈ ನಿರ್ಧಾರವನ್ನು ಅಧಿಕೃತಗೊಳಿಸುವ ಆದೇಶಕ್ಕೆ ಶೀಘ್ರದಲ್ಲೇ ಸಹಿ ಹಾಕಲಾಗುವುದು ಎಂದು ತಿಳಿಸಿದ್ದಾರೆ.

# ಪಾಕಿಸ್ತಾನ ಮಾನವಕುಲಕ್ಕೆ ಅಪಾಯಕಾರಿ

## ಸಂಸದ ಅಸಾದುದ್ದೀನ್ ಓವೈಸಿ



**ಹೈದರಾಬಾದ್:** ಪಾಕಿಸ್ತಾನವು ಭಯೋತ್ಪಾದನೆಯನ್ನು ಪ್ರಾಯೋಜಿಸುವ ದೀರ್ಘ ಇತಿಹಾಸವನ್ನು ಹೊಂದಿದ್ದು ಆ ದೇಶವು ಮಾನವಕುಲಕ್ಕೆ ಅಪಾಯಕಾರಿಯಾಗಿದೆ ಎಂದು ಆಲ್ ಇಂಡಿಯಾ ಮಜ್ಲಿಸ್–ಎ–ಇತ್ತೆಹಾದುಲ್ ಮುಸ್ಲಿಮೀನ್ (ಎಐಎಂಐಎಂ) ನಾಯಕ ಅಸಾದುದ್ದೀನ್ ಓವೈಸಿ ಹೇಳಿದ್ದಾರೆ. ಸರ್ಕಾರವು ಹಲವಾರು ದೇಶಗಳಿಗೆ ಭೇಟಿ ನೀಡಲು ಕಳುಹಿಸುತ್ತಿರುವ ಸರ್ವಪಕ್ಷ ನಿಯೋಗಗಳಲ್ಲಿ ಒಬ್ಬರಾದ ಓವೈಸಿ, ಅಂತಾರಾಷ್ಟ್ರೀಯ ಸಮುದಾಯಕ್ಕೆ ತಮ್ಮ ಸಂದೇಶದ ತಿರುಳು ಇದೇ ಆಗಿರುತ್ತದೆ ಎಂದು ಹೇಳಿದರು. ಪಾಕಿಸ್ತಾನ ಪ್ರಾಯೋಜಿತ ಭಯೋತ್ಪಾದಕರು ದೀರ್ಘಕಾಲದವರೆಗೆ ಅಮಾಯಕ ನಾಗರಿಕರನ್ನು ಕೊಲ್ಲುತ್ತಿರುವ ಬಗ್ಗೆ ಜಗತ್ತಿಗೆ ತಿಳಿಸಬೇಕಾಗಿದೆ ಎಂದು ಹೈದರಾಬಾದ್ ಸಂಸದ ಓವೈಸಿ ಸಂದರ್ಶನವೊಂದರಲ್ಲಿ ಹೇಳಿದರು.

ಪಾಕಿಸ್ತಾನಿ ಮಾಧ್ಯಮಗಳಲ್ಲಿ ತಮ್ಮನ್ನು ಗುರಿಯಾಗಿಸಿಕೊಂಡಿರುವ ಬಗ್ಗೆ ಕೇಳಿದ ಪ್ರಶ್ನೆಗೆ, ಎಐಎಂಐಎಂ ಮುಖ್ಯಸ್ಥ ಅಸಾದುದ್ದೀನ್ ಓವೈಸಿ, ಪಾಕಿಸ್ತಾನಿಗಳು ಇಷ್ಟೊಂದು ಸುಂದರ ವ್ಯಕ್ತಿಯನ್ನು ನೋಡಿಲ್ಲ ಎಂದು ಹೇಳಿದರು. ಅವರು ನನ್ನನ್ನು ಭಾರತದಲ್ಲಿ ಮಾತ್ರ ನೋಡುತ್ತಾರೆ. ನನ್ನ ಮಾತನ್ನು ಕೇಳುತ್ತಲೇ ಇರಬೇಕು. ಆಗ ಅವರ ಜ್ಞಾನ ಹೆಚ್ಚಾಗುತ್ತದೆ ಮತ್ತು ಅಜ್ಞಾನ ದೂರವಾಗುತ್ತದೆ. ನಾನು ಇದನ್ನು ಈ ಮೊದಲು ಹೇಳಿದ್ದೇನೆ. ಮತ್ತೊಮ್ಮೆ ಹೇಳುತ್ತಿದ್ದೇನೆ. ನಮ್ಮ ಪ್ರಧಾನಿ ಕದನ ವಿರಾಮವನ್ನು ಘೋಷಿಸಬೇಕಿತ್ತು. ಅಮೆರಿಕ ಅಧ್ಯಕ್ಷರಲ್ಲ ಎಂದು ಓವೈಸಿ ಹೇಳಿದರು. ನಿಮಗೆ ತಿಳಿದಿದೆಯೇ, ಪಾಕಿಸ್ತಾನ ಅಮೆರಿಕದೊಂದಿಗೆ ಕೇವಲ 10 ಬಿಲಿಯನ್ ವ್ಯಾಪಾರ, ಆದರೆ ಭಾರತಕ್ಕೆ ಅದು 150 ಬಿಲಿಯನ್‌ಗಿಂತ ಹೆಚ್ಚು. ಇದು ತಮಾಷೆಯಾ? ಎಂದು ಪ್ರಶ್ನಿಸಿದರು.

ಪಾಕಿಸ್ತಾನ ಇನ್ನು ಮುಂದೆ ನಮ್ಮ ವಿರುದ್ಧ ಭಯೋತ್ಪಾದಕ ದಾಳಿ ನಡೆಸುವುದಿಲ್ಲ ಎಂದು ಅಮೆರಿಕ ಖಾತರಿ ನೀಡಬಹುದೇ ಎಂದು ಓವೈಸಿ ಹೇಳಿದರು. ಪಾಕಿಸ್ತಾನ ಸೇನೆ ಯಾವಾಗಲೂ ಭಾರತದೊಂದಿಗೆ ಜಗಳವಾಡುತ್ತದೆ. ನಾವು ಇದನ್ನು ಎಷ್ಟು ದಿನ ಸಹಿಸಿಕೊಳ್ಳುವುದು? ಪಾಕಿಸ್ತಾನದೊಂದಿಗೆ ನೀವು ಹೇಗೆ ವ್ಯವಹಾರ ಮಾಡೋದು? ಅವರು ಭಿಕ್ಷುಕರು. ನಾವು ಅಮೆರಿಕದಿಂದ ನಿರೀಕ್ಷಿಸುತ್ತಿರುವುದು ಟಿಆರ್‌ಎಫ್ (ದಿ ರೆಸಿಸ್ಟೆನ್ಸ್ ಫ್ರಂಟ್) ಅನ್ನು ಭಯೋತ್ಪಾದಕ ಸಂಘಟನೆ ಎಂದು ಘೋಷಿಸಬೇಕು ಎಂಬುದಷ್ಟೇ ನಮ್ಮ ನಿರೀಕ್ಷೆ.

ಪಾಕಿಸ್ತಾನ ಪ್ರಾಯೋಜಿತ ಭಯೋತ್ಪಾದನೆಯಿಂದ ಭಾರತವು ಸಾಕಷ್ಟು ನಷ್ಟ ಅನುಭವಿಸಿದೆ ಎಂದು ಹೈದರಾಬಾದ್ ಸಂಸದರು ಹೇಳಿದರು. ಜಿಯಾ–ಉಲ್–ಹಕ್ ಕಾಲದಿಂದಲೂ ಜನರ ಹತ್ಯಾಕಾಂಡವನ್ನು ನಾವೆಲ್ಲರೂ ನೋಡಿದ್ದೇವೆ. ಆದಾಗ್ಯೂ, ರಾಜತಾಂತ್ರಿಕ ಅಭಿಯಾನದ ಬಗ್ಗೆ ಸರ್ಕಾರ ಇನ್ನೂ ವಿವರವಾದ ಮಾಹಿತಿಯನ್ನು ನೀಡಿಲ್ಲ ಎಂದು ಓವೈಸಿ ಹೇಳಿದರು. ಭಾರತದೊಂದಿಗಿನ ಸಂಘರ್ಷದಲ್ಲಿ ತನ್ನನ್ನು ತಾನು ಇಸ್ಲಾಮಿಕ್ ರಾಷ್ಟ್ರವೆಂದು ಬಿಂಬಿಸಿಕೊಳ್ಳುತ್ತಿರುವ ಪಾಕಿಸ್ತಾನವನ್ನು ತರಾಟೆಗೆ ತೆಗೆದುಕೊಳ್ಳುವ ಅಗತ್ಯವಿದೆ ಎಂದು ಲೋಕಸಭಾ ಸದಸ್ಯ ಓವೈಸಿ ಹೇಳಿದರು.

# ಕರಾವಳಿ ಭಾಗ ಸೇರಿದಂತೆ 15 ಜಿಲ್ಲೆಗಳಲ್ಲಿ ಭಾರೀ ಮಳೆ

## ಹವಾಮಾನ ಇಲಾಖೆ ಎಚ್ಚರಿಕೆ



**ಬೆಂಗಳೂರು :** ಕರ್ನಾಟಕದಾದ್ಯಂತ ಮುಂಗಾರು ಪೂರ್ವ ಮಳೆ ಹೆಚ್ಚಾಗಿದೆ. ಕಳೆದ ಒಂದು ವಾರದಿಂದ ರಾಜ್ಯದ ವಿವಿಧ ಭಾಗಗಳಲ್ಲಿ ಭರ್ಜರಿ ಮಳೆಯಾಗುತ್ತಿದ್ದು, ಇಂದಿನಿಂದ ರಾಜ್ಯದ 15 ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ(ಐಎಂಡಿ) ಮುನ್ಸೂಚನೆ ನೀಡಿದೆ. ರಾಜ್ಯದ ವಿವಿಧ ಭಾಗಗಳಲ್ಲಿ ಮಿಂಚು, ಗುಡುಗು ಹಾಗೂ ಸಿಡಿಲಿನಿಂದ ಈಗಾಗಲೇ 15 ಕ್ಕೂ ಜನ ಮೃತಪಟ್ಟಿದ್ದು, ಎಚ್ಚರಿಕೆಯಿಂದಿರಲು ಹವಾಮಾನ ಇಲಾಖೆ ಸೂಚನೆ ನೀಡಿದೆ.

ಭಾರತೀಯ ಹವಾಮಾನ ಇಲಾಖೆ(ಐಎಂಡಿ) ಪ್ರಕಾರ, ಮುಂದಿನ ನಾಲ್ಕು ದಿನಗಳವರೆಗೆ ಹಲವು ಜಿಲ್ಲೆಗಳಲ್ಲಿ ಮಳೆಯಾಗಲಿದ್ದು, ವಿಶೇಷವಾಗಿ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು ಹಾಗೂ ಚಿತ್ರದುರ್ಗ ಜಿಲ್ಲೆಯಲ್ಲಿ ಭಾರೀ ಮಳೆಯಾಗಲಿದೆ. ಇಂದಿನಿಂದ ಮೇ 21 ರವರೆಗೆ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಬೆಂಗಳೂರು ಜೊತೆಗೆ ದಕ್ಷಿಣ ಕನ್ನಡ, ಉಡುಪಿ, ಬಾಗಲಕೋಟೆ, ಧಾರವಾಡ, ಗದಗ, ಕೊಪ್ಪಳ, ವಿಜಯಪುರ, ಚಿಕ್ಕಬಳ್ಳಾಪುರ, ಮಂಡ್ಯ, ರಾಮನಗರ ತುಮಕೂರಿನಲ್ಲಿ ಇಂದು(ಶನಿವಾರ) ಭಾರೀ ಮಳೆಯಾಗುವ ಮುನ್ಸೂಚನೆ ಇದೆ. ವಿಶೇಷವಾಗಿ ತಗ್ಗು ಪ್ರದೇಶಗಳು ಮತ್ತು ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಜನರು ಅಗತ್ಯ ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳುವಂತೆ ಅಧಿಕಾರಿಗಳು ಸೂಚನೆ ನೀಡಿದ್ದಾರೆ. ಭಾರೀ ಮಳೆಯಿಂದಾಗಿ ಕೆಲವು ಸ್ಥಳಗಳಲ್ಲಿ ಸಂಚಾರ ವ್ಯತ್ಯಯ ಮತ್ತು ತಗ್ಗು ಪ್ರದೇಶಗಳಲ್ಲಿ ಮಳೆ ನೀರು ನಿಲ್ಲುವ ಸಾಧ್ಯತೆ ಇದೆ ಎನ್ನಲಾಗಿದೆ.

ಮುಂದಿನ 7 ದಿನಗಳ ರಾಜ್ಯದಾದ್ಯಂತ ಅಲ್ಲಲ್ಲಿ ಗುಡುಗು, ಮಿಂಚು ಸಹಿತ ಕರಾವಳಿ ಜಿಲ್ಲೆಗಳಲ್ಲಿ ಮಳೆಯಾಗಲಿದ್ದು, ಒಳನಾಡು ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆಯಿದೆ. ಇನ್ನೂ, ರಾಜ್ಯದಾದ್ಯಂತ ಗುಡುಗು, ಮಿಂಚು ಬಿರುಗಾಳಿ ಸಹಿತ ಗಾಳಿಯ ವೇಗ ಗಂಟೆಗೆ 40–50 ಕಿಮೀ ತಲುಪುವ ಸಾಧ್ಯತೆಯಿದೆ. ಮೇ 17 ರಿಂದ 20 ರವರೆಗೆ ಕರ್ನಾಟಕದ ಒಳನಾಡಿನ ಪ್ರತ್ಯೇಕ ಸ್ಥಳಗಳಲ್ಲಿ ಗಂಟೆಗೆ 40–50 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

# 1 ರಿಂದ 5ನೇ ತರಗತಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ತುಮಕೂರು :** ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಕಾರ್ಯ ನಿರ್ವಹಿಸುತ್ತಿರುವ ನಗರದ ವೀರಸಾಗರ ಬಡಾವಣೆಯ ಭಾರತ ರತ್ನ ಡಾ: ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಯಲ್ಲಿ 2025–26ನೇ ಸಾಲಿಗೆ 1 ರಿಂದ 5ನೇ ತರಗತಿಯಲ್ಲಿ ಖಾಲಿಯಿರುವ ಸ್ಥಾನಗಳಿಗೆ ಪ್ರವೇಶ ಕಲ್ಪಿಸಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಹಾಗೂ ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಅರ್ಜಿ ಸಲ್ಲಿಸಬಹುದಾಗಿದ್ದು, ಭರ್ತಿ ಮಾಡಿದ ಅರ್ಜಿಯನ್ನು ಸೂಕ್ತ ದಾಖಲೆಗಳೊಂದಿಗೆ ವಸತಿ ಮುಖ್ಯ ಶಿಕ್ಷಕರಿಗೆ ಮೇ 31ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು ಗ್ರೇಡ್–01, ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ, ತುಮಕೂರು ತಾಲ್ಲೂಕು ಅಥವಾ ಮೊ.ಸಂ. 9480843205/ 9141557734ನ್ನು ಸಂಪರ್ಕಿಸಬಹುದಾಗಿದೆ ಎಂದು ಸಹಾಯಕ ನಿರ್ದೇಶಕ(ಗ್ರೇಡ್–01)ರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮದ್ಯದ ದರ, ಸನ್ನದ ಶುಲ್ಕಗಳ ಏರಿಕೆ– ಅಶೋಕ್ ಆಕ್ರೋಶ

**ಬೆಂಗಳೂರು ಮೇ18 :** ಅಪಾಯಕಾರಿ ನೀತಿಗಳ ಮೂಲಕ ಅಬಕಾರಿ ಆದಾಯದ ಮೂಲಕ್ಕೆ ಕೊಡಲಿ ಪೆಟ್ಟು ನೀಡಲು ರಾಜ್ಯ ಸರ್ಕಾರ ಮುಂದಾಗಿದೆ ಎಂದು ವಿಧಾನಸಭೆ ಪ್ರತಿಪಕ್ಷದ ನಾಯಕರಾದ ಆರ್. ಅಶೋಕ್ ಆರೋಪಿಸಿದ್ದಾರೆ.

ಅವೈಜ್ಞಾನಿಕ ಆರ್ಥಿಕ ನೀತಿಗಳಿಂದ ದಿವಾಳಿ ಸ್ಥಿತಿ ತಲುಪಿರುವ ರಾಜ್ಯ ಸರ್ಕಾರ ಸಂಪನ್ಮೂಲ ಸಂಗ್ರಹಕ್ಕೆ ಅನುಸರಿಸುತ್ತಿರುವ ಮಾರ್ಗ ಉದ್ಯಮಕ್ಕೆ ಮಾರಕವಾಗಿದೆ ಎಂದು ಟೀಕಿಸಿದ್ದಾರೆ.

ದರ ಮತ್ತು ಸನ್ನದು ಶುಲ್ಕ ಏರಿಕೆಗೂ ಒಂದು ಮಾನದಂಡ ಇರುತ್ತದೆ. ಆದರೆ ಒಂದೇ ವರ್ಷದಲ್ಲಿ ಮದ್ಯ ಮಾರಾಟ ಮತ್ತು ಸನ್ನದು ಶುಲ್ಕವನ್ನು ಅಡ್ಡಾದಿಡ್ಡಿ ಹೆಚ್ಚಿಸುತ್ತಿರುವುದು ಉದ್ಯಮದ ಮೇಲೆ ಪ್ರತಿಕೂಲ ಪರಿಣಾಮ ಬೀರಲಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ಎಚ್ಚರಿಸಿದ್ದಾರೆ.

ಬಜೆಟ್‌ನಲ್ಲಿ ಯಾವುದೇ ತೆರಿಗೆ ಹಾಕಿಲ್ಲ ಎಂದು



ಬೆನ್ನು ತಟ್ಟಿಕೊಂಡು ನಂತರದಲ್ಲಿ ಆಲ್ಕೊಹಾಲ್ ದರಗಳನ್ನು ಯದ್ವಾತದ್ವಾ ಹೆಚ್ಚಿಸಿದ್ದಾರೆ. ಅದರಲ್ಲೂ ಬಿಯರ್ ದರವನ್ನು ವರ್ಷದಲ್ಲಿ ಎರಡೂ –ಮೂರು ಸಲ ಹೆಚ್ಚಿಸಲಾಗಿದೆ. ಗ್ರಾಹಕರಿಗೆ ದೊಡ್ಡ ಹೊರೆ ಹೊರಿಸಲಾಗಿದೆ. ಮದ್ಯಪ್ರಿಯರು ಪ್ರತಿಭಟಿಸುವುದಿಲ್ಲ ಎಂಬ ಕಾರಣಕ್ಕೆ ಇಂತಹ ಕ್ರಮ ಅನುಸರಿಸುವುದು ಒಳ್ಳೆಯದಲ್ಲ.

ಸರಿಯಾದ ಆರ್ಥಿಕ ಶಿಸ್ತು ಮತ್ತು ಸಿದ್ಧತೆಗಳಿಲ್ಲದೆ ಗ್ಯಾರೆಂಟಿ ಯೋಜನೆಗಳನ್ನು ಜಾರಿಗೊಳಿಸಲಾಯಿತು. ಇದರಿಂದ ಅಭಿವೃದ್ಧಿ ಕಾರ್ಯಕ್ರಮಗಳು ಸ್ಥಗಿತ ಗೊಂಡಿವೆ. ಬೊಕ್ಕಸ ಬರಿದಾಗಿ ಸರ್ಕಾರ ದಿವಾಳಿಯಾಗಿದೆ.

ಇದನ್ನು ಹೇಗಾದರೂ ಸರಿಪಡಿಸಿಕೊಳ್ಳಲು ಹೆಣಗುತ್ತಿರುವ ಸರ್ಕಾರ, ಸಿಕ್ಕ ಸಿಕ್ಕ ಎಲ್ಲ ವಸ್ತುಗಳ ದರ ಹೆಚ್ಚಳ ಮಾಡಿದೆ. ಆದರೂ ಪರಿಸ್ಥಿತಿ ಸುಧಾರಿಸುತ್ತಿಲ್ಲ. ಹೀಗಾಗಿ ಇಂತಹ ದರ ಮತ್ತು ಶುಲ್ಕ ಹೆಚ್ಚಳದಂತಹ ವಾಮ ಮಾರ್ಗಗಳ ಮೂಲಕ ಸರ್ಕಾರ ಉದ್ಯಮವನ್ನು ಶೋಷಣೆ ನಡೆಸುತ್ತಿದೆ ಎಂದು ಆರೋಪಿಸಿದ್ದಾರೆ.

ಮದ್ಯ ಉತ್ಪಾದನೆ, ಬಾಟ್ಲಿಂಗ್, ಮಾರಾಟ ಮಳಿಗೆಗಳು ಸೇರಿ ಎಲ್ಲ ಸ್ವರೂಪದ ಶುಲ್ಕಗಳನ್ನು ಶೇಕಡಾ ನೂರರಷ್ಟು ಹೆಚ್ಚಳಕ್ಕೆ ಮುಂದಾಗಿದೆ. ಇದಕ್ಕಾಗಿ ಅಬಕಾರಿ ಕಾನೂನುಗಳಿಗೆ ತಿದ್ದುಪಡಿ ಮಾಡಿ ಕರಡು ನಿಯಮಗಳ ಅಧಿಸೂಚನೆಯನ್ನು ಪ್ರಕಟಿಸಿದೆ. ಜುಲೈ 1 ರಿಂದ ಪರಿಷ್ಕೃತ ದರಗಳು ಜಾರಿಗೊಳ್ಳಲಿವೆ. ಆ ಮೂಲಕ ಉದ್ಯಮದ ಅಂತ್ಯಕ್ಕೆ ಮೊಳೆ ಹೊಡೆದಂತಾಗಲಿದೆ ಎಂದಿದ್ದಾರೆ.

ಇಲಾಖೆಗೆ 40 ಸಾವಿರ ಕೋಟಿಯ ಗುರಿ ನಿಗದಿ ಮಾಡಲಾಗಿದೆ. ಇದನ್ನು ತಲುಪಲು ಅಧಿಕಾರಿಗಳು ಇದ್ದಬದ್ದ ಎಲ್ಲಾ ಅವಕಾಶಗಳನ್ನು ಬಳಕೆ ಮಾಡುತ್ತಿದ್ದಾರೆ. ಆ ಮೂಲಕ ಉದ್ಯಮವನ್ನು ಸಂಕಷ್ಟಕ್ಕೆ ದೂಡಲಾಗುತ್ತಿದೆ ಎಂದು ಟೀಕಿಸಿದ್ದಾರೆ.

ಉದ್ಯಮದ ಹಿತದೃಷ್ಟಿಯಿಂದ ಸರ್ಕಾರ ಅವೈಜ್ಞಾನಿಕ ಕ್ರಮಗಳನ್ನು ಬಿಟ್ಟು ಉದ್ಯಮ, ಮಾರಾಟಗಾರರು ಮತ್ತು ಗ್ರಾಹಕರ ಹಿತದೃಷ್ಟಿಯಿಂದ ನಿರ್ಧಾರ ಕೈಗೊಳ್ಳಬೇಕು. ಸನ್ನದು ಶುಲ್ಕ ಪರಿಷ್ಕರಣೆಯನ್ನು ಮರು ಪರಿಶೀಲಿಸಬೇಕು ಎಂದು ಅಶೋಕ್ ಅವರು ಆಗ್ರಹಿಸಿದ್ದಾರೆ.

# ಕದನ ವಿರಾಮಕ್ಕೆ ಗಡುವಿಲ್ಲ



**ನವದೆಹಲಿ,ಮೇ18**–ಭಾರತ–ಪಾಕಿಸ್ತಾನ ನಡುವಿನ ಕದನ ವಿರಾಮ ಇಂದು ಕೊನೆಗೊಳ್ಳುತ್ತಿದೆ ಎಂಬ ವರದಿಗಳನ್ನು ತಳ್ಳಿ ಹಾಕಿರುವ ಭಾರತೀಯ ಸೇನೆ ಕದನ ವಿರಾಮ ಒಪ್ಪಂದಕ್ಕೆ 'ಅವಧಿ ಮುಕ್ತಾಯ ದಿನಾಂಕವಿಲ್ಲ' ಹಾಗೆಯೇ ಎರಡೂ ದೇಶಗಳ ಡಿಜಿಎಂಓ ಗಳ ಸಭೆಯೂ ಇಂದು ನಿಗದಿಯಾಗಿಲ್ಲ ಎಂದು ಸ್ಪಷ್ಟಪಡಿಸಿದೆ.

ಜಮ್ಮು–ಕಾಶ್ಮೀರದ ಪಹಲ್ಗಾಮ್ ಪ್ರಕರಣಕ್ಕೆ ಪ್ರತೀಕಾರವಾಗಿ ಭಾರತೀಯ ಸೇನೆ ನಡೆಸಿದ ಆಪರೇಷನ್ ಸಿಂಧೂರಮ ಮಿಲಿಟರಿ ಕಾರ್ಯಾಚರಣೆಯ ನಂತರ ಭಾರತ–ಪಾಕ್ ನಡುವೆ ಕದನ ವಿರಾಮ ಘೋಷಣೆಯಾಗಿತ್ತು. ಕದನ ವಿರಾಮದ ಬಳಿಕ ಕಳೆದ ಮೇ 12 ರಂದು ಭಾರತ–ಪಾಕ್‌ನ ಮಿಲಿಟರಿ ಕಾರ್ಯಾಚರಣೆ ಮಹಾನಿರ್ದೇಶಕರು (ಡಿಜಿಎಂಓ)ಗಳ ಸಭೆ ನಡೆದು ಗಡಿಯಲ್ಲಿ ಸೇನೆಯನ್ನು ಕಡಿತ ಮಾಡುವುದು ಹಾಗೂ ಭವಿಷ್ಯದಲ್ಲಿ ಮಿಲಿಟರಿ ಕಾರ್ಯಾಚರಣೆಯನ್ನು ನಿಲ್ಲಿಸುವ ಬಗ್ಗೆ ಚರ್ಚೆಗಳು ನಡೆದಿದ್ದವು.

ಭಾರತ–ಪಾಕ್‌ನ ಡಿಜಿಎಂಓ ಸಭೆಗಳ ನಂತರ ಕದನ ವಿರಾಮ ಇಂದಿಗೆ ಅಂತ್ಯವಾಗುತ್ತದೆ. ಮತ್ತೆ ಡಿಜಿಎಂಓಗಳ ಸಭೆ ಇಂದು ನಡೆಯಲಿದೆ ಎಂಬ ವರದಿಗಳು ಪ್ರಕಟವಾಗಿದ್ದವು. ಈ ವರದಿಗಳನ್ನು ತಳ್ಳಿ ಹಾಕಿರುವ ಭಾರತೀಯ ಸೇನೆ ಕದನವಿರಾಮಕ್ಕೆ ನಿರ್ದಿಷ್ಟ ಅವಧಿ ನಿಗದಿ ಮಾಡಿಲ್ಲ. ಕದನ ವಿರಾಮದ ಅವಧಿ ಮುಕ್ತಾಯ ದಿನಾಂಕವೂ ಇಲ್ಲ ಎಂದು ಸ್ಪಷ್ಟಪಡಿಸಿದೆ.

ಇಂದು ಎರಡೂ ದೇಶಗಳ ಡಿಜಿಎಂಓ ಗಳ ಸಭೆ ನಡೆಯಲಿದೆ ಎಂಬ ವರದಿಯನ್ನು ಸೇನೆ ಅಲ್ಲಗಳೆದಿದ್ದು, ಇಂದು ಯಾವುದೇ ಡಿಜಿಎಂಓಗಳ ಮಾತುಕತೆ ನಿಗದಿಯಾಗಿಲ್ಲ ಎಂದು ಸ್ಪಷ್ಟಪಡಿಸಿದೆ.

ಕದನವಿರಾಮದ ಬಗ್ಗೆ ಮೇ 12 ರಂದು ನಡೆದ ಡಿಜಿಎಂಓಗಳ ಸಂವಹನ ಜಾರಿಯಲ್ಲಿದೆ. ಯುದ್ಧ ವಿರಾಮದ ಮುಂದುವರಿಕೆಗೆ ಸಂಬಂಧಿಸಿದಂತೆ ಯಾವುದೇ ಮುಕ್ತಾಯ ದಿನಾಂಕ ಇಲ್ಲ ಎಂದು ಭಾರತೀಯ ಸೇನೆ ಪುನರುಚ್ಚರಿಸಿದೆ.

ಭಾರತ–ಪಾಕ್ ನಡುವಿನ ಮಿಲಿಟರಿ ಸಂಘರ್ಷದ ನಂತರ ಭಾರತದ ಡಿಜಿಎಂಓ ಲೆಫ್ಟಿನೆಂಟ್ ಜನರಲ್ ರಾಜುಗಾಯ್ ಹಾಗೂ ಪಾಕಿಸ್ತಾನದ ಡಿಜಿಎಂಓ ಮೇಜರ್ ಜನರಲ್ ಕಾಸಿಫ್ ಅಬ್ದುಲ್ಲ ಹಾಟ್‌ಲೈನ್‌ನಲ್ಲಿ ಮಾತುಕತೆ ನಡೆಸಿ ಗಡಿಯಲ್ಲಿನ ಉದ್ವಿಗ್ನ ವಾತಾವರಣವನ್ನು ತಿಳಿಗೊಳಿಸುವ ನಿಟ್ಟಿನಲ್ಲಿ ಕೆಲವೊಂದು ನಿರ್ಧಾರಗಳಿಗೆ ಬಂದಿದ್ದರು.

ಅದರಂತೆ ಗಡಿಯಲ್ಲಿನ ಉದ್ವಿಗ್ನತೆ ಕಡಿಮೆ ಮಾಡಲು ಸೇನೆ ಕಡಿತ, ಸೇನೆಯಲ್ಲಿ ಯಾವುದೇ ಅಪ್ರಚೋದಿತ ಗುಂಡಿನ ದಾಳಿಯನ್ನು ನಿಲ್ಲಿಸುವ ಸಂಬಂಧವೂ ಮಾತುಕತೆಗಳು ನಡೆದು ಕದನ ವಿರಾಮದ ಬದ್ಧತೆಯನ್ನು ತೋರಿದ್ದರು.

# ಯಳಗೋಡು ಗ್ರಾಮ ಪಂಚಾಯಿತಿ ಕ್ಷಯಮುಕ್ತ

**ಚಿತ್ರದುರ್ಗ:** ಚಿತ್ರದುರ್ಗ ತಾಲ್ಲೂಕಿನ ಯಳಗೋಡು ಗ್ರಾಮ ಪಂಚಾಯಿತಿ ಕ್ಷಯ ಮುಕ್ತ ಗ್ರಾಮ ಪಂಚಾಯಿತಿ ಎಂದು ಘೋಷಣೆ ಆಗಲು ಗ್ರಾಮ ಪಂಚಾಯಿತಿ ಕಾಳಜಿ, ಬದ್ಧತೆಯಿಂದ ಈ ಸಾಧನೆ ಸಾಧ್ಯವಾಗಿದೆ ಎಂದು ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಸಿ.ಓ.ಸುಧಾ ಹೇಳಿದರು.

ತಾಲ್ಲೂಕಿನ ಯಳಗೋಡು ಗ್ರಾಮ ಪಂಚಾಯಿತಿಯಲ್ಲಿ ಶನಿವಾರ ಏರ್ಪಡಿಸಲಾಗಿದ್ದ ಕ್ಷಯಮುಕ್ತ ಭಾರತ ಅಭಿನಂದನಾ ಕಾರ್ಯಕ್ರಮದಲ್ಲಿ ಯಳಗೋಡು ಗ್ರಾಮ ಪಂಚಾಯಿತಿಗೆ ಕಂಚಿನ ಲೇಪನದ ಮಹಾತ್ಮ ಗಾಂಧೀಜಿಯವರ ಪ್ರತಿಮೆ ಮತ್ತು ಅಭಿನಂದನ ಪತ್ರ ವಿತರಿಸಿ ಅವರು ಮಾತನಾಡಿದರು.

ಯಳಗೋಡು ಗ್ರಾಮ ಪಂಚಾಯಿತಿ ಕ್ಷಯ ಮುಕ್ತ ಆಗಲು ಈ ಗ್ರಾಮದಲ್ಲಿ ಒಂದು ಸಾವಿರ ಜನಸಂಖ್ಯೆಗೆ ವರ್ಷಕ್ಕೆ 30 ಜನರು ಕ್ಷಯ ಸಂಶಯಾಸ್ಪದ ರೋಗಿಗಳು ಆಗಿರುತ್ತಾರೆ. ಅವರನ್ನು ಕಫ ಪರೀಕ್ಷೆಗೆ ಒಳಪಡಿಸಿದಾಗ ಶೇ.1 ಕ್ಕಿಂತ ಕಡಿಮೆ ಕ್ಷಯ ರೋಗಿಗಳನ್ನು ಎಲ್ಲರ ಸಹಕಾರದಿಂದ ಕಂಡು ಹಿಡಿದಿದ್ದಾರೆ. ಹಾಗಾಗಿ ಯಳಗೋಡು ಗ್ರಾಮ ಪಂಚಾಯಿತಿಯು ಕ್ಷಯ ಮುಕ್ತ ಗ್ರಾಮ ಪಂಚಾಯಿತಿ ಎಂದು ಘೋಷಿಸಿರುತ್ತಾರೆ ಎಂದು ಹೇಳಿದರು.

ದೇಶದಲ್ಲಿ ಶೇ.40 ಜನರಿಗೆ ಕ್ಷಯದ ಸೋಂಕು ತಗಲಿರುತ್ತದೆ. ಆದರೆ ಅವರೆಲ್ಲ ಕ್ಷಯ ರೋಗಿಗಳಲ್ಲ. ಕ್ಷಯ ರೋಗದ ಲಕ್ಷಣಗಳು ಕಂಡು ಬಂದರೆ ಆಗ ಮಾತ್ರ ಕ್ಷಯರೋಗಿ ಎಂದು ಗುರುತಿಸಿ, ಅಂತಹವರಿಗೆ ಆರು ತಿಂಗಳ ಉಚಿತ ಚಿಕಿತ್ಸೆಯನ್ನು ನೀಡಿದರೆ ರೋಗವು ಗುಣಮುಖವಾಗಲು



ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕ್ಷಯ ರೋಗವು ಮೈಕೋ ಬ್ಯಾಕ್ಟೀರಿಯಂ ಟ್ಯೂಬರ್ ಕ್ಯೂಲೈ ಎಂಬ ಬ್ಯಾಕ್ಟೀರಿಯಾದಿಂದ ಹರಡುತ್ತದೆ. ಇದು ಗಾಳಿಯಿಂದ ಒಬ್ಬರಿಂದ ಒಬ್ಬರಿಗೆ ಹರಡುವ ಸಾಂಕ್ರಾಮಿಕ ರೋಗವಾಗಿರುತ್ತದೆ ಹಾಗೂ ಕ್ಷಯ ರೋಗವು ರೋಗ ನಿರೋಧಕ ಶಕ್ತಿ ಕಡಿಮೆ ಇರುವಂತಹ ಜನರಿಗೆ ಬೇಗನೆ ಹರಡುತ್ತದೆ. ಈ ರೋಗದ ರೋಗ ಲಕ್ಷಣಗಳು ಅಂದರೆ ಜ್ವರ ಬರುವುದು, ಒಂದು ವಾರಕ್ಕಿಂತ ಹೆಚ್ಚು ಕೆಮ್ಮು, ತೂಕ ಕಡಿಮೆಯಾಗುವುದು, ಸಂಜೆ ಹೊತ್ತಿನಲ್ಲಿ ಬೆವರುವುದು, ಜ್ವರ ಕಾಣಿಸುವುದು, ಹಸಿವಾಗದೆ ಇರುವುದು, ಎದೆ ನೋವು, ಕೆಮ್ಮುವಾಗ ಕಫದಲ್ಲಿ ರಕ್ತ ಬೀಳುವುದು ಈ ರೀತಿಯ ಹಲವು ಲಕ್ಷಣಗಳು ಕಂಡು ಬಂದಲ್ಲಿ ಶೀಘ್ರವಾಗಿ ಪರೀಕ್ಷಿಸಿ, ರೋಗ ಪತ್ತೆ ಹಚ್ಚಿದ ತಕ್ಷಣ ಆರು ತಿಂಗಳು ಉಚಿತ ಕ್ಷಯ ಚಿಕಿತ್ಸೆಯನ್ನು ನೀಡುವುದರ ಮುಖಾಂತರ ಕ್ಷಯ ರೋಗವನ್ನು ನಾಶ ಮಾಡಬಹುದು ಎಂದು ತಿಳಿಸಿದರು.

ತಂಬಾಕು ಸೇವನೆ ಸಿಗರೇಟು ಮದ್ಯಪಾನ, ಗುಟುಕ ಸೇವಿಸುವ ಜನರಲ್ಲಿ ರೋಗನಿರೋಧಕ ಶಕ್ತಿ ಕಡಿಮೆ ಇದ್ದು, ಅಂತಹವರಿಗೆ ಈ ರೋಗವು ಬೇಗನೆ ಹರಡುತ್ತದೆ ಮತ್ತು ಮಧುಮೇಹ ಕಾಯಿಲೆ ಇರುವವರೆಗೂ ಹಾಗೂ ಅಪೌಷ್ಟಿಕ ಕೊರತೆಯಿಂದ ಕೂಡ ಬಳಲುತ್ತಿರುವವರು ಬೇಗನೆ ಈ ಕ್ಷಯ ರೋಗಕ್ಕೆ ತುತ್ತಾಗುವ ಸಾಧ್ಯತೆ ಹೆಚ್ಚಿರುತ್ತದೆ. ಆದ್ದರಿಂದ ಈ ಮೇಲಿನ ಲಕ್ಷಣಗಳು ಕಂಡು ಬಂದಲ್ಲಿ ತಕ್ಷಣವೇ ಹಿಂಜರಿಯದೆ ಕಫ ಪರೀಕ್ಷೆ ಮಾಡಿಸಿಕೊಳ್ಳಿ ಎಂದು ತಿಳಿಸಿದರು.

ಗ್ರಾಮದ ಒಳಿತಿಗಾಗಿ ಗ್ರಾಮದ ಅಧ್ಯಕ್ಷರು, ಗ್ರಾಮ ಪಂಚಾಯಿತಿ ಸದಸ್ಯರು, ಯಾವುದೇ ಗ್ರಾಮ ಪಂಚಾಯಿತಿ ಸಭೆಯಲ್ಲಿ ಕ್ಷಯರೋಗದ ಬಗ್ಗೆ ಮುಕ್ತವಾಗಿ ಮಾತನಾಡಿ ಕ್ಷಯರೋಗದ ಬಗ್ಗೆ ಜಾಗೃತಿ ಮೂಡಿಸಿದರೆ ಮಾತ್ರ ಕ್ಷಯ ಮುಕ್ತ ಭಾರತ ಮಾಡಲು ಸಾಧ್ಯ ಎಂದು ತಿಳಿಸಿದರು. ಇದರಲ್ಲಿ ಸಮುದಾಯದ ಎಲ್ಲಾರ ಪಾತ್ರ ಹೆಚ್ಚಿರುತ್ತದೆ. ಹಾಗೂ ಅಂತರ್ ಇಲಾಖೆಯವರ ಸಹಕಾರ ಕೂಡ ಅಷ್ಟೇ ಪ್ರಾಮುಖ್ಯತೆ ಹೊಂದಿದೆ ಎಂದು ತಿಳಿಸಿದರು.

ಗ್ರಾಮ ಪಂಚಾಯಿತಿ ಸದಸ್ಯ ಬಸವರಾಜ್ ಮಾತನಾಡಿ, ಸಮುದಾಯದ ಪ್ರತಿಯೊಬ್ಬರಿಗೂ ಇನ್ನೂ ಹೆಚ್ಚಿನ ಜಾಗೃತಿ ಮೂಡಿಸಿ ಕ್ಷಯ ಮುಕ್ತ ಭಾರತ ಮಾಡೋಣ ಎಂದು ತಿಳಿಸಿದರು.

ಸಭೆಯಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಅನಿತಾ ನಾಗರಾಜ್, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪ್ರಹ್ಲಾದ್, ಗ್ರಾಮ ಪಂಚಾಯಿತಿ ಸದಸ್ಯರಾದ ಬಸವರಾಜ್, ರೆಹಮತ್ ಉಲ್ಲಾ, ಮಹಾಂತೇಶ್, ದಂಡೆಪ್ಪ, ವೆಂಕಟೇಶ್, ತಿಪ್ಪೇಸ್ವಾಮಿ ಮತ್ತು ವೈದ್ಯಾಧಿಕಾರಿ ಅಶ್ವಿನಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ, ಸಮುದಾಯ ಆರೋಗ್ಯ ಅಧಿಕಾರಿ ಶಾಲಿನಿ, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳಾದ ಜ್ಯೋತಿ, ವಿಜಯ್ ಕುಮಾರಿ, ಸುನಿತಾ, ಆರೋಗ್ಯ ನಿರೀಕ್ಷಣಾಧಿಕಾರಿ ಕುಚೇಲ. ಫಾರ್ಮಸಿ ಅಧಿಕಾರಿ ರಾಮರೆಡ್ಡಿ ಹಾಗೂ ಆಶಾ ಕಾರ್ಯಕರ್ತರು, ಗ್ರಾಮದ ಮುಖಂಡರು ಇದ್ದರು.

# ಭತ್ತಕ್ಕೆ ಕನಿಷ್ಠ ಬೆಂಬಲ ಬೆಲೆ ನಿಗದಿಗಾಗಿ ಆಗ್ರಹ



**ದಾವಣಗೆರೆ:** ಭತ್ತಕ್ಕೆ ಕನಿಷ್ಠ ಬೆಂಬಲ ಬೆಲೆ ನಿಗದಿಪಡಿಸುವಂತೆ ಸುಗ್ರೀವಾಜ್ಞೆ ಹೊರಡಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ (ಹುಚ್ಚವ್ವನಹಳ್ಳಿ ಮಂಜುನಾಥ್ ಬಣ) ನಿನ್ನೆ ಜಿಲ್ಲಾಧಿಕಾರಿಗಳ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿತು.

ನಗರದ ಜಯದೇವ ವೃತ್ತದಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆಯು ಎಪಿಎಂಸಿವರೆಗೆ ಸಾಗಿತು. ಅಲ್ಲಿ ಪ್ರತಿಭಟನಾಕಾರರು ಭತ್ತದ ಬೆಲೆ ಕುಸಿದಿರುವ ಬಗ್ಗೆ ಕಳವಳ ವ್ಯಕ್ತಪಡಿಸಿದರು. ಕೂಡಲೇ ಅಧಿಕಾರಿಗಳ ಸಭೆ ನಡೆಸಿ, ಭತ್ತವನ್ನು ಕ್ವಿಂಟಾಲ್‌ಗೆ 2320 ರೂ.ಗಿಂತ ಕಡಿಮೆ ದರಕ್ಕೆ ಖರೀದಿಸದಂತೆ ಸೂಚಿಸಬೇಕೆಂದು ಕಾರ್ಯದರ್ಶಿಯವರಿಗೆ ಒತ್ತಾಯಿಸಿದರು.

ನಂತರ ಜಿಲ್ಲಾಧಿಕಾರಿಗಳ ಕಚೇರಿಗೆ ಮುತ್ತಿಗೆ ಹಾಕಲಾಯಿತು. ಈ ಸಂದರ್ಭದಲ್ಲಿ ಪ್ರತಿಭಟನಾನಿರತರನ್ನುದ್ದೇಶಿಸಿ ಮಾತನಾಡಿದ ಸಂಘದ ರಾಜ್ಯಾಧ್ಯಕ್ಷ ಹುಚ್ಚವ್ವನಹಳ್ಳಿ ಮಂಜುನಾಥ್, ಕೇಂದ್ರ ಸರ್ಕಾರವು ಪ್ರತಿ ಕ್ವಿಂಟಾಲ್ ಭತ್ತಕ್ಕೆ 2320 ರೂ. ಕನಿಷ್ಠ ಬೆಂಬಲ ಬೆಲೆ ನಿಗದಿಪಡಿಸಿದ್ದರೂ, ಇದಕ್ಕೆ ಯಾವುದೇ ಕಾನೂನಿನ ಮಾನ್ಯತೆ ಇಲ್ಲ. ರೈತರು ಪ್ರತಿ ಎಕರೆಗೆ 6,000 ರೂ. ನಷ್ಟ ಅನುಭವಿಸಬೇಕಾಗುತ್ತದೆ ಎಂದು ಹೇಳಿದರು.

ರಾಜ್ಯ ಸರ್ಕಾರವು ಮಧ್ಯಪ್ರವೇಶಿಸಿ, ಕೇರಳ ಮಾದರಿಯಲ್ಲಿ ಪ್ರತಿ ಕ್ವಿಂಟಾಲ್ ಭತ್ತಕ್ಕೆ ರೂ. 1200 ಪ್ರೋತ್ಸಾಹ ಧನ ನೀಡಬೇಕು. ಕೇಂದ್ರದ ಕನಿಷ್ಠ ಬೆಂಬಲ ಬೆಲೆ ಮತ್ತು ರಾಜ್ಯ ಸರ್ಕಾರದ ಪ್ರೋತ್ಸಾಹ ಧನ ಸೇರಿ ಪ್ರತಿ ಕ್ವಿಂಟಾಲ್‌ಗೆ ರೂ. 3500 ನೀಡಬೇಕು. ಸುಗ್ರೀವಾಜ್ಞೆಯ ಮೂಲಕ ಕನಿಷ್ಠ ಬೆಂಬಲ ಬೆಲೆಗೆ ಕಾನೂನು ಜಾರಿಗೆ ತರಬೇಕು ಎಂದು ಆಗ್ರಹಿಸಿದರು.

ಮನವಿ ಸ್ವೀಕರಿಸಿದ ಹೆಚ್ಚುವರಿ ಜಿಲ್ಲಾಧಿಕಾರಿ ಲೋಕೇಶ್, ಈ ವಿಷಯವನ್ನು ಸರ್ಕಾರದ ಗಮನಕ್ಕೆ ತರುವುದಾಗಿ ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಹುಚ್ಚವ್ವನಹಳ್ಳಿ ಮಂಜುನಾಥ್, ಶುಕ್ರವಾರ ಮಾರುಕಟ್ಟೆಯಲ್ಲಿ ಕ್ವಿಂಟಾಲ್‌ಗೆ ರೂ. 2320 ಕ್ಕಿಂತ ಹೆಚ್ಚಿನ ದರ ಸಿಕ್ಕರೆ ಸರಿ, ಇಲ್ಲದಿದ್ದರೆ ಶನಿವಾರದಿಂದ ಎಲ್ಲಾ ಗ್ರಾಮಗಳಲ್ಲಿ ರಸ್ತೆ ತಡೆ ಚಳುವಳಿ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಪ್ರತಿಭಟನೆಯಲ್ಲಿ ಚಿನ್ನಸಮುದ್ರ ಭೀಮಾನಾಯ್ಕ, ಎಲೋದಹಳ್ಳಿ ರವಿಕುಮಾರ್, ಚಿಕ್ಕಮಲ್ಲನಹೊಳೆ ಚಿರಂಜೀವಿ, ರಾಜನಹಟ್ಟಿ ರಾಜು, ಹೂವಿನಮಡು ನಾಗರಾಜ್, ಚಿಕ್ಕತೊಗಲೇರಿ ನಟರಾಜ್, ಕೆಂಚಪ್ಪ, ನಿಂಗಪ್ಪ, ಯರನಾಗತಿಹಳ್ಳಿ ಪರಮೇಶ್ವರಪ್ಪ, ಕೈದಾಳ್ ವಸಂತಕುಮಾರ್, ಆಲೂರು ಪರಶುರಾಮ್, ಕಡರನಾಯಕನಹಳ್ಳಿ ಪ್ರಭು, ಅಸ್ತಪನಹಳ್ಳಿ ಗಂಡುಗಲಿ, ಕೋಲ್ಕುಂಟೆ ಬಸವರಾಜ್, ಕುಂದವಾಡ ದೊಡ್ಡಣ್ಣ, ಮಹೇಶ್, ಆಲೂರು ಪುಟ್ಟನಾಯ್ಕ್, ಕೊಡಗನೂರು ಭೀಮಣ್ಣ, ತಿಮ್ಮಣ್ಣ, ಹುಚ್ಚವ್ವನಹಳ್ಳಿ ಪ್ರಕಾಶ್ ಸೇರಿದಂತೆ ಅನೇಕ ರೈತ ಮುಖಂಡರು ಉಪಸ್ಥಿತರಿದ್ದರು.

# ಭದ್ರಾವತಿ – ಚಿಕ್ಕಜಾಜೂರು ನಡುವಿನ ರೈಲ್ವೆ ಹೊಸ ಮಾರ್ಗದ ಸಮೀಕ್ಷೆಗೆ ಮಂಜೂರಾತಿ

**ಹುಬ್ಬಳ್ಳಿ, ಮೇ 16** – ಕರ್ನಾಟಕದ ರೈಲು ಮೂಲಸೌಕರ್ಯವನ್ನು ಬಲಪಡಿಸುವ ಮಹತ್ವದ ಕ್ರಮದಲ್ಲಿ, ನೈಋತ್ಯ ರೈಲ್ವೆ ವಲಯದ ಅಡಿಯಲ್ಲಿ ಬರುವ ಎರಡು ಪ್ರಮುಖ ಹೊಸ ರೈಲು ಮಾರ್ಗಗಳ ಅಂತಿಮ ಸ್ಥಳ ಸಮೀಕ್ಷೆ ನಡೆಸಲು ರೈಲ್ವೆ ಮಂಡಳಿ ಅನುಮೋದನೆ ನೀಡಿದೆ.

ಆಲಮಟ್ಟಿ ಮತ್ತು ಯಾದಗಿರಿ ನಡುವೆ 162 ಕಿ.ಮೀ ಉದ್ದದ ಮಾರ್ಗವನ್ನು ನಿರ್ಮಿಸಲು ಸಮೀಕ್ಷೆ ನಡೆಸಲಾಗುವುದು. ಇದಕ್ಕಾಗಿ ರೂ. 4.05 ಕೋಟಿ ವೆಚ್ಚವನ್ನು ಮಂಜೂರು ಮಾಡಲಾಗಿದೆ. ಭದ್ರಾವತಿ ಮತ್ತು ಚಿಕ್ಕಜಾಜೂರು ನಡುವಿನ 73 ಕಿ.ಮೀ ಮಾರ್ಗವನ್ನು ಚನ್ನಗಿರಿ ಮೂಲಕ ಒಳಗೊಂಡಿರುತ್ತದೆ. ಇದರ ಅಂದಾಜು ವೆಚ್ಚ 1.825 ಕೋಟಿ ರೂ. ಒಟ್ಟಾರೆಯಾಗಿ, ಈ ಸಮೀಕ್ಷೆಗಳಿಗೆ ಅಂದಾಜು 5.875 ಕೋಟಿ ರೂ.ವೆಚ್ಚವಾಗಲಿದೆ.

ರಾಜ್ಯದಾದ್ಯಂತ ಸಂಪರ್ಕವನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ಪ್ರಮುಖ ರೈಲ್ವೆ ಯೋಜನೆಗಳ ಯೋಜನೆ ಮತ್ತು ಅಭಿವೃದ್ಧಿಯಲ್ಲಿ ಈ ಉಪಕ್ರಮವು ನಿರ್ಣಾಯಕ ಮೊದಲ ಹೆಜ್ಜೆಯಾಗಿದೆ.

ಪ್ರಸ್ತಾವಿತ ಆಲಮಟ್ಟಿ–ಯಾದಗಿರಿ ಮಾರ್ಗವು ಉತ್ತರ ಕರ್ನಾಟಕ ಮತ್ತು ಪ್ರಮುಖ ಆರ್ಥಿಕ ಕಾರಿಡಾರ್‌ಗಳ ನಡುವಿನ ಸಂಪರ್ಕವನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವುದರಿಂದ ಇದು ಕಾರ್ಯತಂತ್ರದ ಮಹತ್ವವನ್ನು ಹೊಂದಿದೆ.

ಆಲಮಟ್ಟಿ ತನ್ನ ಅಣೆಕಟ್ಟು ಮತ್ತು ಜಲವಿದ್ಯುತ್ ಉತ್ಪಾದನೆಗೆ ಹೆಸರುವಾಸಿಯಾಗಿದ್ದು, ಈ ಪ್ರದೇಶದ ಕೃಷಿ ಮತ್ತು ಇಂಧನ ವಲಯದಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಮತ್ತೊಂದೆಡೆ, ಯಾದಗಿರಿ ಹೈದರಾಬಾದ್–ಮುಂಬೈ ರೈಲು ಕಾರಿಡಾರ್‌ನಲ್ಲಿ ಒಂದು ಪ್ರಮುಖ ಜಂಕ್ಷನ್ ಆಗಿದೆ. ಈ ಎರಡೂ ಸ್ಥಳಗಳ ನಡುವಿನ ಸುಧಾರಿತ ರೈಲು ಸಂಪರ್ಕವು ಪ್ರಾದೇಶಿಕ ವ್ಯಾಪಾರ, ಸಾರಿಗೆ ಮತ್ತು ಸಂಪನ್ಮೂಲಗಳ ಲಭ್ಯತೆಯನ್ನು ಹೆಚ್ಚಿಸುತ್ತದೆ. ಅಂತೆಯೇ, ಭದ್ರಾವತಿ–ಚಿಕ್ಕಜಾಜೂರು ಮಾರ್ಗವು ಮಧ್ಯ ಕರ್ನಾಟಕದಲ್ಲಿ ರಾಜ್ಯದೊಳಗಿನ ಸಂಪರ್ಕವನ್ನು ಬಲಪಡಿಸುತ್ತದೆ.

ಉಕ್ಕು ಮತ್ತು ಕಾಗದ ಕೈಗಾರಿಕೆಗಳನ್ನು ಹೊಂದಿರುವ ಕೈಗಾರಿಕಾ ಪಟ್ಟಣವಾದ ಭದ್ರಾವತಿಯು ಕರ್ನಾಟಕದ ಹಲವಾರು ಭಾಗಗಳನ್ನು ಸಂಪರ್ಕಿಸುವ ಪ್ರಮುಖ ರೈಲ್ವೆ ಜಂಕ್ಷನ್ ಚಿಕ್ಕಜಾಜೂರಿಗೆ ನೇರ ಸಂಪರ್ಕವನ್ನು ಪಡೆಯುತ್ತದೆ. ಈ ಮಾರ್ಗವು ಸರಕು ಸಾಗಣೆ, ಕೈಗಾರಿಕಾ ಬೆಳವಣಿಗೆ ಮತ್ತು ಉತ್ತಮ ಪ್ರಯಾಣಿಕ ಸಂಪರ್ಕಕ್ಕೆ ಸಹಕಾರಿಯಾಗಲಿದೆ ಎಂದು ನಿರೀಕ್ಷಿಸಲಾಗಿದೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**